ಸಂಪುಟ-17 Volume-17 ಸಂಚಿಕೆ-177 Issue-177 ಶನಿವಾರ 25-07-2026 RNI No.KARKAN/2011/37445, Registered RNP/KA/BGS/2190/2025-27, KA/SK/MYS/1111/2024-26 ಬೆಂಗಳೂರು ಪುಟ-6 Page-6 Rs.2.00


● ಬೆಂಗಳೂರು ನಗರ
● ಬೆಂ.ಗ್ರಾಮಾಂತರ
● ಮೈಸೂರು
● ಚಾಮರಾಜನಗರ
● ಮಂಡ್ಯ
● ಕೋಲಾರ
● ಚಿಕ್ಕಬಳ್ಳಾಪುರ
● ರಾಮನಗರ
● ತುಮಕೂರು
● ಹಾಸನ

ನೈಜ ಹಾಗೂ ವಸ್ತು ನಿಷ್ಠ ಸುದ್ದಿಗಾಗಿ

ಪ್ರಾದೇಶಿಕ ಸಂಜೆ ದಿನಪತ್ರಿಕೆ

# ಸಂಜೆ ಸಮಯ

ಬೆಂಗಳೂರು ಮತ್ತು ಮೈಸೂರಿನಿಂದ ಏಕಕಾಲಕ್ಕೆ ಪ್ರಕಟಿತ

● ಸಂಪಾದಕರು: ಜಿ.ಹೆಚ್.ಅನಿಲ್‌ಕುಮಾರ್ ● ಇ-ಮೇಲ್: sanjesamaya@gmail.com ● ವೆಬ್‌ಸೈಟ್: www.sanjesamaya.com, ● Posted at Patrika Channel Bangalore PSO 560 026 Kannada Daily ● Post office Ramakrishnanagar mysore


## ಇನ್‌ಸ್ಟಾಗ್ರಾಮ್‌ನಲ್ಲಿ ೩೦ ಕೋಟಿ ವೀಕ್ಷಣೆ ದಾಟಿದ ವಿಡಿಯೋ: ನಿಮ್ಮ ಪ್ರೀತಿ-ಸಲಹೆಗಳು ಹೀಗೆ ಮುಂದುವರಿಯಲಿ;

# ಯುವ ಜನತೆಗೆ ಮೋದಿ ಧನ್ಯವಾದ

**ಸಂಜೆ ಸಮಯ ಸುದ್ದಿ (ಜುಲೈ 25)**

**ನವದೆಹಲಿ:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳ ಕುರಿತು ವ್ಯಕ್ತವಾದ ಬೆಂಬಲಕ್ಕೆ ಧನ್ಯವಾದ ತಿಳಿಸಿ ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ತಡರಾತ್ರಿ ಮತ್ತೊಂದು ವಿಡಿಯೋವನ್ನು ಹಂಚಿಕೊಂಡಿದ್ದಾರೆ. ಈ ವಿಡಿಯೋದಲ್ಲಿ ಯುವಜನತೆಯ ಪ್ರತಿಕ್ರಿಯೆ, ಮೌಲಿಕ ಸಲಹೆಯನ್ನು ಮೆಚ್ಚುವುದಾಗಿ ತಿಳಿಸಿದ್ದಾರೆ. ಪ್ರಶ್ನೆ ಪತ್ರಿಕೆ ಸೋರಿಕೆ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವುದಾಗಿ ಗುರುವಾರ ವಿಡಿಯೋ ಹಂಚಿಕೊಂಡಿದ್ದ ಪ್ರಧಾನಿ ಮೋದಿ, ಶುಕ್ರವಾರ ಕೂಡ ಮತ್ತೊಂದು ವಿಡಿಯೋವನ್ನು ಹಂಚಿಕೊಂಡಿದ್ದಾರೆ.



24 ಗಂಟೆ ಅವಧಿಯಲ್ಲಿ ಹಂಚಿಕೊಂಡ ಅವರ ಎರಡು ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ಸದ್ದು ಮಾಡುವ ಜೊತೆಗೆ ದಾಖಲೆ ನಿರ್ಮಿಸಿದೆ. ಇನ್‌ಸ್ಟಾಗ್ರಾಂನಲ್ಲಿ 303 ಮಿಲಿಯನ್ ವೀಕ್ಷಣೆಯನ್ನು ಪಡೆದು. 16 ಮಿಲಿಯನ್ ಲೈಕ್ಸ್, 1.5 ಮಿಲಿಯನ್ ಕಮೆಂಟ್ ಪಡೆದಿದೆ. ಅಲ್ಲದೇ ಒಂದೇ ರಾತ್ರಿಯಲ್ಲಿ ಇನ್‌ಸ್ಟಾಗ್ರಾಂನಲ್ಲಿ 1 ಮಿಲಿಯನ್ ಹೊಸ ಫಾಲೋವರ್ಸ್‌ಗಳನ್ನು ಪಡೆದುಕೊಂಡಿದ್ದಾರೆ.

ಈ ವೈರಲ್ ರೀಲ್, ಫಿಫಾ ವಿಶ್ವಕಪ್ ಸಮಯದಲ್ಲಿ ಬಿಟಿಎಸ್ ಹಂಚಿಕೊಂಡಿದ್ದ ಯೂಟ್ಯೂಬರ್ ಐಶೋಸ್ಪೀಡ್ (IShowSpeed) ಅವರ ರೀಲ್ ಹೊಂದಿದ್ದ ಸುಮಾರು 300 ಮಿಲಿಯನ್ ವೀಕ್ಷಣೆಗಳ ದಾಖಲೆಯನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಮೀರಿಸಿದೆ.

ಶುಕ್ರವಾರ ಹಂಚಿಕೊಂಡ ವಿಡಿಯೋದಲ್ಲಿ ಥ್ಯಾಂಕ್‌ಯು ಫ್ರೆಂಡ್ಸ್ ಎಂದು ಮಾತನ್ನು ಆರಂಭಿಸಿರುವ ಅವರು, ಹಿಂದಿನ ಸಂದೇಶವನ್ನು ವೀಕ್ಷಿಸಿದ ಹಾಗೂ ತಮ್ಮ ಸಲಹೆಗಳನ್ನು ಹಂಚಿಕೊಂಡ ವೀಕ್ಷಕರಿಗೆ, ಅದರಲ್ಲೂ ವಿಶೇಷವಾಗಿ ಯುವಜನರಿಗೆ ಧನ್ಯವಾದ ಅರ್ಪಿಸಿದ್ದಾರೆ. ಆ ರೀಲ್ ಕ್ಯಾಪ್ಷನ್‌ನಲ್ಲಿ, ನಿನ್ನೆ ನನ್ನ ವಿಡಿಯೋವನ್ನು ವೀಕ್ಷಿಸಿ, ಅರ್ಥಪೂರ್ಣ ಸಲಹೆಗಳನ್ನು ಕಳುಹಿಸಿದ ಯುವಜನರಿಗೆ ಧನ್ಯವಾದಗಳು ಎಂದು ಅವರು ತಿಳಿಸಿದ್ದಾರೆ.

ನೀಟ್ ಸೇರಿದಂತೆ ಇತರ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಪ್ರಶ್ನೆಪತ್ರಿಕೆ ಸೋರಿಕೆ ಆರೋಪಗಳ ಕುರಿತು ದೇಶದಲ್ಲಿ ತೀವ್ರ ಚರ್ಚೆ ನಡೆಯುತ್ತಿರುವ ಹಾಗೂ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಮತ್ತು ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆಗಳನ್ನು ಆಗ್ರಹಿಸಿ ಕಾಕ್ರೋಚ್ ಜನತಾ ಪಾರ್ಟಿ ನೇತೃತ್ವದಲ್ಲಿ ವಿದ್ಯಾರ್ಥಿಗಳು ದೆಹಲಿಯ ಜಂತರ್ ಮಂತರ್ ಸೇರಿದಂತೆ ಹಲವೆಡೆ ಪ್ರತಿಭಟನೆ ನಡೆಸುತ್ತಿರುವ ಸಂದರ್ಭದಲ್ಲೇ ಪ್ರಧಾನಿಯವರ ಈ ವಿಡಿಯೋಗಳು ಹೊರ ಬಂದಿದ್ದು, ಭಾರಿ ಸದ್ದು ಮಾಡುತ್ತಿವೆ. ಗುರುವಾರ ಹಂಚಿಕೊಂಡ ಮೊದಲ ಸೆಲ್ಫಿ ವಿಡಿಯೋದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಸಾಮಾನ್ಯ ವಿಷಯವಲ್ಲ ಎಂಬುದು ನನಗೆ ತಿಳಿದಿದೆ. ಲಕ್ಷಾಂತರ ವಿದ್ಯಾರ್ಥಿಗಳು ಮತ್ತು ಅವರ ಪೋಷಕರಿಗೆ ಇದು ಅತ್ಯಂತ ನೋವಿನ ಸಂಗತಿಯಾಗಿದೆ. ಈ ನಿಟ್ಟಿನಲ್ಲಿ ಕಳೆದ ಎರಡೂವರೆ ತಿಂಗಳುಗಳಲ್ಲಿ ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ. ಇದಕ್ಕೆ ಕಾರಣರಾದವರನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿದೆ. ಪ್ರಕರಣಗಳಿಗಾಗಿ ತ್ವರಿತಗತಿ ನ್ಯಾಯಾಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆಯ ಆಧಾರದ ಮೇಲೆ, ಅದರ ಕರಡನ್ನು ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಪ್ರಧಾನಿ ತಿಳಿಸಿದ್ದರು.

## ಟೈಫಾಯ್ಡ್‌ಗೂ ಜಗ್ಗದ ದೀಪ್ಕೆ ಹೋರಾಟ; ಪ್ರಧಾನ್ ರಾಜೀನಾಮೆ ತನಕ ಪ್ರತಿಭಟನೆ ಮುಂದುವರಿಕೆ ಪಣ

**ಸಂಜೆ ಸಮಯ ಸುದ್ದಿ (ಜುಲೈ 25)**

**ನವದೆಹಲಿ:** ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಸಂಸ್ಥಾಪಕ ಅಭಿಜೀತ್ ದೀಪ್ಕೆ ಅವರಿಗೆ ಟೈಫಾಯ್ಡ್ ದೃಢಪಟ್ಟಿದ್ದರೂ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ ನಡೆಯುತ್ತಿರುವ ಹೋರಾಟ ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಶನಿವಾರ ಸಾಮಾಜಿಕ ಜಾಲತಾಣದಲ್ಲಿ ವಿಡಿಯೊ ಸಂದೇಶ ಹಂಚಿಕೊಂಡಿರುವ ದೀಪ್ಕೆ, ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದೇನೆ. ವೈದ್ಯಕೀಯ ಪರೀಕ್ಷೆಯಲ್ಲಿ ಟೈಫಾಯ್ಡ್ ದೃಢಪಟ್ಟಿದ್ದು, ಚಿಕಿತ್ಸೆ ಪಡೆಯುತ್ತಿದ್ದೇನೆ ಎಂದು ತಿಳಿಸಿದ್ದಾರೆ.

## 'NEET ಪ್ರಶ್ನೆಪತ್ರಿಕೆ ಸೋರಿಕೆಯಿಂದ ಮೊದಲು ನೋವಾಯಿತು, ನಂತರ ಅದನ್ನು ಅವಕಾಶವಾಗಿ ಬಳಸಿಕೊಂಡೆ' ಎನ್ನುವ ವಿದ್ಯಾರ್ಥಿಗಳಿದ್ದಾರೆ: ನಿರ್ಮಲಾ ಸೀತಾರಾಮನ್

**ಸಂಜೆ ಸಮಯ ಸುದ್ದಿ (ಜುಲೈ 25)**

**ನವದೆಹಲಿ:** ನೀಟ್ ಸೇರಿದಂತೆ ವಿವಿಧ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಅನೇಕ ವಿದ್ಯಾರ್ಥಿಗಳು ಅದನ್ನು ಅವಕಾಶವಾಗಿ ಬಳಸಿಕೊಂಡು ತಮ್ಮ ಸಾಧನೆಯನ್ನು ಉತ್ತಮಪಡಿಸಿಕೊಂಡಿದ್ದಾರೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೀಡಿರುವ ಹೇಳಿಕೆ ವೈರಲ್ ಆಗಿದೆ.

ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ಪ್ರತಿಭಟನೆ ಕುರಿತು ಕೇಳಿದ ಪ್ರಶ್ನೆಗೆ ಎಎನ್‌ಐ ಸುದ್ದಿಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಉತ್ತರಿಸಿದ ಅವರು, ಪರೀಕ್ಷೆಗಳ ಪಾವಿತ್ರ್ಯವನ್ನು ಹಾಳು ಮಾಡಿದವರ ವಿರುದ್ಧ ತ್ವರಿತ ನ್ಯಾಯ ಒದಗಿಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದ್ದಾರೆ ಎಂದು ಹೇಳಿದರು.

ಮೊದಲಿಗೆ ಪ್ರಶ್ನೆಪತ್ರಿಕೆ ಸೋರಿಕೆಯಾದಾಗ ನೋವಾಯಿತು. ಆದರೆ ನಂತರ ಅದನ್ನೇ ಒಂದು ಅವಕಾಶವಾಗಿ ಬಳಸಿಕೊಂಡು ಇನ್ನಷ್ಟು ಉತ್ತಮವಾಗಿ ಕೆಲ ವಿದ್ಯಾರ್ಥಿಗಳು ಸಿದ್ಧತೆ ನಡೆಸಿದರು. ಇದರಿಂದ ನನ್ನ ಸಾಧನೆ ಉತ್ತಮವಾಯಿತು ಎಂದು ಕೆಲವು ಯುವಕರು ಹೇಳುತ್ತಿದ್ದಾರೆ. ಈ ಸವಾಲನ್ನು ಸ್ವೀಕರಿಸಿ ಯಶಸ್ವಿಯಾಗಿರುವ ಯುವಕರೂ ಇದ್ದಾರೆ. ಈ ಎಲ್ಲದರ ನಡುವೆ ಸರ್ಕಾರ ಮತ್ತು ಪ್ರಧಾನಿ ಪರಿಸ್ಥಿತಿಗೆ ಸ್ಪಂದಿಸುತ್ತಿದ್ದಾರೆ ಎಂದು ಹೇಳಿದರು.

## ದೆಹಲಿ ಪ್ರತಿಭಟನೆ-ಹಿಂಸಾಚಾರ ಪ್ರಕರಣ: 2500 ಜನರ ಹಿನ್ನೆಲೆ ಪರಿಶೀಲನೆ, ಕ್ರಿಮಿನಲ್ ಹಿನ್ನೆಲೆಯುಳ್ಳ 400 ಜನರ ಪತ್ತೆ: ಮುಂದುವರಿದ ತನಿಖೆ

**ಸಂಜೆ ಸಮಯ ಸುದ್ದಿ (ಜುಲೈ 25)**

**ನವದೆಹಲಿ:** ಜುಲೈ 20 ರಂದು ಚಲೋ ಸಂಸತ್ ರ್‍ಯಾಲಿ ವೇಳೆ ನಡೆದ ಹಿಂಸಾಚಾರದ ತನಿಖೆಯನ್ನು ದೆಹಲಿ ಪೊಲೀಸರು ತೀವ್ರಗೊಳಿಸಿದ್ದಾರೆ. ಪ್ರಕರಣದ ತನಿಖೆ ನಡೆಸುತ್ತಿರುವ ತಂಡಗಳು ಇದುವರೆಗೆ ಸುಮಾರು 2,500 ವ್ಯಕ್ತಿಗಳ ವಿವರಗಳನ್ನು ಪರಿಶೀಲನೆ ನಡೆಸಿವೆ. ತನಿಖೆಯ ಸಮಯದಲ್ಲಿ ಈ ಹಿಂದೆ ಕ್ರಿಮಿನಲ್ ದಾಖಲೆಗಳನ್ನು ಹೊಂದಿದ್ದ ಸುಮಾರು 400 ವ್ಯಕ್ತಿಗಳನ್ನು ಗುರುತಿಸಲಾಗಿದೆ. ಹಿಂಸಾಚಾರದಲ್ಲಿ ಅವರ ಪಾತ್ರ ಏನು ಹಾಗೂ ಈ ಬಗ್ಗೆ ಪೂರ್ವಯೋಜಿತ ಸಂಚು ರೂಪಿಸಲಾಗಿತ್ತಾ ಎಂಬ ಬಗ್ಗೆ ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

ಕ್ರಿಮಿನಲ್ ದಾಖಲೆ ಮಾತ್ರ ವ್ಯಕ್ತಿಯ ವಿರುದ್ಧ ಕ್ರಮ ಕೈಗೊಳ್ಳಲು ಆಧಾರವಾಗುವುದಿಲ್ಲ ಎಂದು ಇದೇ ವೇಳೆ ದೆಹಲಿ ಪೊಲೀಸರು ವಾದಿಸಿದ್ದಾರೆ. ಲಭ್ಯವಿರುವ ಸಾಕ್ಷ್ಯಗಳ ಆಧಾರದ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ. ತನಿಖೆಗಾಗಿ ದೆಹಲಿ ಪೊಲೀಸರು ಸಿಸಿಟಿವಿ ಕ್ಯಾಮೆರಾಗಳು,




AI ಆಧಾರಿತ ಕಣ್ಗಾವಲು ವ್ಯವಸ್ಥೆಗಳು, ಡ್ರೋನ್ ದೃಶ್ಯಗಳು, ಮೊಬೈಲ್ ಫೋನ್ ವಿಡಿಯೋಗಳು, ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳು ಮತ್ತು ಇತರ ಡಿಜಿಟಲ್ ಪುರಾವೆಗಳನ್ನು ವಿಶ್ಲೇಷಿಸುತ್ತಿದ್ದಾರೆ.

ಹೆಚ್ಚಿನ ಬಂಧನಗಳಾಗಬಹುದು: ಹಿಂಸಾಚಾರದ ಸಮಯದಲ್ಲಿ ಬ್ಯಾರಿಕೇಡ್‌ಗಳನ್ನು ಮುರಿಯುವುದು, ಪೊಲೀಸ್ ಅಧಿಕಾರಿಗಳ ಮೇಲೆ ದಾಳಿ ಮಾಡುವುದು, ಕಲ್ಲು ತೂರಾಟ ಮತ್ತು ಸರ್ಕಾರಿ ಆಸ್ತಿಗೆ ಹಾನಿ ಮಾಡುವಂತಹ ಘಟನೆಗಳಲ್ಲಿ ಭಾಗಿಯಾಗಿರುವವರನ್ನು ಗುರುತಿಸಲಾಗುತ್ತಿದೆ. ದೃಶ್ಯಾವಳಿ ಮತ್ತು ಇತರ ತಾಂತ್ರಿಕ ಪುರಾವೆಗಳನ್ನು ಹೊಂದಿಸಿದ ನಂತರ ಶಂಕಿತರನ್ನು ವಿಚಾರಣೆಗೆ ಕರೆಯಲಾಗುತ್ತಿದೆ. ಅಗತ್ಯವಿದ್ದರೆ ಬಂಧನಗಳನ್ನು ಸಹ ಮಾಡಲಾಗುವುದು ಎಂದು ದೆಹಲಿ ಪೊಲೀಸ್ ಮೂಲಗಳು ತಿಳಿಸಿವೆ. ಪರಿಶೀಲನಾ ಅಭಿಯಾನವು ಹಿಂಸಾಚಾರದಲ್ಲಿ ಸಕ್ರಿಯವಾಗಿ ಭಾಗಿಯಾಗಿರುವವರನ್ನು ಗುರುತಿಸುವ ಗುರಿಯನ್ನು ಮಾತ್ರ ಹೊಂದಿದೆ. ಶಾಂತಿಯುತ ಪ್ರತಿಭಟನೆಗಳಲ್ಲಿ ಭಾಗಿಯಾಗಿರುವವರು ಮತ್ತು ಹಿಂಸಾತ್ಮಕ ಚಟುವಟಿಕೆಗಳಲ್ಲಿ ಭಾಗಿಯಾಗಿರುವವರ ನಡುವೆ ಸ್ಪಷ್ಟವಾದ ವ್ಯತ್ಯಾಸವನ್ನು ಗುರುತಿಸಲಾಗುತ್ತಿದೆ. ಇವುಗಳ ಆಧಾರದ ಮೇಲೆ ವಿವಿಧ ಪ್ರಕರಣಗಳಲ್ಲಿ ಈಗಾಗಲೇ ದಾಖಲಾಗಿರುವ ಎಫ್‌ಐಆರ್‌ಗಳ ತನಿಖೆಯನ್ನು ಮುಂದುವರಿಸಲಾಗುತ್ತಿದೆ. ಹೊಸ ಪುರಾವೆಗಳು ಕಂಡುಬಂದರೆ ಹೆಚ್ಚುವರಿ ಕಾನೂನು ಕ್ರಮ ಕೈಗೊಳ್ಳಬಹುದು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

AI ವಿಡಿಯೋದ ಬಗ್ಗೆಯೂ ತನಿಖೆ: ಏತನ್ಮಧ್ಯೆ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಸಂಸತ್ತಿನ ಮೆರವಣಿಗೆಗೆ ಸಂಬಂಧಿಸಿದ ವಿಡಿಯೋದ ಬಗ್ಗೆ ಗಂಭೀರವಾದ ಹೇಳಿಕೆ ನೀಡಿದ್ದಾರೆ. ಸಂಸತ್ತಿನ ಸಂಕೀರ್ಣದ ಹೊರಗೆ ಮಾಧ್ಯಮಗಳಿಗೆ ಅವರು ಮಾಡಿದ ನಿಜವಾದ ಹೇಳಿಕೆಗಳನ್ನು ಡೀಪ್‌ಫೇಕ್ ವಿಡಿಯೋ ರಚಿಸಲು AI ಬಳಸಿ ದುರುದ್ದೇಶಪೂರ್ವಕವಾಗಿ ಸಂಪಾದಿಸಲಾಗಿದೆ ಎಂದು ಅವರು ಹೇಳಿದರು. ತಪ್ಪು ಮಾಹಿತಿ ಹರಡುವ ಉದ್ದೇಶದಿಂದ ಇದನ್ನು ಸಾಮಾಜಿಕ ಮಾಧ್ಯಮದಲ್ಲಿ ಪ್ರಸಾರ ಮಾಡಲಾಗಿದೆ.

## ಐಎಎಸ್ ಅಧಿಕಾರಿಗಳ ವರ್ಗಾವಣೆ

**ಸಂಜೆ ಸಮಯ ಸುದ್ದಿ (ಜುಲೈ 25)**

ಬೆಂಗಳೂರು: ಮೂವರು ಐಎಎಸ್ ಅಧಿಕಾರಿಗಳನ್ನು ವರ್ಗಾವಣೆಗೊಳಿಸಿ ಸರ್ಕಾರ ಆದೇಶ ಹೊರಡಿಸಿದೆ. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತ ರವಿ ಕುಮಾರ್ ಎಂ.ಆರ್., ಐಎಎಸ್ ಅವರನ್ನು, 31.07.2026 ರಂದು ಸೇವೆಯಿಂದ ನಿವೃತ್ತರಾಗುತ್ತಿರುವ ಡಾ. ರವಿ ಎಂ.ಆರ್., ಐಎಎಸ್ ಅವರ ಸ್ಥಾನಕ್ಕೆ, ಕೋಲಾರ ಜಿಲ್ಲೆಯ ಉಪ ಆಯುಕ್ತರನ್ನಾಗಿ 01.08.2026 ರಿಂದ ಜಾರಿಗೆ ಬರುವಂತೆ ವರ್ಗಾಯಿಸಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ ಬೆಂಗಳೂರು ಇದರ ವ್ಯವಸ್ಥಾಪಕ ನಿರ್ದೇಶಕ ರಾಹುಲ್ ರತ್ನಂ ಪಾಂಡೆ, ಐಎಎಸ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ, ವರ್ಗಾವಣೆಗೊಂಡಿರುವ ರವಿಚಂದ್ರ ನಾಯಕ್, ಕೆಎಎಸ್ ಅವರ ಸ್ಥಾನಕ್ಕೆ ಮಂಗಳೂರು ಮಹಾನಗರ ಪಾಲಿಕೆಯ ಆಯುಕ್ತರನ್ನಾಗಿ ವರ್ಗಾಯಿಸಿ ನೇಮಿಸಲಾಗಿದೆ. ಸ್ಥಳ ನಿಯೋಜನೆಯ ನಿರೀಕ್ಷೆಯಲ್ಲಿದ್ದ ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ಜಂಟಿ ನಿರ್ದೇಶಕ ಎ.ಆರ್. ರವಿ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ, ವರ್ಗಾವಣೆಗೊಂಡಿರುವ ರಾಹುಲ್ ರತ್ನಂ ಪಾಂಡೆ, ಐಎಎಸ್ ಅವರ ಸ್ಥಾನಕ್ಕೆ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ ಬೆಂಗಳೂರು ಇದರ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ,

## ಉಡುಪಿಯಲ್ಲಿ ಮಳೆ ಮುನ್ಸೂಚನೆ: ಇಂದು ಶಾಲೆಗಳಿಗೆ ರಜೆ ಘೋಷಣೆ

**ಸಂಜೆ ಸಮಯ ಸುದ್ದಿ (ಜುಲೈ 25)**

**ಉಡುಪಿ:** ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಮಳೆಯಾಗುತ್ತಿದ್ದು, ರಾಜ್ಯ ಹವಾಮಾನ ಇಲಾಖೆಯ ಆರೆಂಜ್ ಅಲರ್ಟ್ ಮುನ್ಸೂಚನೆಯಂತೆ ಮಳೆಯ ತೀವ್ರತೆ ಹೆಚ್ಚಾಗುವುದರಿಂದ ಮುಂಜಾಗ್ರತಾ ಕ್ರಮವಾಗಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಇಂದು (ಶನಿವಾರ) ಜಿಲ್ಲೆಯ ಎಲ್ಲಾ ಅಂಗನವಾಡಿ, ಸರಕಾರಿ, ಅನುದಾನಿತ, ಖಾಸಗಿ ಪ್ರಾಥಮಿಕ, ಪ್ರೌಢ ಶಾಲಾ, ಪದವಿ ಪೂರ್ವ, ಡಿಪ್ಲೊಮಾ ಹಾಗೂ ಐಟಿಐ ವಿದ್ಯಾರ್ಥಿಗಳಿಗೆ ರಜೆ ಘೋಷಿಸಲಾಗಿದೆ.

ಉಳಿದಂತೆ ಪದವಿ, ಸ್ನಾತಕೊತ್ತರ ಪದವಿ, ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ರಜೆ ಇರುವುದಿಲ್ಲ.

ಕಾಲೇಜುಗಳಲ್ಲಿ ಪಾಠ ನಡೆಸುವಾಗ ಈ ಕೆಳಕಂಡ ಅಂಶಗಳನ್ನು ಪರಿಗಣಿಸುವಂತೆ ಕಾಲೇಜುಗಳ ಮುಖ್ಯಸ್ಥರಿಗೆ ಹಾಗೂ ಸಂಬಂಧಪಟ್ಟವರಿಗೆ ಸಾಮಾನ್ಯ ಸೂಚನೆ ನೀಡಲಾಗಿದೆ.

## ಸತ್ಯಾಗ್ರಹ ನಡೆಸುತ್ತಿರುವ ವಿದ್ಯಾರ್ಥಿಗಳೊಂದಿಗೆ ರಾಹುಲ್ ಗಾಂಧಿ ಚರ್ಚೆ:

## ಶಿಕ್ಷಣ ಸಚಿವರ ರಾಜೀನಾಮೆಯೇ ವಿದ್ಯಾರ್ಥಿಗಳ ಬೇಡಿಕೆ ಎಂದು ಪ್ರತಿಪಕ್ಷ ನಾಯಕ ರಾಹುಲ್

**ಸಂಜೆ ಸಮಯ ಸುದ್ದಿ (ಜುಲೈ 25)**

**ನವದೆಹಲಿ:** ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಜಂತರ್ ಮಂತರ್‌ನಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಿದ್ಯಾರ್ಥಿಗಳನ್ನು ಭೇಟಿಯಾದರು. ಈ ವೇಳೆ ಆರ್‌ಎಸ್‌ಎಸ್ ಮತ್ತು ಭಾರತದ ಶಿಕ್ಷಣ ವ್ಯವಸ್ಥೆ ವಶಪಡಿಸಿಕೊಳ್ಳುವಿಕೆ ಎಂಬ ವಿಷಯದ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಚರ್ಚಿಸಿದೆ ಎಂದು ರಾಹುಲ್ ಗಾಂಧಿ ಸುದ್ದಿಗೋಷ್ಠಿಯಲ್ಲಿ ಬಹಿರಂಗಪಡಿಸಿದರು.



ಉಪವಾಸ ಸತ್ಯಾಗ್ರಹ ನಡೆಸಿದ್ದ ನಮ್ಮ ವಿದ್ಯಾರ್ಥಿಗಳು ಭೇಟಿಯಾದೆ ಮತ್ತು ಚರ್ಚೆ ನಡೆಸಿದೆ. ನಾವು ಚಳವಳಿ, ಆರ್‌ಎಸ್‌ಎಸ್ ಮತ್ತು ಭಾರತದ ಶಿಕ್ಷಣ ವ್ಯವಸ್ಥೆಯನ್ನು ಹೇಗೆ ವಶಪಡಿಸಿಕೊಳ್ಳಲಾಗಿದೆ ಎಂಬುದರ ಬಗ್ಗೆ ಮಾತನಾಡಿದೆವು ಎಂದು ರಾಹುಲ್ ಗಾಂಧಿ ಹೇಳಿದರು. ನೀಟ್ ಪತ್ರಿಕೆ ಸೋರಿಕೆಯ ಕುರಿತು ವಿದ್ಯಾರ್ಥಿಗಳ ಕಳವಳಗಳನ್ನು ಪರಿಹರಿಸುವ ಕೆಲಸ ತುರ್ತಾಗಿ ಆಗಬೇಕಿದೆ ಎಂದು ಪ್ರತಿಪಾದಿಸಿದರು. ಶಿಕ್ಷಣದಲ್ಲಿ ಸಮಗ್ರತೆ ಮತ್ತು ನ್ಯಾಯಸಮ್ಮತತೆ ಪುನಃಸ್ಥಾಪಿಸಲು ಸುಧಾರಣೆಗಳಿಗೆ ಕರೆ ನೀಡಿದರು. ಅಷ್ಟೇ ಅಲ್ಲ ಭಾರತದಲ್ಲಿ ಪ್ರಜಾಪ್ರಭುತ್ವ ಮೌಲ್ಯಗಳಿಗಾಗಿ ವಿಶಾಲ ಹೋರಾಟದ ಅಗತ್ಯವನ್ನು ಅವರು ಒತ್ತಿ ಹೇಳಿದರು. ಶಿಕ್ಷಣ ಸಚಿವರ ರಾಜೀನಾಮೆಯೇ ವಿದ್ಯಾರ್ಥಿಗಳ ಪ್ರಮುಖ ಬೇಡಿಕೆ: ನೀಟ್ ಪತ್ರಿಕೆ ಸೋರಿಕೆ ವಿವಾದದ ಕುರಿತು ಜಂತರ್ ಮಂತರ್‌ನಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಿದ್ಯಾರ್ಥಿಗಳನ್ನು ಭೇಟಿ ಮಾಡಿದ ನಂತರ ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಗಳೇನು ಎಂಬುದನ್ನು ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿದರು. ವಿದ್ಯಾರ್ಥಿಗಳು ಮೂರು ಪ್ರಮುಖ ಬೇಡಿಕೆಗಳನ್ನು ಹೊಂದಿದ್ದಾರೆ. ಮೊದಲ ಬೇಡಿಕೆಯೆಂದರೆ, ಭ್ರಷ್ಟ, ಅಸಮರ್ಥ ಮತ್ತು ಆ ಪಾತ್ರಕ್ಕೆ ಅನರ್ಹರಾಗಿರುವ ಶಿಕ್ಷಣ ಸಚಿವರನ್ನು ಹುದ್ದೆಯಿಂದ ತೆಗೆದುಹಾಕಬೇಕು ಎಂಬುದಾಗಿದೆ ಎಂದು ಹೇಳಿದರು.

ಸರ್ಕಾರವು ಸ್ಪರ್ಧಾತ್ಮಕ ಪರೀಕ್ಷೆಗಳ ಸಮಗ್ರತೆಯನ್ನು ರಕ್ಷಿಸುವಲ್ಲಿ ವಿಫಲವಾಗಿದೆ ಎಂದು ಇದೇ ವೇಳೆ ರಾಹುಲ್ ಆರೋಪಿಸಿದರು.

## ಶ್ರೀ ಸಹಸ್ರಾರ ಯೋಗೀಶ್ವರ ಸ್ವಾಮಿ ಮಹಾಪೀಠದಿಂದ ಬೆಂಗಳೂರಿನಲ್ಲಿ ರಾಷ್ಟ್ರೀಯ ಸನ್ಮಾನ ಸಮಾರಂಭದೊಂದಿಗೆ ಗುರು ಪೂರ್ಣಿಮೆ 2026 ಆಚರಣೆ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂಗಳೂರು:** 2016ರಲ್ಲಿ ಸ್ಥಾಪಿತವಾದ ನೋಂದಾಯಿತ ಲಾಭರಹಿತ ಸಂಸ್ಥೆಯಾದ 'ಶ್ರೀ ಸಹಸ್ರಾರ ಯೋಗೀಶ್ವರ ಸ್ವಾಮಿ ಮಹಾಪೀಠ' (SSYSM), 2026ರ ಜುಲೈ 29ರಂದು ಬೆಂಗಳೂರಿನಲ್ಲಿ ಗುರು ಪೂರ್ಣಿಮೆ 2026 ಅನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಿದೆ. ಈ ಸಂದರ್ಭದಲ್ಲಿ ಭವ್ಯ ಆಧ್ಯಾತ್ಮಿಕ ಕೂಟ ಹಾಗೂ ಸಮಾಜಕ್ಕೆ ಗಣನೀಯ ಕೊಡುಗೆ ನೀಡಿದ ವಿವಿಧ ಕ್ಷೇತ್ರಗಳ ಗಣ್ಯರನ್ನು ಗೌರವಿಸುವ ಪ್ರತಿಷ್ಠಿತ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

596 ಕ್ರಿ.ಶ. ಇತಿಹಾಸವಿರುವ ಅವಧೂತ ಸಿದ್ಧ ಪರಂಪರೆಯ 'ಶಾಶ್ವತ ಸುವರ್ಣ ವೃಕ್ಷ'ದ 45ನೇ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀಮತ್ ಪರಮಹಂಸ ಪರಿವ್ರಾಜಕಾಚಾರ್ಯ ಶ್ರೀ ಶ್ರೀ ಶ್ರೀ ಯೋಗೀಶ್ವರ ಸ್ವಾಮೀಜಿಯವರ ದಿವ್ಯ ನೇತೃತ್ವದಲ್ಲಿ ಈ ಮಹಾಪೀಠವು ಕಾರ್ಯನಿರ್ವಹಿಸುತ್ತಿದೆ. ಸನಾತನ ಧರ್ಮದ ತತ್ವಗಳ ಮಾರ್ಗದರ್ಶನದಲ್ಲಿ ಈ ಸಂಸ್ಥೆಯು ಶೈಕ್ಷಣಿಕ ವಿದ್ಯಾರ್ಥಿವೇತನಗಳು, 10 ಮತ್ತು 12ನೇ ತರಗತಿಯ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುಸ್ತಕ ಹಾಗೂ ಲ್ಯಾಪ್‌ಟಾಪ್ ವಿತರಣೆ, ಉಚಿತ ಆನ್‌ಲೈನ್ ಯೋಗ ಮತ್ತು ಧ್ಯಾನ ಕಾರ್ಯಕ್ರಮಗಳು, ಬಡವರು ಹಾಗೂ ಹಿರಿಯ ನಾಗರಿಕರಿಗೆ ವೈದ್ಯಕೀಯ ನೆರವು, ಸಾಪ್ತಾಹಿಕ ಅನ್ನದಾನ ಹಾಗೂ ಭಾರತ ಮತ್ತು ವಿದೇಶಗಳಲ್ಲಿ ಸಾರ್ವಜನಿಕ ಆಧ್ಯಾತ್ಮಿಕ ಸಂವಾದ ಮತ್ತು ದರ್ಶನ ಕಾರ್ಯಕ್ರಮಗಳ ಮೂಲಕ ಸಮಾಜ ಸೇವೆ ಸಲ್ಲಿಸುತ್ತಿದೆ.



ತಮ್ಮ ರಾಷ್ಟ್ರವ್ಯಾಪಿ ಆಧ್ಯಾತ್ಮಿಕ ಮಿಷನ್‌ನ ಭಾಗವಾಗಿ, ಪೂಜ್ಯ ಸ್ವಾಮೀಜಿಯವರು ಪ್ರತಿ ತಿಂಗಳು ಸುಮಾರು 4,000ರಿಂದ 5,000 ಕಿಲೋಮೀಟರ್‌ಗಳಷ್ಟು ಸಂಚರಿಸಿ, ಸಮಾಜದ ಎಲ್ಲಾ ವರ್ಗದ ಜನರನ್ನು ಭೇಟಿಯಾಗಿ ಪ್ರವಚನಗಳು, ಧ್ಯಾನ ಹಾಗೂ ಮಾನವೀಯ ಸೇವೆಗಳ ಮೂಲಕ ಸನಾತನ ಧರ್ಮದ ಸಾರ್ವಕಾಲಿಕ ಮೌಲ್ಯಗಳನ್ನು ಬಿತ್ತುತ್ತಿದ್ದಾರೆ.

ಪೂಜ್ಯ ಸ್ವಾಮೀಜಿಯವರು 'ಪೆಂಗ್ವಿನ್ ರಾಂಡಮ್ ಹೌಸ್ ಇಂಡಿಯಾ' ಪ್ರಕಾಶನದ ಮೂಲಕ 2026ರ ಮೇ 7ರಂದು ಬಿಡುಗಡೆಯಾದ 'ದಿ ವಂಡರರ್ ಹೂ ಓನ್ಸ್ ದಿ ವರ್ಲ್ಡ್' (The Wanderer Who Owns The World) ಎಂಬ ವ್ಯಾಪಕ ಮೆಚ್ಚುಗೆಗೆ ಪಾತ್ರವಾಗಿರುವ ಪುಸ್ತಕದ ಲೇಖಕರೂ ಆಗಿದ್ದಾರೆ. ಈ ಪುಸ್ತಕವು ಪ್ರಸ್ತುತ ವಿವಿಧ ಭಾರತೀಯ ಪ್ರಾದೇಶಿಕ ಭಾಷೆಗಳಿಗೆ ಅನುವಾದಗೊಳ್ಳುತ್ತಿದೆ. ಅಲ್ಲದೆ, ಪರಿಹಾರ ವಾಸ್ತುಶಿಲ್ಪಿ ವಿಕಾಸ್ ಪಿ. ಹೆಗಡೆ ಅವರ ನೇತೃತ್ವದಲ್ಲಿ ಇವರ ಸ್ಫೂರ್ತಿದಾಯಕ ಜೀವನ ಪಯಣವನ್ನು ಕುರಿತಾದ 'ದಿ ವಾಕ್ ವಿಥಿನ್ ಫೈರ್' (The Walk Within Fire) ಎಂಬ ಜೀವಚಿತ್ರಣವೂ ಮೂಡಿಬಂದಿದ್ದು, ಇದರ ಕನ್ನಡ ಆವೃತ್ತಿಯು ಈಗಾಗಲೇ ಲಭ್ಯವಿದೆ.

ಪೂಜ್ಯ ಸ್ವಾಮೀಜಿಯವರ ಜೀವನ ಪಯಣದ ವಿಶೇಷತೆಯೆಂದರೆ, ಆಧ್ಯಾತ್ಮಿಕ ನಾಯಕತ್ವ ಹಾಗೂ ವೃತ್ತಿಪರ ನೈಪುಣ್ಯತೆಯ ಅಪರೂಪದ ಸಂಗಮ. ಆಧ್ಯಾತ್ಮಿಕ ಸೇವೆಗೆ ತಮ್ಮನ್ನು ಸಂಪೂರ್ಣವಾಗಿ ಅರ್ಪಿಸಿಕೊಳ್ಳುವ ಮೊದಲು, ಅವರು ವಿವಿಧ ಕ್ಷೇತ್ರಗಳಲ್ಲಿ ಯಶಸ್ವಿ ವೃತ್ತಿಜೀವನವನ್ನು ಹೊಂದಿದ್ದರು. ಆಹಾರ ಮತ್ತು ಪಾನೀಯ ನಿಯಂತ್ರಕರಾಗಿ (F&B Controller) ಆತಿಥ್ಯ ಮತ್ತು ವ್ಯಾಪಾರ ನಿರ್ವಹಣೆ; ಒಳಾಂಗಣ ವಿನ್ಯಾಸಕಾರರಾಗಿ, ವಾಸ್ತುಶಿಲ್ಪ ಸಹಾಯಕರಾಗಿ, ವಾಸ್ತುಶಿಲ್ಪಿಯಾಗಿ ಮತ್ತು ಪರಿಕಲ್ಪನಾ ವಿನ್ಯಾಸ ವ್ಯವಸ್ಥಾಪಕರಾಗಿ ವಾಸ್ತುಶಿಲ್ಪ, ಎಂಜಿನಿಯರಿಂಗ್ ಮತ್ತು ವಿನ್ಯಾಸ ಕ್ಷೇತ್ರದಲ್ಲಿ (ದುಬೈನಲ್ಲಿ ವಾಸ್ತುಶಿಲ್ಪ ಶ್ರೇಷ್ಠತೆಗಾಗಿ ಚಿನ್ನದ ಪದಕ ಪಡೆದಿದ್ದಾರೆ); ಖಾಸಗಿ ಪೈಲಟ್ ಪರವಾನಗಿ (PPL) ಹೊಂದಿರುವವರಾಗಿ ವಿಮಾನಯಾನ ಕ್ಷೇತ್ರ; ಸಹ ಪ್ರಾಧ್ಯಾಪಕರು ಮತ್ತು ಪ್ರಾಧ್ಯಾಪಕರಾಗಿ ಶಿಕ್ಷಣ ಕ್ಷೇತ್ರ; ಹಾಗೂ ನಿರ್ದೇಶಕರು ಮತ್ತು ಅಧ್ಯಕ್ಷರಾಗಿ ಕಾರ್ಯನಿರ್ವಾಹಕ ನಾಯಕತ್ವದಲ್ಲಿ ಸೇವೆ ಸಲ್ಲಿಸಿದ್ದಾರೆ. ಗುರು ಪೂರ್ಣಿಮೆ ಆಚರಣೆಯು ದೇಶದ ಮೂಲೆ ಮೂಲೆಗಳಿಂದ ಆಗಮಿಸುವ ಭಕ್ತರು, ವಿದ್ವಾಂಸರು, ವೃತ್ತಿಪರರು, ಸಾಮಾಜಿಕ ನಾಯಕರು ಹಾಗೂ ಹಿತೈಷಿಗಳನ್ನು ಒಂದೆಡೆ ಸೇರಿಸಲಿದೆ. ಈ ಕಾರ್ಯಕ್ರಮದಲ್ಲಿ ತಮ್ಮ ತಮ್ಮ ಕ್ಷೇತ್ರಗಳಲ್ಲಿ ಸಮಾಜಕ್ಕೆ ಅರ್ಥಪೂರ್ಣ ಕೊಡುಗೆ ನೀಡಿದ ಗಣ್ಯ ಸಾಧಕರನ್ನು ಗುರುತಿಸಿ ಗೌರವಿಸಲಾಗುತ್ತದೆ.

ಸೇವೆ, ನಾಯಕತ್ವ ಮತ್ತು ಮಾನವೀಯತೆಯ ಶ್ರೇಷ್ಠತೆಯನ್ನು ಗೌರವಿಸುವ ಈ ಪವಿತ್ರ ಗುರು ಪೂರ್ಣಿಮಾ ಮಹೋತ್ಸವದಲ್ಲಿ ಭಾಗವಹಿಸುವಂತೆ ಭಕ್ತರು, ಸಾರ್ವಜನಿಕರು, ಗಣ್ಯರು ಹಾಗೂ ಮಾಧ್ಯಮ ಪ್ರತಿನಿಧಿಗಳನ್ನು 'ಶ್ರೀ ಸಹಸ್ರಾರ ಯೋಗೀಶ್ವರ ಸ್ವಾಮಿ ಮಹಾಪೀಠ'ವು ಪ್ರೀತಿಯಿಂದ ಆಹ್ವಾನಿಸುತ್ತದೆ.

ಸ್ಥಳ – ಶ್ರೀ ಕುಚಲಾಂಬಾ ಕಲ್ಯಾಣ ಮಹಲ್

ದಿನಾಂಕ – 29 ಜುಲೈ 2026

ಈಗಲೇ ನೋಂದಾಯಿಸಿ – **www.sriyogi.site**



ಖಜಾನೆ ಇಲಾಖೆಯ ಮೈಸೂರು ಕಂದಾಯ ವಿಭಾಗದ ಜಂಟಿ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡ ವಿ. ಹರಿನಾಥ್ ಭಾಬು ಅವರನ್ನು ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಟಿ. ಸತೀಶ್ ಜವರೇಗೌಡ ಅಭಿನಂದಿಸಿದರು. ಈ ಸಂದರ್ಭದಲ್ಲಿ ಮೈಸೂರು ಉಪವಿಭಾಗಾಧಿಕಾರಿ ಆಶಾಪ್ಪ ಪೂಜಾರ್, ಪತ್ರಕರ್ತ ಜೀವನ್ಮುಖಿ ಸುರೇಶ್ ಉಪಸ್ಥಿತರಿದ್ದರು.

## ಶತ್ರು ಮಿತ್ರ ಕೀಟ ಹಾಗೂ ತರಕಾರಿಯಲ್ಲಿ ಕೀಟ ನಿರ್ವಹಣೆ ಕುರಿತು ರೈತರಿಗೆ ಉಚಿತ ತರಬೇತಿ

**ಸಂಜೆ ಸಮಯ ಸುದ್ದಿ (ಜುಲೈ 25) ಬೆಂಗಳೂರು ನಗರ ಜಿಲ್ಲೆ:** ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕಿನ ರಾಮಕೃಷ್ಣಪುರ, ಜಿಲ್ಲಾ ಕೃಷಿ ತರಬೇತಿ ಕೇಂದ್ರ ಆರ್.ಕೆ.ಶಾಲಾವತಿಯಿಂದ ಜುಲೈ 27 ರಂದು ಬೆಳಿಗ್ಗೆ 10 ಗಂಟೆಗೆ ರೈತರಿಗೆ ಶತ್ರು ಮತ್ತು ಮಿತ್ರ ಕೀಟ ಹಾಗೂ ತರಕಾರಿಯಲ್ಲಿ ಕೀಟ ನಿರ್ವಹಣೆ ಕುರಿತು ಒಂದು ದಿನದ ಉಚಿತ ತರಬೇತಿ ಕಾರ್ಯಕ್ರಮವನ್ನು ಕೊಡ್ಲಿಪುರ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನ ಅತ್ತಿಬೆಲೆ ಹೋಬಳಿ ಆನೇಕಲ್ ತಾಲ್ಲೂಕಿನ ಅತ್ತಿಬೆಲೆ ಹೋಬಳಿಯ ಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಕೀಟಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ರಾಮೇಗೌಡ ಅವರು ಶತ್ರು ಹಾಗೂ ಮಿತ್ರ ಕೀಟಗಳ ಮಹತ್ವ, ಬೆಳೆ ಸಂರಕ್ಷಣೆಯಲ್ಲಿ ಅವುಗಳ ಪಾತ್ರ ಮತ್ತು ತರಕಾರಿ ಬೆಳೆಗಳಲ್ಲಿ ವೈಜ್ಞಾನಿಕ ಕೀಟ ನಿರ್ವಹಣೆಯ ಕುರಿತು ಮಾಹಿತಿ ನೀಡಲಿದ್ದಾರೆ. ಇದೇ ವೇಳೆ ಕೃಷಿ ಇಲಾಖೆಯ ಅಧಿಕಾರಿಗಳು ಇಲಾಖೆಯ ವಿವಿಧ ಯೋಜನೆಗಳು, ಬೆಳೆ ವಿಮೆ ಹಾಗೂ ಪರ್ಯಾಯ ಬೆಳೆ ಯೋಜನೆಗಳ ಕುರಿತು ರೈತರಿಗೆ ಮಾಹಿತಿ ನೀಡಲಿದ್ದಾರೆ. ತರಬೇತಿಯಲ್ಲಿ ಭಾಗವಹಿಸಲು ಆಸಕ್ತ ರೈತರು ಹಾಗೂ ರೈತ ಮಹಿಳೆಯರು ದೂರವಾಣಿ ಸಂಖ್ಯೆ 6363695621 ಅನ್ನು ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಬಹುದು. ತರಬೇತಿಗೆ ಹಾಜರಾಗುವವರು ಫ್ರೂಟ್ಸ್ ಐಡಿ (FID) ಅಥವಾ ಆಧಾರ್ ಕಾರ್ಡ್ ಕಡ್ಡಾಯವಾಗಿ ತರಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಣ್ಣುಮಕ್ಕಳು ಸ್ವ-ಉದ್ಯಮಿಯಾಗಬೇಕು

## ರಫ್ತು ಪ್ರಚಾರದ ಕಾರ್ಯಾಗಾರ ಮತ್ತು ರಫ್ತು ಪ್ರಚಾರ ಮಿಷನ್ ರಫ್ತು ಕೇಂದ್ರ ಉಪಕ್ರಮವಾಗಿ ಜಿಲ್ಲೆ-ಎಫ್‌ಟಿಎ ಔಟ್ರೀಚ್ ಕಾರ್ಯಕ್ರಮವನ್ನು ಉದ್ಘಾಟಿಸಿದ ಡಿಸಿ

**ಸಂಜೆ ಸಮಯ ಸುದ್ದಿ (ಜುಲೈ 25)**

ಹಾಸನ: ಪ್ರತಿಯೊಂದು ಹೆಣ್ಣುಮಕ್ಕಳು ಯಾರ ಮೇಲು ಅವಲಂಬಿತರಾಗದೆ ಸ್ವ-ಉದ್ಯೋಗವನ್ನು ಆರಂಭಿಸಿ ಆರ್ಥಿಕವಾಗಿ ಸಬಲೀಕರಣ ಹೊಂದಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಅವರು ತಿಳಿಸಿದ್ದಾರೆ.

ಭಾರತೀಯ ರಫ್ತು ಸಂಸ್ಥೆಗಳ ಒಕ್ಕೂಟ, ಕರ್ನಾಟಕ ಅಧ್ಯಾಯನದ ಸಹಯೋಗದೊಂದಿಗೆ ರಫ್ತು ಪ್ರಚಾರ ಮಿಷನ್ (ಇಪಿಎಂ), ಟ್ರೇಡ್ ಕನೆಕ್ಟ್ ಇ-ಪ್ಲಾಟ್‌ಫಾರ್ಮ್, ಜಿಲ್ಲಾ ರಫ್ತು ಕೇಂದ್ರಗಳು, ಈಖಿಂ ಔಟ್ರೀಚ್ ಪ್ರೋಗ್ರಾಂ (ಯುಕೆ, ಇಯು, ಓಮನ್, ಆಸ್ಟ್ರೇಲಿಯಾ ಮತ್ತು ಯುಎಇ) ನಿರ್ಯತ್ ಬಂಧು ಯೋಜನೆಯಡಿಯಲ್ಲಿ ಇಂದು ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನ ಸಂಭಾಗಣದಲ್ಲಿ ಆಯೋಜಿಸಿದ ರಫ್ತು ಪ್ರಚಾರದ ಕಾರ್ಯಾಗಾರ ಮತ್ತು ರಫ್ತು ಪ್ರಚಾರ ಮಿಷನ್ ರಫ್ತು ಕೇಂದ್ರ ಉಪಕ್ರಮವಾಗಿ ಜಿಲ್ಲೆ-ಎಫ್‌ಟಿಎ ಔಟ್ರೀಚ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಆಧುನಿಕ ಯುಗದಲ್ಲಿ ಸ್ವಂತ ಉದ್ಯೋಗ ಮಾಡಲು ಸಾವಿರಾರು ಅವಕಾಶಗಳಿವೆ, ಕೃಷಿ ಆಧಾರಿತ ಉದ್ಯಮಗಳು, ಹೈನುಗಾರಿಕೆ,




ಹಾಗೂ ಯಾವುದೇ ಸಣ್ಣ, ದೊಡ್ಡ ಉದ್ಯೋಗ ಆರಂಭಿಸಬಹುದು ಎಂದರು.

ಸಾವಿರಾರು ಜನ ಸ್ನಾತಕೋತ್ತರ ಪದವಿ ಪಡೆದರು ಸಹ ಶೇಕಡ 2% ಜನ ಮಾತ್ರ ಸರ್ಕಾರಿ ಹುದ್ದೆ ಪಡೆಯುತ್ತಿದ್ದಾರೆ ಆದ್ದರಿಂದ ಯುವಕ ಯುವತಿಯರು ತಮ್ಮದೇ ಆದ ಸ್ವಂತ ಉದ್ಯೋಗವನ್ನು ಪ್ರಾರಂಭಿಸಬೇಕು ಎಂದು ತಿಳಿಸಿದರು.

ಹಾಸನ ಜಿಲ್ಲೆಯಲ್ಲಿ 10.900 ಕೈಗಾರಿಕಾ ಸಂಸ್ಥೆಗಳು ಇದ್ದು, 1.10.000 ಜನರಿಗೆ ಉದ್ಯೋಗ ನೀಡಿದ್ದಾರೆ ಹಾಗೂ ಉದ್ಯಮಿದಾರರು ಆರ್ಥಿಕವಾಗಿ ಸ್ವಾವಲಂಬನೆ ಹೊಂದುತ್ತಿದ್ದಾರೆ ಎಂದು ಹೇಳಿದರು.

ಹಾಸನ ಜಿಲ್ಲೆಯಲ್ಲಿ 54 ಸಾವಿರ ಕೋಟಿಯಷ್ಟು ಸರಕು ವಿದೇಶಗಳಿಗೆ ರಫ್ತು ಆಗುತ್ತಿದ್ದು ಇನ್ನುಷ್ಟು ಅಧಿಕವಾಗಿ ಸರಕುಗಳು ರಫ್ತು ಆಗಬೇಕು ಎಂದು ತಿಳಿಸಿದರು.

ಸಣ್ಣ ಮತ್ತು ದೊಡ್ಡ ಉದ್ಯಮಗಳು ಅಂತರಾಷ್ಟ್ರೀಯ ಮಟ್ಟಕ್ಕೆ ಬೆಳೆಯುವುದಕ್ಕೆ ಈ ಕಾರ್ಯಾಗಾರ ಸುವರ್ಣ ಅವಕಾಶವಾಗಿದೆ, ಆದ್ದರಿಂದ ಈ ಕಾರ್ಯಗಾರದ ಸದುಪಯೋಗವನ್ನು ಪ್ರತಿಯೊಬ್ಬರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಹೊಸದಾಗಿ ಸ್ವಂತ ಉದ್ಯೋಗ ಸ್ಥಾಪನೆ ಮಾಡುವ ಅಭ್ಯರ್ಥಿಗಳಿಗೆ, ರೈತರು ಹಾಗೂ ಹಳೆಯ ಉದ್ಯಮಿದಾರರ ಯಾವುದೇ ಸಮಸ್ಯೆಗಳು ಇದ್ದಲ್ಲಿ ಈ ಕಾರ್ಯಾಗಾರದಲ್ಲಿ ಪರಿಹಾರ ಕಂಡು ಕೊಳ್ಳಬಹುದಾಗಿದೆ ಎಂದು ಹೇಳಿದರು. ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನಲ್ಲಿ ವಿಶೇಷವಾದ ಕಾಫಿ ಬೀಜಗಳು ಹಾಗೂ ಸಾಂಬಾರ್ ಪದಾರ್ಥಗಳು ಅಂತರಾಷ್ಟ್ರೀಯ ಮಟ್ಟದಲ್ಲಿ ರಫ್ತು ಆಗುತ್ತಿದ್ದು, ರೈತರು ಹಾಗೂ ರೈತ ಮಹಿಳೆಯರು ಸಣ್ಣ ಉದ್ಯಮವನ್ನು ಆರಂಭಿಸಿದ್ದಾರೆ, ಮುಂದೆ ಆರ್ಥಿಕವಾಗಿ ಸಬಲೀಕರಣ ಹೊಂದಬಹುದು ಎಂದು ತಿಳಿಸಿದರು. ಕಾರ್ಯಾಗಾರದಲ್ಲಿ ಮುಖ್ಯವಾಗಿ ಉದ್ಯಮಿದಾರರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಯಾವ ರೀತಿ ಸರಕುಗಳನ್ನು ರಫ್ತು ಮಾಡಬೇಕು ಎಂಬುವುದನ್ನು ತಿಳಿಯುವ ಒಂದು ವೇದಿಕೆ ಇದಾಗಿದೆ ಎಂದು ಹೇಳಿದರು.

FIEO ಕರ್ನಾಟಕ ಅಧ್ಯಾಯದ, ಐಟಿಎಸ್ ಸಹಾಯಕ ಡಿಜಿಎಫ್‌ಟಿ ಕಚೇರಿಯ ನಿರ್ದೇಶಕರಾದ ಆದರ್ಶ್ ಕೆ. ಅವರು ಕಾರ್ಯಕ್ರಮನ್ನು ಕುರಿತು ಮಾತನಾಡಿದರು. ಕೈಗಾರಿಕ ಜಂಟಿ ಕೃಷಿ ನಿರ್ದೇಶಕರು ಉಮೇಶ್ ವಿ ಹಾಗೂ ಮತ್ತಿತರು ಉಪಸ್ಥಿದ್ದರು.

## ಆರ್ಥಿಕ ಬೆಳವಣಿಗೆ ಇನ್ಮುಂದೆ ಬರೀ ಬೆಂಗಳೂರಿಗಷ್ಟೇ ಸೀಮಿತವಲ್ಲ: ಕೋಟಕ್

**ಸಂಜೆ ಸಮಯ ಸುದ್ದಿ (ಜುಲೈ 25)**

ಕರ್ನಾಟಕದ ಉದಯೋನ್ಮುಖ ವಾಣಿಜ್ಯ ಕೇಂದ್ರಗಳಲ್ಲಿನ ಆರ್ಥಿಕ ಚಟುವಟಿಕೆಗಳು ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳಿಗೆ (ಎಸ್‌ಎಮ್‌ಇ) ನೂತನ ಅವಕಾಶಗಳನ್ನು ಸೃಷ್ಟಿಸುತ್ತಿವೆ ಭಾರತದ ಅತ್ಯಂತ ಕ್ರಿಯಾಶೀಲ ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳ ಮಾರುಕಟ್ಟೆಗಳಲ್ಲಿ ಒಂದಾಗಿರುವ ಕರ್ನಾಟಕವು, 55 ಲಕ್ಷಕ್ಕೂ ಹೆಚ್ಚು ಜನರಿಗೆ ಉದ್ಯೋಗ ನೀಡುತ್ತಿರುವ 8.5 ಲಕ್ಷಕ್ಕೂ ಅಧಿಕ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳಿಗೆ (ಎಮ್‌ಎಸ್‌ಎಮ್‌ಇ) ತವರಾಗಿದೆ. ಆರ್ಥಿಕ ಚಟುವಟಿಕೆಗಳು ದಿನದಿಂದ ದಿನಕ್ಕೆ ಬೆಂಗಳೂರನ್ನು ಮೀರಿ ವಿಸ್ತರಿಸುತ್ತಿದ್ದು, ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ ಮತ್ತು ಬೆಳಗಾವಿಯಂತಹ ನಗರಗಳು ಪ್ರಮುಖ ಆರ್ಥಿಕ ಹಾಗೂ ಕೈಗಾರಿಕಾ ಕೇಂದ್ರಗಳಾಗಿ ಹೊರಹೊಮ್ಮುತ್ತಿವೆ. ರಾಜ್ಯದಾದ್ಯಂತ ಹೆಚ್ಚುತ್ತಿರುವ ಹೂಡಿಕೆ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಕೈಗಾರಿಕಾ ಬೆಳವಣಿಗೆಯು ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ತಮ್ಮ ವ್ಯವಹಾರವನ್ನು ವಿಸ್ತರಿಸಲು, ಹೊಸ ಮಾರುಕಟ್ಟೆಗಳನ್ನು ತಲುಪಲು ಹಾಗೂ ಬೃಹತ್ ಪೂರೈಕೆ ಸರಪಳಿಗಳಲ್ಲಿ ಭಾಗವಹಿಸಲು ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ.

ಕೋಟಕ್ ಮಹೀಂದ್ರಾ ಬ್ಯಾಂಕ್ ಪ್ರಕಾರ, ಕರ್ನಾಟಕದಾದ್ಯಂತ ಇರುವ ಸಣ್ಣ ಮತ್ತು ಮಧ್ಯಮ ಉದ್ಯಮಗಳ ಗ್ರಾಹಕರು ತಮ್ಮ ವ್ಯವಹಾರ ವಿಸ್ತರಣೆ ಮತ್ತು ಮಾರುಕಟ್ಟೆ ವೈವಿಧ್ಯೀಕರಣದಲ್ಲಿ ಹೆಚ್ಚಿನ ಆಸಕ್ತಿ ತೋರಿಸುತ್ತಿದ್ದಾರೆ. ರಾಜ್ಯದ ಉದಯೋನ್ಮುಖ ವಾಣಿಜ್ಯ ಕೇಂದ್ರಗಳಲ್ಲಿರುವ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಂದ ವಾಣಿಜ್ಯ ಬ್ಯಾಂಕಿಂಗ್ ಮತ್ತು ಸಾಲ ಸೌಲಭ್ಯಗಳಿಗೆ ಬೇಡಿಕೆ ಹೆಚ್ಚುತ್ತಿರುವುದನ್ನು ಬ್ಯಾಂಕ್ ಗಮನಿಸಿದ್ದು, ಇದು ಉದ್ಯಮಿಗಳಲ್ಲಿ ಹೆಚ್ಚುತ್ತಿರುವ ಆತ್ಮವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ. ಕೋಟಕ್, ತನ್ನ ಮೂಲತತ್ವದಲ್ಲೇ ಸಣ್ಣ ಮತ್ತು ಮಧ್ಯಮ ಉದ್ಯಮಗಳ ಮೇಲೆ ಗಮನಹರಿಸುವ ಬ್ಯಾಂಕ್ ಆಗಿದೆ. 2026 ರ ಜೂನ್ 30 ರ ವೇಳೆಗೆ, ಬ್ಯಾಂಕ್ ? 1,25,826 ಕೋಟಿಗಳಷ್ಟು ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಾಲದ ಪ್ರಮಾಣವನ್ನು ಹೊಂದಿದ್ದು, ವಾರ್ಷಿಕವಾಗಿ ಶೇಕಡಾ 20 ರಷ್ಟು ಬೆಳವಣಿಗೆಯೊಂದಿಗೆ ಬ್ಯಾಂಕ್‌ನ ಒಟ್ಟು ಮುಂಗಡಗಳ ಪಾಲಿನಲ್ಲಿ ಶೇಕಡಾ 24 ರಷ್ಟನ್ನು ಹೊಂದಿದೆ.

ಈ ಕುರಿತು ಕೋಟಕ್ ಮಹೀಂದ್ರಾ ಬ್ಯಾಂಕ್ ನ ಸಣ್ಣ ಮತ್ತು ಮಧ್ಯಮ ಉದ್ಯಮ ವಿಭಾಗದ ಮುಖ್ಯಸ್ಥರಾದ ಶೇಖರ್ ಭಂಡಾರಿ ಅವರು, "ಬೆಳವಣಿಗೆಯ ದಾರಿಗಳು ಇನ್ಮುಂದೆ ಕೇವಲ ಬೆಂಗಳೂರಿಗಷ್ಟೇ ಸೀಮಿತವಲ್ಲ. ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಮತ್ತು ಇತರ ಉದಯೋನ್ಮುಖ ಕೇಂದ್ರಗಳ ಉದ್ಯಮಿಗಳು ಬೆಳವಣಿಗೆಗಾಗಿ ಹೂಡಿಕೆ



ಮಾಡುವ ಮೂಲಕ ಹಾಗೂ ಹೊಸ ಮಾರುಕಟ್ಟೆಗಳನ್ನು ಪ್ರವೇಶಿಸುವ ಮೂಲಕ ತಮ್ಮ ಸಾಹಸ ಮನೋಭಾವವನ್ನು ಪ್ರದರ್ಶಿಸುತ್ತಿರುವುದನ್ನು ನಾವು ಕಾಣುತ್ತಿದ್ದೇವೆ. ಈ ನಗರಗಳಿಂದ ವಾಣಿಜ್ಯ ಬ್ಯಾಂಕಿಂಗ್ ಮತ್ತು ಸಾಲ ಸೌಲಭ್ಯಗಳಿಗೆ ಹೆಚ್ಚುತ್ತಿರುವ ಬೇಡಿಕೆಯು ಸಣ್ಣ ಮತ್ತು ಮಧ್ಯಮ ಉದ್ಯಮಗಳ ಮಾಲೀಕರಲ್ಲಿ ಹೆಚ್ಚುತ್ತಿರುವ ಧೈರ್ಯವನ್ನು ತೋರಿಸುತ್ತದೆ. ಭಾರತದಾದ್ಯಂತ ಇರುವ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ದೀರ್ಘಕಾಲದ ಬ್ಯಾಂಕಿಂಗ್ ಪಾಲುದಾರರಾಗಿ, ಉದ್ಯಮಿಗಳು ತಮ್ಮ ವ್ಯವಹಾರಗಳನ್ನು ಆತ್ಮವಿಶ್ವಾಸದಿಂದ ಬೆಳೆಸಲು ಬೆಂಬಲಿಸುವುದರ ಮೇಲೆ ನಾವು ಗಮನಹರಿಸಿದ್ದೇವೆ" ಎಂದು ಹೇಳಿದ್ದಾರೆ.

ಕರ್ನಾಟಕದ ಬೆಳೆಯುತ್ತಿರುವ ತಂತ್ರಜ್ಞಾನ, ಉತ್ಪಾದನೆ ಮತ್ತು ಜಾಗತಿಕ ಸಾಮರ್ಥ್ಯ ಕೇಂದ್ರಗಳ (ಜಿಸಿಸಿ) ಜಾಲವು ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಬೃಹತ್ ಮೌಲ್ಯ ಸರಪಳಿಗಳಲ್ಲಿ ಭಾಗವಹಿಸಲು ನೂತನ ಅವಕಾಶಗಳನ್ನು ಸೃಷ್ಟಿಸುತ್ತಿದೆ. ವ್ಯವಹಾರಗಳು ಬೆಳೆದಂತೆ, ಉದ್ಯಮಿಗಳು ತಮ್ಮ ವಾಣಿಜ್ಯ ಮತ್ತು ವೈಯಕ್ತಿಕ ಹಣಕಾಸು ಅಗತ್ಯಗಳೆರಡನ್ನೂ ಬೆಂಬಲಿಸಬಲ್ಲ ಬ್ಯಾಂಕಿಂಗ್ ಪಾಲುದಾರರನ್ನು ಹೆಚ್ಚಾಗಿ ಬಯಸುತ್ತಿದ್ದಾರೆ.

ಈ ಕುರಿತು ಭಂಡಾರಿ, "ಇಂದಿನ ಉದ್ಯಮಿಗಳು ಕೇವಲ ಸಾಲ ನೀಡುವ ಸಂಸ್ಥೆಗಿಂತ ಹೆಚ್ಚಿನದನ್ನು ಬಯಸುತ್ತಾರೆ. ಅವರು ತಮ್ಮ ವ್ಯವಹಾರವನ್ನು ಅರ್ಥಮಾಡಿಕೊಳ್ಳುವ ಮತ್ತು ಬೆಳವಣಿಗೆಯ ವಿವಿಧ ಹಂತಗಳಲ್ಲಿ ಅವರಿಗೆ ಬೆಂಬಲ ನೀಡುವ ಬ್ಯಾಂಕಿಂಗ್ ಪಾಲುದಾರರನ್ನು ಬಯಸುತ್ತಾರೆ. ನಮ್ಮ ಪೂರ್ಣಮಟ್ಟದ ಬ್ಯಾಂಕಿಂಗ್ (ಹೌಸ್- ಬ್ಯಾಂಕ್) ವಿಧಾನವು ಈ ನಂಬಿಕೆಯ ಮೇಲೆ ನಿರ್ಮಿತವಾಗಿದೆ. ಒಂದೇ ಬಾಂಧವ್ಯದ ಮೂಲಕ ಸಣ್ಣ ಮತ್ತು ಮಧ್ಯಮ ಉದ್ಯಮಗಳ ಮಾಲೀಕರ ವ್ಯವಹಾರ, ವೈಯಕ್ತಿಕ ಬ್ಯಾಂಕಿಂಗ್, ವಹಿವಾಟು ಬ್ಯಾಂಕಿಂಗ್ ಮತ್ತು ಬೆಳವಣಿಗೆಯ ಅಗತ್ಯಗಳನ್ನು ಬೆಂಬಲಿಸಲು ನಾವು ಅವರೊಂದಿಗೆ ನಿಕಟವಾಗಿ ಕೆಲಸ ಮಾಡುತ್ತೇವೆ. ಇದು ಅವರಿಗೆ ಅವಕಾಶಗಳನ್ನು ಪಡೆದುಕೊಳ್ಳಲು ಮತ್ತು ಆತ್ಮವಿಶ್ವಾಸದಿಂದ ಬೆಳೆಯಲು ಸಹಾಯ ಮಾಡುತ್ತದೆ" ಎಂದು ತಿಳಿಸಿದ್ದಾರೆ. ಕೋಟಕ್ ಮಹೀಂದ್ರಾ ಬ್ಯಾಂಕ್, ಬೆಂಗಳೂರು, ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ ಮತ್ತು ಬೆಳಗಾವಿ ಸೇರಿದಂತೆ ಪ್ರಮುಖ ಮಾರುಕಟ್ಟೆಗಳಲ್ಲಿ ತನ್ನ ಕಾರ್ಯಾಚರಣೆಯೊಂದಿಗೆ ಕರ್ನಾಟಕದಾದ್ಯಂತ ತನ್ನ ಅಸ್ತಿತ್ವವನ್ನು ಗಟ್ಟಿಗಳಿಸುವುದನ್ನು ಮುಂದುವರಿಸಿದೆ. ತನ್ನ ಬಾಂಧವ್ಯ ಆಧಾರಿತ ವಿಧಾನ, ಕ್ಷೇತ್ರ ಪರಿಣತಿ ಮತ್ತು ಡಿಜಿಟಲ್ ಸಾಮರ್ಥ್ಯಗಳ ಮೂಲಕ, ಕರ್ನಾಟಕದ ಉದ್ಯಮಿಗಳಿಗೆ ಹೊಸ ಅವಕಾಶಗಳನ್ನು ಪಡೆದುಕೊಳ್ಳಲು ಮತ್ತು ಆತ್ಮವಿಶ್ವಾಸದಿಂದ ಬೆಳೆಯಲು ನೆರವಾಗಲು ಕೋಟಕ್ ಬದ್ಧವಾಗಿದೆ.





ನಗರದ ಜಯನಗರದಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪ್ರಥಮ ಏಕಾದಶಿ ಪ್ರಯುಕ್ತ ಭಕ್ತರಿಗೆ ತಪ್ತಮುದ್ರಾಧಾರಣೆಯನ್ನು ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧ್ಯಕ್ಷ ಸುಬುದೇಂದ್ರ ತೀರ್ಥ ಸ್ವಾಮೀಜಿಗಳು ನೆರವೇರಿಸಿದರು

## ಜು.29 ರಂದು ಉದ್ಯೋಗಕ್ಕಾಗಿ ನೇರ ಸಂದರ್ಶನ

**ಸಂಜೆ ಸಮಯ ಸುದ್ದಿ (ಜುಲೈ 25)**

**ಹಾಸನ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಹಾಸನ ಮತ್ತು ಹಾಸನ ಜಿಲ್ಲೆಯ ಜಿಯೋಡ್ರಾಫ್ಟ್ ಇಂಡಿಯಾ ಪ್ರೈ.ಲಿ, ಐ.ಐ.ಎಫ್.ಎಲ್ ಪೈನಾನ್ಸ್, ಹೆಚ್.ಡಿ.ಎಫ್.ಸಿ ಲೈಫ್ ಇನ್ಸುರೆನ್ಸ್, ಸಹಯೋಗ್ ಮಲ್ಟಿಸ್ಟೇಟ್ ಕ್ರೆಡಿಟ್ ಕೋ ಆಪರೇಟಿವ್ ಸೋಸೈಟಿ ಸಹಭಾಗಿತ್ವದಲ್ಲಿ ಹಾಸನ ಜಿಲ್ಲೆಯ ಯುವಕ ಯುವತಿಯರಿಗೆ ಉದ್ಯೋಗ ನೀಡುವ ಸಂಬಂಧ ಜು.29 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನ ನಡೆಯಲಿದ್ದು, ಎಸ್‌ಎಸ್‌ಎಲ್‌ಸಿ, ಪಿ.ಯು.ಸಿ. ಐ.ಟಿ.ಐ./ಡಿಪ್ಲೋಮೊ ಮತ್ತು ಯಾವುದೇ ಪದವಿ ಪಾಸಾದ ಪುರುಷ/ಮಹಿಳಾ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ಹಾಸನ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಉದ್ಯೋಗಾಧಿಕಾರಿ ತಿಳಿಸಿದ್ದಾರೆ. ಸಂದರ್ಶನ ನಡೆಯುವ ಸ್ಥಳ:- ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ರೈಲ್ವೇ ಸ್ಟೇಷನ್ ಹತ್ತಿರ, ಸರ್ಕಾರಿ ಐ.ಟಿ.ಐ. ಕಾಲೇಜು ಆವರಣ ಹಾಸನ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ :- 08172-296374 ಗೆ ಸಂಪರ್ಕಿಸಬಹುದಾಗಿದೆ.

## ಸ್ನಾತಕೋತ್ತರ ಪದವಿಗೆ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂಗಳೂರು ನಗರ ಜಿಲ್ಲೆ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜು (ಕಾವಾ),ಸಿದ್ಧಾರ್ಥನಗರ ಮೈಸೂರು ಇಲ್ಲಿ 2026-27 ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಎಂ.ವಿ.ಎ. ಸ್ನಾತಕೋತ್ತರ ಬಿ.ವಿ.ಎ. ಅಥವಾ ಸಮಾನಾಂತರ ಕೋರ್ಸ್‌ಗಳಲ್ಲಿ ಉತ್ತೀರ್ಣರಾದ ಪದವಿ ತರಗತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎರಡು ವರ್ಷಗಳ ನಾಲ್ಕು ಸೆಮಿಸ್ಟರ್‌ಗಳ ಸಿಬಿಸಿಎಸ್ (CBCS),ಪದ್ಧತಿಯ ಕೋರ್ಸ್ ಆಗಿದ್ದು, ಕೋರ್ಸ್‌ನಲ್ಲಿ ಚಿತ್ರಕಲೆ (Painting), ಶಿಲ್ಪಕಲೆ (ಖಛಿಣಟಠಿಣಣಡಿಜ) ಹಾಗೂ ಅಚ್ಚುಕಲೆ (Graphics) ವಿಷಯಗಳಲ್ಲಿ ವಿಶೇಷ ಅಧ್ಯಯನವನ್ನು ಒಳಗೊಂಡಿರುತ್ತದೆ. ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಗಳನ್ನು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ,ಸಿದ್ಧಾರ್ಥ ನಗರ,ಮೈಸೂರು ಇಲ್ಲಿ ಅರ್ಜಿಗಳನ್ನು ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 31, 2026 ರೊಳಗೆ ಸಲ್ಲಿಸಬಹುದು. ಅಭ್ಯರ್ಥಿಗಳ ಆಯ್ಕೆಗಾಗಿ ಆಗಸ್ಟ್ 2, 2026 ರಂದು ಅರ್ಹತಾ ಪರೀಕ್ಷೆ ಹಾಗೂ ವೈಯಕ್ತಿಕ ಸಂದರ್ಶನ ನಡೆಯಲಿದ್ದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0821-2438931, ಇ-ಮೇಲ್ deancava@gmail.com ಅನ್ನು ಸಂಪರ್ಕಿಸಬಹುದು ಎಂದು ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜು (ಕಾವಾ) , ಸಿದ್ಧಾರ್ಥನಗರ ಮೈಸೂರಿನ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





ಗ್ಲೋಬಲ್ ಯೋಗ ಎಕ್ಸಲೆನ್ಸ್ ಅವಾರ್ಡ್ಸ್ ಅಂಡ್ ಸೆಲೆಬ್ರೇಷನ್ 2026 ಕಾರ್ಯಕ್ರಮದ ವಿಶೇಷ ಕ್ಷಣಗಳು. ಯೋಗ, ಆರೋಗ್ಯ ಮತ್ತು ಸಮಗ್ರ ಜೀವನಶೈಲಿಗೆ ಅತ್ಯುತ್ತಮ ಕೊಡುಗೆ ನೀಡಿದ ಸಾಧಕರನ್ನು ಗೌರವಿಸುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ಆಗಮಿಸಿದ್ದರು. ಅಕ್ಷರ್ ಯೋಗ ಕೇಂದ್ರದ ಸಂಸ್ಥಾಪಕರು ಹಾಗೂ ವರ್ಲ್ಡ್ ಯೋಗ ಆರ್ಗನೈಸೇಶನ್ ಅಧ್ಯಕ್ಷರಾದ ಹಿಮಾಲಯನ್ ಸಿದ್ಧಾ ಅಕ್ಷರ್ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಡಾ. ಸಿ. ಎನ್. ಅಶ್ವತ್, ನಾರಾಯಣ್, ಮಲ್ಲೇಶ್ವರಂ ಶಾಸಕ, ಎಸ್. ಮುರುಗನ್, ಐಪಿಎಸ್, ಬೆಂಗಳೂರು ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಹಾಗೂ ಗಡಿ ಭದ್ರತಾ ಪಡೆ (ಃಖಈ) ಬೆಂಗಳೂರು ಫ್ರಾಂಟಿಯರ್‌ನ ಇನ್ಸ್‌ಪೆಕ್ಟರ್ ಜನರಲ್ ದಿನೇಶ್ ಕುಮಾರ್ ಯಾದವ್ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

## ಪರಮಪೂಜ್ಯ ಶ್ರೀ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರಿಂದ ಸಹಸ್ರಾರು ಭಕ್ತರಿಗೆ ಮುದ್ರಾಧಾರಣೆ

**ಸಂಜೆ ಸಮಯ ಸುದ್ದಿ (ಜುಲೈ 25)**

ಆಷಾಢ ಮಾಸದ ಪ್ರಥಮ ಏಕಾದಶಿ ಪರ್ವಕಾಲ ಹಿನ್ನೆಲೆಯಲ್ಲಿ ತಪ್ತ ಮುದ್ರಾಧಾರಣೆ ಕಾರ್ಯಕ್ರಮವನ್ನು ಸರಸ್ವತಿಪುರಂ ಶ್ರೀ ಕೃಷ್ಣಧಾಮ ಮಠದಲ್ಲಿ ಶ್ರೀ ಕೃಷ್ಣ ಮಿತ್ರ ಮಂಡಳಿ ಹಾಗೂ ಶ್ರೀಕೃಷ್ಣ ಟ್ರಸ್ಟ್ ವತಿಯಿಂದ ಉಡುಪಿ ಪಲಿಮಾರು ಮಠದ ಸಂಸ್ಥಾನಾಧೀಶರಾದ ಶ್ರೀ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳವರು ಹಾಗೂ ಕಿರಿಯ ಶ್ರೀಗಳಾದ ವಿದ್ಯಾರಾಜೇಶ್ವರತೀರ್ಥ ಶ್ರೀಪಾದಂಗಳವರು ಭಕ್ತರಿಗೆ ಶಂಖ ಚಕ್ರಗಳ ಮುದ್ರಾಧಾರಣೆ ನೆರವೇರಿಸಿದರು. ಬೆಳಗ್ಗಿನಿಂದಲೇ ಸಹಸ್ರಾರು ಭಕ್ತರು ಶ್ರೀಗಳಿಂದ ಮುದ್ರಾಧಾರಣೆ ಮಾಡಿ ಮಾತನಾಡಿದ ಶ್ರೀ

ಉಡುಪಿ ಪಲಿಮಾರು ಶ್ರೀ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳ ರವರು ಆಷಾಢಮಾಸದ ಶುಕ್ಲ ಪಕ್ಷದ ಏಕಾದಶಿಯನ್ನು ಶಯನಿ ಏಕಾದಶಿ ಎಂದು ಕರೆಯಲಾಗುತ್ತದೆ. ಈ ದಿನದಿಂದ ಉತ್ಥಾನದ್ವಾದಶಿಯ ತನಕ ಶ್ರೀಮನ್ನಾರಯಣನು ಯೋಗನಿದ್ರೆಯಲ್ಲಿ ತೊಡಗುತ್ತಾನೆ ಅನ್ನೋ ನಂಬಿಕೆ ಇದೆ. ಮಳೆಗಾಲದಲ್ಲಿ ಸೊಳ್ಳೆ, ಕ್ರಿಮಿ ಕೀಟಗಳಿಂದ ಎದುರಾಗುವ ರೋಗ ರುಜಿನಗಳನ್ನು ಎದುರಿಸಲು ಬೇಕಾದ



ರೋಗ ನಿರೋಧಕ ಶಕ್ತಿ ಹೆಚ್ಚಳಕ್ಕೂ ತಪ್ತ ಮುದ್ರಾಧಾರಣೆ ಪೂರಕವಾಗಲಿದೆ ಚಾತುರ್ಮಾಸ್ಯಕ್ಕೆ ಕೂರುವ ಮೊದಲು ಗೃಹಸ್ಥರು ಹಾಗೂ ಯತಿಗಳು ತಪ್ತ ಮುದ್ರಾಧಾರಣೆ ಮಾಡಿಸಿಕೊಳ್ಳಬೇಕು. ಅನಾನುಕೂಲವಾದವರು ಏಕಾದಶಿ ದಿನದ ಹೊರತಾಗಿಯೂ ಮುದ್ರಾ ಧಾರಣೆ ಮಾಡಿಸಿಕೊಳ್ಳಬಹುದು ಎಂದು ಹೇಳಿದರು ಶ್ರೀ ಕೃಷ್ಣ ಮಿತ್ರ ಮಂಡಳಿ ಅಧ್ಯಕ್ಷರಾದ ಶ್ರೀವತ್ಸ ಮಾತನಾಡಿ ಬೆಳಿಗ್ಗಿನಿಂದಲೇ ಮಠಕ್ಕೆ ಆಗಮಿಸಿದ ಭಕ್ತರು ಸರತಿ ಸಾಲಿನಲ್ಲಿ ನಿಂತು ತೋಳಿಗೆ, ಎದೆಯ ಭಾಗಕ್ಕೆ ಹಾಗೂ ಹೊಟ್ಟೆಯ ಮೇಲೆ ಶಂಖ ಹಾಗೂ ಚಕ್ರದ ಮುದ್ರೆ ಹಾಕಿಸಿಕೊಂಡರು. ಪ್ರತಿವರ್ಷವೂ ನಾನಾಕಡೆಗಳಿಂದ ಭಕ್ತರು ಆಗಮಿಸಿ ತಪ್ತ ಮುದ್ರೆಯನ್ನು ಹಾಕಿಸಿಕೊಳ್ಳುತ್ತಾರೆ.

ಸುದರ್ಶನ ಹೋಮವನ್ನು ನಡೆಸಿ ಅದರಲ್ಲಿ ಕಾಯಿಸಿದ ಶಂಖ, ಚಕ್ರ, ಗದಾ , ಪದ್ಮ ಚಿಹ್ನೆಯನ್ನು ಎದೆಯ ಭಾಗ, ಎಡ ಮತ್ತು ಬಲ ತೋಳಿಗೆ ಹಾಕುವುದನ್ನು ತಪ್ತ ಮುದ್ರಾಧಾರಣೆ ಎಂದು ಹೇಳಿದರು ಅದಕ್ಕೂ ಮುನ್ನ ಮಠದಲ್ಲಿ ಸುದರ್ಶನ ಹೋಮ ನೆರವೇರಿಸಲಾಯಿತು

ಇದೆ ಸಂದರ್ಭದಲ್ಲಿ ಶ್ರೀಕೃಷ್ಣ ಮಿತ್ರ ಮಂಡಳಿ ಅಧ್ಯಕ್ಷರಾದ ಶ್ರೀವತ್ಸ, ಕಾರ್ಯದರ್ಶಿ ರಾಘವೇಂದ್ರ ರಾವ್, ಖಜಾಂಜಿ ಸುರೇಶ್ ರಾವ್, ಶ್ರೀ ಕೃಷ್ಣ ಟ್ರಸ್ಟ್ ಉಪಾಧ್ಯಕ್ಷರಾದ ರವಿಶಾಸ್ತ್ರಿ, ಪಿ ಎಸ್ ಶೇಖರ್, ಕಾರ್ಯದರ್ಶಿ ಕೆ ವಿ ಶ್ರೀಧರ್, ವಾಸುದೇವ್ ಭಟ್,ಕೃಷ್ಣ ದಾಸ್ ಪುರಾಣಿ, ಸುಬ್ರಹ್ಮಣ್ಯ ತಂತ್ರಿ, ಹಾಗೂ ಸದಸ್ಯರು ಇನ್ನಿತರರು ಹಾಜರಿದ್ದರು

# ಪ್ರಥಮ ಏಕಾದಶಿ ಪ್ರಯುಕ್ತ ದಾಸರ ಮಾತಿನಲ್ಲಿ ಏಕಾದಶಿ

ಪ್ರಥಮ ಏಕಾದಶಿಯ ಪರ್ವಕಾಲದಲ್ಲಿ, ದಾಸರ ಮಾತಿನಲ್ಲಿ ಏಕಾದಶಿಯ ವಿಶೇಷತೆಯನ್ನು ನೋಡುವ ಒಂದು ಸಣ್ಣ ಪ್ರಯತ್ನವನ್ನು ಮಾಡೋಣ.

ಏಕಾದಶಿಯ ವ್ರತವು ಸರ್ವ ಪಾಪಗಳನ್ನು ಪರಿಹಾರ ಮಾಡುವ ವ್ರತ ಎಂಬ ನಂಬಿಕೆ ಇದೆ. ಇದರ ಜೊತೆಗೆ ದೇಹದ ಜೀರ್ಣಕ್ರಿಯೆಯನ್ನು ಮಾಡುವ ಅಂಗಾಂಗಗಳಿಗೆ ಸಂಪೂರ್ಣ ವಿಶ್ರಾಂತಿಯನ್ನು ಕೊಟ್ಟು ಅದು ಮತ್ತೆ ಚೈತನ್ಯಪೂರ್ಣವಾಗಿ ಕೆಲಸ ಮಾಡುವ ಅರ್ಹತೆ ಪಡೆದುಕೊಳ್ಳುವಂತೆ ಉಪವಾಸಗಳು ಮಾಡುತ್ತವೆ.

ನಮ್ಮ ಶಾಸ್ತ್ರ ಸಂಪ್ರದಾಯಗಳಲ್ಲಿ ಋಷಿಮುನಿಗಳ ಅದ್ಭುತ ಜ್ಞಾನ ಭಂಡಾರ ಅಡಗಿದೆ. ಅವರು ಕಂಡುಕೊಂಡಂತಹ ಸತ್ಯಗಳ ಪ್ರಕಾರ ಜೀವನಕ್ಕೆ ಈ ದೇಹಕ್ಕೆ ಯಾವುದು ಸೂಕ್ತ ಎನ್ನುವುದರ ಅರಿವಿನಿಂದ ನಿಯಮಗಳನ್ನು ಹಾಕಿ ಕೊಟ್ಟಿದ್ದಾರೆ.

ವೈಜ್ಞಾನಿಕವಾಗಿ ನೋಡಿದರೆ, ಏಕಾದಶಿಯ ದಿನ ಗಾಳಿಯ ಒತ್ತಡ ಅತ್ಯಂತ ಕಡಿಮೆಯಾಗಿದ್ದು ಉಪವಾಸ ಮಾಡಲು ಸುಲಭವಾದ ದಿನವಾಗಿದೆ.

ಅಷ್ಟೇ ಅಲ್ಲದೆ 15 ದಿನಗಳಿಗೆ ಒಮ್ಮೆ ಉಪವಾಸ ಮಾಡಿದಾಗ ದೇಹದಲ್ಲಿರುವಂತಹ ಬೇಡದ ಅಣುಗಳು ತಮ್ಮಷ್ಟಕ್ಕೆ ತಾವೇ ನಷ್ಟವಾಗಿ ಹೋಗುತ್ತವೆ ಎಂಬುದು ಸಂಶೋಧನೆಗಳಿಂದ ತಿಳಿದುಬಂದಿದೆ. ಇದನ್ನು ಅಪಾಪ್ಟೋಸಿಸ್ ಎಂದು ಕರೆಯುತ್ತಾರೆ.

ದಾಸರ ಮಾತಿನಲ್ಲಿ ನಾವು ನೋಡಿದಾಗ, ಪುರಂದರದಾಸರು ಪಾವನ ಪಾವನ ಎಂಬ ಹಾಡಿನಲ್ಲಿ, "" ಏಕಾದಶಿ ವ್ರತ ಪಾವನ" ಎನ್ನುತ್ತಾರೆ, " ಹರಿದಿನದಲಿ ಉಂಡ ನರನಿಗೆ ಘೋರ ನರಕ ತಪ್ಪದು ಎಂದು ಶ್ರುತಿ ಸಾರುತಲಿದೆ" ಎಂದು ಹಾಡಿ ವೇದಗಳ ಪ್ರಕಾರವೇ ಅಂದು ಊಟ ಮಾಡಬಾರದು ಎಂದು ಹೇಳುತ್ತಾರೆ. ಅನೇಕ ಪಾಪಗಳು ಬರುತ್ತವೆ ಎಂಬುದನ್ನು ವಿವರಿಸುತ್ತಾರೆ

ಯಾವ ವಿಷಯ ಭೋಗದ ಆಸೆಯನ್ನೂ ಮಾಡದೆ, ಆಹಾರವನ್ನು ಸ್ವೀಕರಿಸದೆ, ನಿದ್ರೆ ಮಾಡದೇ ಭಗವಂತನಿಗಾಗಿ ಜಾಗರಣೆ ಮಾಡುವ ಪರ್ವಕಾಲ.

"ಇಂತು ಏಕಾದಶಿ ಉಪವಾಸ ಜಾಗರ , ಸಂತತ ಕ್ಷೀರಾಬ್ಧಿಶಯನನ ಪೂಜೆ, ಸಂತೋಷದಿಂದಲಿ ಮಾಡುವ ಜನರಿಗನಂತ ಫಲವನೀವ ಪುರಂದರ ವಿಠಲ" ಎಂದು ಮಾಡಬೇಕಾದ ಎಲ್ಲವನ್ನು ವರ್ಣಿಸಿದ್ದಾರೆ.

ಸಾಧನೆಯ ಮಾರ್ಗಕ್ಕೆ ಬೇಕಾದದ್ದು ಜ್ಞಾನ ಭಕ್ತಿ ಮತ್ತು ವೈರಾಗ್ಯ. ಏಕಾದಶಿಯ ದಿನ ಅಜ್ಞಾನವೆಂಬ ಕತ್ತಲು ರಾತ್ರಿ ತುಂಬಿದ್ದಾಗ, ನಿದ್ರೆ ಮಾಡದೇ ಜಾಗರಣೆ ಮಾಡಿ ಭಗವಂತನ ಜ್ಞಾನವನ್ನು ಬೇಡಬೇಕು. ನವ ವಿಧ ಭಕ್ತಿಯಿಂದ ಭಗವಂತನನ್ನು ಪೂಜಿಸುತ್ತಾ, ಅನ್ನ , ವಸ್ತ್ರ ಸುಖಭೋಗಗಳ ಆಸೆ ಬಿಟ್ಟು, ವಿರಕ್ತಿಯನ್ನು ಸಾಧಿಸಬೇಕು. ಹೀಗೆ ಜ್ಞಾನಭಕ್ತಿ ವೈರಾಗ್ಯಗಳಿಂದ ಭಗವಂತನನ್ನು ಸಾಕ್ಷಾತ್ಕರಿಸಿಕೊಳ್ಳಬೇಕು ಎಂಬುದು ಏಕಾದಶಿಯು ನಮಗೆ ನೀಡುತ್ತಿರುವ ಉಪದೇಶ.

ವ್ಯಾಸರಾಯರು "ಹರಿದಿನಪಾಕ ಪರಿಹಾರ ದಿವಿಜರ ಕರುಣಕೆ ಕಾರಣ ನಂಬೆಲೊ ಮನುಜ" ಎಂದು ಹೇಳುತ್ತಾ ಗಂಗಾದಿ ಸಕಲ ತೀರ್ಥಗಳಿಗಿಂತ, ಹೋಮ ಜಪ ತಪಗಳಿಗಿಂತ ಏಕಾದಶಿ ಉಪವಾಸ ಹಿರಿದು ಎನ್ನುತ್ತಾರೆ. ಹಿಂದೆ ಮಾಡಿದ ಪಾಪಗಳೆಲ್ಲ ಪರಿಹಾರವಾಗಿ ಮುಂದೆ ಮುಕ್ತಿಗೆ " ಕಲ್ಪಲತಾಂಕುರ" ಎಂದರೆ ಮುಕ್ತಿ ಎಂಬ ಕಲ್ಪವೃಕ್ಷದ ಬೀಜವು ಮೊಳಕೆ ಒಡೆದಂತೆ! ಎಂದು ಹೇಳಿ ಏಕಾದಶಿ ಆಚರಸಿ ಮುಕ್ತಿ ಪಡೆದ ರುಕುಮಾಂಗದನ ಉದಾಹರಣೆ ನೀಡುತ್ತಾರೆ.

ಪ್ರಸನ್ನ ವೆಂಕಟದಾಸರು, " ಹರಿದಿನ ಇಂಥ ಹರಿದಿನ" ಎಂದು ಹಾಡುತ್ತಾ "ಹರಿದಿನದ ಮಹಿಮೆ ಹೋಗಳಲಗಾಧ" ಎನ್ನುತ್ತಾರೆ.

ನಾರಾಯಣ ದಾಸರು, "ಹರಿ ವಾಸರದುಪವಾಸದ ಭಾಗ್ಯವು ಕಂಡ ಕಂಡವರಿಗೆ ದೊರಕುವುದೆ?"ಎಂದು ಪ್ರಶ್ನಿಸಿದ್ದಾರೆ.

ವಿಜಯದಾಸರು ಏಕಾದಶಿ ಆಚರಣೆಯ ಬಗ್ಗೆ ಅದ್ಭುತವಾದ ಸುಳಾದಿಯನ್ನೇ ರಚಿಸಿದ್ದಾರೆ " ದಶಮಿ ಏಕಾದಶಿ ದ್ವಾದಶಿ ದಿನತ್ರಯ ವಸುಧೆಯೊಳಗೆ ಮಹಾ ವ್ರತವೆಂದು ತಿಳಿದು" ಎಂದು ಮೂರು ದಿನದ ಈ ವ್ರತವನ್ನು ಆಚರಿಸಿ ಎಂದು ಹೇಳುತ್ತಾರೆ. ವ್ರತಾಚರಣೆಯ ಎಲ್ಲ ವಿಧಿ ವಿಧಾನಗಳನ್ನು ತಿಳಿಸುತ್ತಾರೆ.

ವಾದಿರಾಜರು "ಏಕಾದಶಿ ನಿರ್ಣಯ ಅನಲು ಸಮನೆ ಮನೆಗೆ ಪೇಳೆಂಬ ಅನಾಥ ಬಂಧು ಹಯವದನ ಗೋವಿಂದ "ಎಂದು ಹಾಡಿದ್ದಾರೆ .

ಹೀಗೆ ಯತಿಗಳು, ದಾಸರು ವರ್ಣಿಸಿರುವ ಏಕಾದಶಿ ವ್ರತ ಆಚರಣೆ ಮಾಡಿ ಭಗವಂತನ ಕೃಪೆಗೆ ಪಾತ್ರರಾಗೋಣ.ಎಲ್ಲಾ ಪ್ರಾಣಿಗಳಿಗಿಂತ ವಿಶೇಷವಾದ ಶಕ್ತಿ ಪಡೆದಿರುವ ಮಾನವರಾದ ನಾವು, ಚಪಲಗಳಿಗೆ ಸೋಲದೆ ಗಟ್ಟಿ ಮನಸ್ಸನ್ನು ರೂಢಿಸಿಕೊಳ್ಳಬೇಕು. ಪಾಪಗಳನ್ನು ಕಳೆದುಕೊಂಡು ಭಗವಂತನಿಗೆ ಪ್ರಿಯವಾದ ರೀತಿಯಲ್ಲಿ ಬಾಳಬೇಕು. ಆಗಲೇ ಜೀವನದ ಸಾರ್ಥಕತೆ.

**ಶ್ರೀ ಕೃಷ್ಣಾರ್ಪಣಮಸ್ತು**



**ಡಾ.ರೂಪಶ್ರೀ ಶಶಿಕಾಂತ್**
**ದಾವಣಗೆರೆ**

## ಆಷಾಢ ಏಕಾದಶಿ ಮಹತ್ವ

ದೇವಶಯನಿ ಏಕಾದಶಿ

ಇಂದು ಆಷಾಢ ಮಾಸದ ಮೊದಲ ಏಕಾದಶಿ ಇದು ಶುಕ್ಲಪಕ್ಷದ ತಿಥಿಯಲ್ಲಿ ಬರುವುದು

ಹಿಂದೂ ಗಳಿಗೆ ಪವಿತ್ರವಾದ ಏಕಾದಶಿ ಇದಾಗಿದೆ ಈ ದಿನ ಉಪವಾಸ ವ್ರತ ಆಚರಣೆ ಮಾಡಿದರೆ ದೈವ ಅನುಗ್ರಹ ಫಲ ನಿಶ್ಚಿತ ಈ ದಿನದಿಂದ ಭಗವಂತ ನಾಲ್ಕು ತಿಂಗಳು ನಿದ್ರೆಯಲ್ಲಿರುತ್ತಾನೆ ಈ ನಾಲ್ಕು ತಿಂಗಳು ಶಾಖಾ ವ್ರತ ಅಥವಾ ಚಾತುರ್ಮಾಸ ವ್ರತ ಆಚರಣೆ ಮಾಡುತ್ತಾರೆ ಆದಿಶೇಷನ ಮೇಲೆ ವಿಷ್ಣು ಯೋಗ ನಿದ್ರೆಯಲ್ಲಿರುತ್ತಾನೆ ಇದು ದಕ್ಷಿಣಯನ ಪುಣ್ಯ ಕಾಲ ಈ ಕಾಲದಲ್ಲಿ ಪೂಜೆ ವ್ರತಗಳನ್ನು ಆಚರಿಸಬೇಕು ಇದು ಪುಣ್ಯ ಸಂಪಾದನೆಯ ಕಾಲ ಶುಭ ಕಾರ್ಯಗಳು ಮದುವೆ ಮುಂಜಿ ಇವುಗಳನ್ನು ಮಾಡುವಂತಿಲ್ಲ

ಈ ಏಕಾದಶಿ ಏಕೆ ಮಹತ್ವ ಪಡೆದಿದೆ ಎಂದರೆ ಹಿಂದೆ ಮಾಂಧಾತ ಎಂಬ ರಾಜನಿದ್ದ ಅವನು ಧರ್ಮಿಷ್ಠ ನಾಗಿದ್ದ ಇವನ ರಾಜ್ಯದಲ್ಲಿ ಬಡತನ ರೋಗಗಳು ಯಾವುದು ಇರಲಿಲ್ಲ ರಾಜ್ಯ ಸಂಪತ್ತಿ ನಿಂದ ತುಂಬಿ ಪ್ರಜೆಗಳೆಲ್ಲ ಅತ್ಯಂತ ಸಂತೋಷಭರಿತರಾಗಿದ್ದರು ರಾಜ್ಯ ಸುಭಿಕ್ಷವಾಗಿತ್ತು

ಒಮ್ಮೆ ಬರಗಾಲ ಬಂದು ಸಿರಿ ಸಂಪತ್ತೆಲ್ಲಾ ನಷ್ಟ ವಾಗಿ ಬಡತನ ತಾಂಡವ ವಾಡಿತು ಧರ್ಮ ಕಾರ್ಯಗಳೆ ಲ್ಲ ನಿಂತು ಹೋದವು ರಾಜನಿಗೆ ಚಿಂತೆಯಾಗಿ ಇದರ ಪರಿಹಾರ ಏನೆಂದು ಆಂಗಿರಸ ಋಶಿಗಳನ್ನು ಕೇಳಲು ಅವರು "ಚಿಂತೆ ಮಾಡಬೇಡ ರಾಜ ಇದೇ ಆಷಾಢ ಮಾಸದ ಏಕಾದಶಿಯನ್ನು ರಾಜ್ಯದಲ್ಲಿ ಎಲ್ಲರೂ ನಿಷ್ಠೆಯಿಂದ ಆಚರಣೆ ಮಾಡಿ "ಎಂದು ಹೇಳಿ ಈ ಏಕಾದಶಿಯ ಮಹತ್ವ ಮತ್ತು ಆಚರಣೆ ವಿವರಿಸುತ್ತಾರೆ ರಾಜನು ಈ ಪದ್ಮ ಏಕಾದಶಿ ಯನ್ನು ತಾನೂ ತನ್ನ ಪ್ರಜೆಗಳು ನಿಷ್ಠೆಯಿಂದ ಮಾಡುತ್ತಾರೆ ಎಲ್ಲರೂ ಉಪವಾಸ ಆಚರಿಸಿ ಭಕ್ತಿಯಿಂದ ವಿಷ್ಣುವನ್ನು ಸ್ತುತಿಸುತ್ತಾರೆ ಕೆಲವೇ ತಿಂಗಳುಗಳಲ್ಲಿ ಆ ರಾಜ್ಯದಲ್ಲಿ ಮಳೆ ಬೆಳೆ ಆಗಿ ಸಂಪತ್ತು ತುಂಬಿ ಮತ್ತೆ ರಾಜ್ಯ ಸುಭಿಕ್ಷವಾಗುತ್ತದೆ ಪ್ರಜೆಗಳೆಲ್ಲ ಸಂತೋಷ ಸಂತೃಪ್ತಿ ಹೊಂದಿದರು

ಇಂತಹ ಪವಿತ್ರವಾದ ಪದ್ಮ ಏಕಾದಶಿ ಇಂದು ಬಂದಿದೆ ಎಲ್ಲರೂ ಇದನ್ನು ಆಚರಿಸಿ ಧನ್ಯರಾಗೋಣ ಎಂದು ಆಶಿಸುತ್ತೇನೆ, ಕೋಮಲ ವಸಂತ್ ಕುಮಾರ್

# ಸೆಲ್ಫ್ ಎಕ್ಸಿಕ್ಯೂಷನ್ ಯೋಜನೆಗಳಲ್ಲಿ ನಿಯಮ ಉಲ್ಲಂಘನೆಗೆ ಕಠಿಣ ಕ್ರಮ

## -ವಿದ್ಯುತ್ ಪ್ರಸರಣ ಸಾಮರ್ಥ್ಯಕ್ಕೆ ಅಡ್ಡಿಯಾಗುವ ಯೋಜನೆಗಳ ವಿರುದ್ಧ ವಿದ್ಯುತ್ ಸಂಪರ್ಕ ಸ್ಥಗಿತ ಸೇರಿದಂತೆ ಕಾನೂನುಬದ್ಧ ಕ್ರಮ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂಗಳೂರು:** ಸೆಲ್ಫ್ ಎಕ್ಸಿಕ್ಯೂಷನ್ (Self Execution) ಯೋಜನೆಗಳಡಿ ಕಡ್ಡಾಯವಾಗಿ ನಿರ್ಮಿಸಬೇಕಾದ ವಿದ್ಯುತ್ ಮೂಲಸೌಕರ್ಯವನ್ನು ಸಕಾಲದಲ್ಲಿ ಪೂರ್ಣಗೊಳಿಸದ ಹಾಗೂ ಕೆಇಆರ್‌ಸಿ (KERC) ನಿಯಮಗಳನ್ನು ಉಲ್ಲಂಘಿಸಿರುವ ಯೋಜನೆಗಳ ವಿರುದ್ಧ ನಿಯಮಾನುಸಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ (KERC) ನಿಯಮಗಳ (KERC regulations date 12.01.2006 ,, ection 3.2.4, substation to be established on self execution basis) ಪ್ರಕಾರ 7.5 MVA ಗಿಂತ ಹೆಚ್ಚಿನ ಮಂಜೂರಾತಿ ವಿದ್ಯುತ್ ಭಾರ (Sanctioned Load) ಹೊಂದಿರುವ ವಸತಿ ಸಮುಚ್ಚಯಗಳು, ಟೌನ್‌ಶಿಪ್‌ಗಳು, ಬೃಹತ್ ಲೇಔಟ್‌ಗಳು ಹಾಗೂ ಇತರ ಅಭಿವೃದ್ಧಿ ಯೋಜನೆಗಳು ತಮ್ಮ ವೆಚ್ಚದಲ್ಲಿಯೇ ವಿದ್ಯುತ್ ಉಪಕೇಂದ್ರ ಹಾಗೂ ಸಂಬಂಧಿತ ವಿದ್ಯುತ್ ಮೂಲಸೌಕರ್ಯವನ್ನು ನಿರ್ಮಿಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದ್ದಾರೆ. ಈ ವ್ಯವಸ್ಥೆಯ ಉದ್ದೇಶ ವೇಗವಾಗಿ ಬೆಳೆಯುತ್ತಿರುವ ನಗರ ಪ್ರದೇಶಗಳಲ್ಲಿ ಅಗತ್ಯ ವಿದ್ಯುತ್ ಮೂಲಸೌಕರ್ಯವನ್ನು ಯೋಜನೆಗಳ ಜೊತೆಯಲ್ಲೇ ಅಭಿವೃದ್ಧಿಪಡಿಸುವುದು. ಇದರಿಂದ ಸಾರ್ವಜನಿಕ ವಿದ್ಯುತ್ ಜಾಲದ ಮೇಲಿನ ಹೆಚ್ಚುವರಿ ಒತ್ತಡ ಕಡಿಮೆಯಾಗುವುದರ ಜೊತೆಗೆ,



ಖಾಸಗಿ ಯೋಜನೆಗಳಿಗೆ ಅಗತ್ಯವಾಗುವ ಮೂಲಸೌಕರ್ಯಕ್ಕಾಗಿ ಸರ್ಕಾರ ಸಾರ್ವಜನಿಕ ಹಣ ವೆಚ್ಚ ಮಾಡುವ ಅಗತ್ಯವೂ ತಪ್ಪುತ್ತದೆ.

ಈಗಾಗಲೇ ಬೆಂಗಳೂರು ನಗರದಲ್ಲಿ ಇಂತಹ 45 ಪ್ರಕರಣಗಳನ್ನು ಗುರುತಿಸಲಾಗಿದ್ದು, ಸಂಬಂಧಿಸಿದ ಯೋಜನಾ ಅನುಷ್ಠಾನ ಸಂಸ್ಥೆಗಳಿಗೆ ನೋಟಿಸ್ ನೀಡಲಾಗಿದೆ. ಇಂತಹ ಪ್ರಕರಣಗಳಲ್ಲಿ ಕೆಇಆರ್‌ಸಿ ನಿಯಮಗಳಂತೆ ಶೇಕಡಾ 10ರಷ್ಟು ದಂಡ ವಿಧಿಸಲಾಗುವುದು. ನಿಗದಿತ ಅವಧಿಯೊಳಗೆ ಕಡ್ಡಾಯ ವಿದ್ಯುತ್ ಮೂಲಸೌಕರ್ಯವನ್ನು ಪೂರ್ಣಗೊಳಿಸದಿದ್ದಲ್ಲಿ ಹಾಗೂ ಕೆಪಿಟಿಸಿಎಲ್ ಉಪಕೇಂದ್ರಗಳಲ್ಲಿ ವಿದ್ಯುತ್ ಪ್ರಸರಣ ಸಾಮರ್ಥ್ಯದ (Transmission Constraint) ಮೇಲೆ ಒತ್ತಡ ಉಂಟಾಗಿದ್ದಲ್ಲಿ, ಸಾರ್ವಜನಿಕರಿಗೆ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆಯನ್ನು ಕಾಪಾಡುವ ಹಿತದೃಷ್ಟಿಯಿಂದ, ಜಾರಿಯಲ್ಲಿರುವ ಕಾನೂನು ಹಾಗೂ ನಿಯಮಗಳ ಅನ್ವಯ ಸಂಬಂಧಿತ ಯೋಜನೆಗಳ ವಿದ್ಯುತ್ ಸಂಪರ್ಕವನ್ನು ಸ್ಥಗಿತಗೊಳಿಸುವುದು ಸೇರಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು.

ಇದರ ಜೊತೆಗೆ, 7.5 MVA ಗಿಂತ ಕಡಿಮೆ ಮಂಜೂರಾತಿ ವಿದ್ಯುತ್ ಲೋಡ್ ಅನುಮತಿ ಪಡೆದು ನಂತರ ಅನುಮೋದಿತ ಸಾಮರ್ಥ್ಯಕ್ಕಿಂತ ಹೆಚ್ಚಿನ ವಿದ್ಯುತ್ ಬಳಕೆ ಮಾಡುತ್ತಿರುವ ಕೆಲವು ಯೋಜನೆಗಳೂ ಪತ್ತೆಯಾಗಿವೆ. ಅಗತ್ಯ ವಿದ್ಯುತ್ ಮೂಲಸೌಕರ್ಯವನ್ನು ವಿಸ್ತರಿಸದೆ ಹೆಚ್ಚುವರಿ ವಿದ್ಯುತ್ ಬಳಕೆ ಮಾಡುತ್ತಿರುವುದರಿಂದ ಸಾರ್ವಜನಿಕ ವಿದ್ಯುತ್ ಜಾಲದ ಮೇಲೆ ಹೆಚ್ಚಿನ ಒತ್ತಡ ಉಂಟಾಗಿ, ಅಕ್ಕಪಕ್ಕದ ನಿವಾಸಿಗಳು ಹಾಗೂ ಇತರ ಗ್ರಾಹಕರಿಗೆ ಗುಣಮಟ್ಟದ ವಿದ್ಯುತ್ ಪೂರೈಕೆಯಲ್ಲಿ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇದೆ. ಈ ವಿಷಯವನ್ನು ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಲಾಗಿದ್ದು, ಸಾರ್ವಜನಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಇಂತಹ ಪ್ರಕರಣಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ಅವರು ನಿರ್ದೇಶನ ನೀಡಿದ್ದಾರೆ. ಅದರಂತೆ, ರಾಜ್ಯಾದ್ಯಂತ ಅನುಮೋದಿತ ವಿದ್ಯುತ್ ಭಾರವನ್ನು ಮೀರಿದರೂ ಅಗತ್ಯ ಮೂಲಸೌಕರ್ಯವನ್ನು ನಿರ್ಮಿಸದ ಯೋಜನೆಗಳನ್ನು ಗುರುತಿಸಿ ಸಮಗ್ರ ವರದಿ ಸಲ್ಲಿಸುವಂತೆ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರಾದ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಅವರಿಗೆ ಸೂಚನೆ ನೀಡಲಾಗಿದೆ.

> ಸಾರ್ವಜನಿಕರಿಗೆ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆ ದೊರೆಯಬೇಕು, ಸಾರ್ವಜನಿಕ ವಿದ್ಯುತ್ ಮೂಲಸೌಕರ್ಯದ ಮೇಲೆ ಅನಗತ್ಯ ಒತ್ತಡ ಉಂಟಾಗಬಾರದು ಹಾಗೂ ಸರ್ಕಾರದ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಬಾರದು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ ಸಾಕಷ್ಟು ಸಮಯಾವಕಾಶ ನೀಡಲಾಗಿದೆ. ಆದರೂ ನಿಯಮ ಪಾಲನೆ ಆಗದಿದ್ದಲ್ಲಿ, ಮಾನ್ಯ ಮುಖ್ಯಮಂತ್ರಿಗಳ ನಿರ್ದೇಶನದಂತೆ ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡಲು ಅಗತ್ಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುವುದು.
> **ಕೆ.ಜೆ. ಜಾರ್ಜ್ ಇಂಧನ ಹಾಗೂ ಪ್ರವಾಸೋದ್ಯಮ ಸಚಿವರು, ಕರ್ನಾಟಕ ಸರ್ಕಾರ**

## ಕುಸುಮ್ ಬಿ-ಸೆಪ್ಟೆಂಬರ್ 30ರೊಳಗೆ ಬಾಕಿ ಸೌರ ಪಂಪ್‌ಸೆಟ್‌ಗಳ ಅಳವಡಿಕೆಗೆ ಕ್ರೆಡಲ್ ಎಂಡಿ ಸೂಚನೆ

# ಕುಸುಮ್-ಬಿ ಯೋಜನೆ ಪ್ರಗತಿ ಪರಿಶೀಲಿಸಿದ ಕ್ರೆಡಲ್ ಎಂಡಿ ದಿವ್ಯಾ ಪ್ರಭು

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂಗಳೂರು:** ಕುಸುಮ್-ಬಿ ಯೋಜನೆಯಡಿ ಮಂಜೂರಾಗಿ ಅಳವಡಿಸಲು ಬಾಕಿ ಇರುವ ಸೌರ ಪಂಪ್‌ಸೆಟ್‌ಗಳನ್ನು ಸೆಪ್ಟೆಂಬರ್ 30ರೊಳಗೆ ಅಳವಡಿಸುವಂತೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕಿ ದಿವ್ಯಾ ಪ್ರಭು ಜಿ.ಆರ್.ಜೆ. ಅವರು ಕ್ರೆಡಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ರೈತರಿಗೆ ಸೌರ ಚಾಲಿತ ಪಂಪ್‌ಸೆಟ್‌ಗಳ ಮೂಲಕ ಸುಸ್ಥಿರ ನೀರಾವರಿ ಸೌಲಭ್ಯ ಒದಗಿಸುವ ಪಿಎಂ-ಕುಸುಮ್ ಬಿ ಯೋಜನೆಯ ಕುರಿತು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಮಾರ್ಗದರ್ಶನದ ಮೇರೆಗೆ ಕ್ರೆಡಲ್ ಕಚೇರಿಯಲ್ಲಿ ಶುಕ್ರವಾರ ಅವರು ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಜಿಲ್ಲಾವಾರು ಪ್ರಗತಿಯನ್ನು ಪರಿಶೀಲಿಸಿದ ದಿವ್ಯಾ ಪ್ರಭು ಅವರು, "ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಇದುವರೆಗೆ 27,663 ಸೌರ ಪಂಪ್‌ಸೆಟ್‌ಗಳನ್ನು ಯಶಸ್ವಿಯಾಗಿ ಅಳವಡಿಸಲಾಗಿದೆ," ಎಂದು ತಿಳಿಸಿದರು.

"ಯೋಜನೆಯಡಿ ಈವರೆಗೆ ಸುಮಾರು 1.05 ಲಕ್ಷ ರೈತರು ನೋಂದಣಿ ಮಾಡಿಕೊಂಡಿದ್ದು, ಅವರಲ್ಲಿ 40,000 ಫಲಾನುಭವಿಗಳನ್ನು ಆಯ್ಕೆ ಮಾಡಿ ಪಂಪ್‌ಸೆಟ್‌ಗಳನ್ನು ಮಂಜೂರು ಮಾಡಲಾಗಿದೆ. ಅವರಿಗೆ 2026ರ ಸೆಪ್ಟೆಂಬರ್ 30ರೊಳಗೆ ಬಾಕಿ ಸೌರ ಪಂಪ್‌ಸೆಟ್‌ಗಳ ಅಳವಡಿಸುವಂತೆ ಸೂಚನೆ ನೀಡಲಾಗಿದೆ," ಎಂದರು.



ರೈತರಿಗೆ ಹಗಲಿನ ವೇಳೆಯಲ್ಲೇ ಗುಣಮಟ್ಟದ ವಿದ್ಯುತ್ ಪೂರೈಸುವ ಮೂಲಕ ಸಾಂಪ್ರದಾಯಿಕ ಇಂಧನದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಯೋಜನೆ ಇದಾಗಿದ್ದು, ಸಕಾಲಿಕ ಅನುಷ್ಠಾನದಿಂದ ರೈತರಿಗೆ ಯಾವುದೇ ವಿಳಂಬವಿಲ್ಲದೆ ತಲುಪಲಿದೆ. ಎಲ್ಲಾ ಪಾಲುದಾರರು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ನಿಗದಿತ ಅವಧಿಯೊಳಗೆ ಗುರಿ ಸಾಧಿಸಬೇಕು ಎಂದು ಅಧಿಕಾರಿಗಳಿಗೆ ಅವರು ಸೂಚಿಸಿದ್ದಾರೆ.

ಅನುಷ್ಠಾನದ ವೇಳೆ ಕ್ಷೇತ್ರ ಮಟ್ಟದಲ್ಲಿ ಎದುರಾಗುವ ಯಾವುದೇ ಸಮಸ್ಯೆಗಳನ್ನು ತಕ್ಷಣವೇ ಕ್ರೆಡಲ್ ಗಮನಕ್ಕೆ ತರಬೇಕು. ಅವುಗಳ ಶೀಘ್ರ ಪರಿಹಾರಕ್ಕಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಹಾಗೂ ಸಂಸ್ಥೆಯ ಪ್ರತಿನಿಧಿಗಳಿಗೆ ಅವರು ಸೂಚಿಸಿದರು.

"ಯೋಜನೆಯ ಮೇಲ್ವಿಚಾರಣೆ ಮಾಡಲು ಹಾಗೂ ಗಡುವಿನೊಳಗೆ ಕಾಮಗಾರಿ ಪೂರ್ಣಗೊಳಿಸಲು ಸಭೆಯಲ್ಲಿ ಪ್ರತಿಯೊಂದು ಸಂಸ್ಥೆಗೆ ಮಾಸಿಕ ಗುರಿಗಳನ್ನು ನಿಗದಿಪಡಿಸಲಾಗಿದೆ," ಎಂದು ದಿವ್ಯಾ ಪ್ರಭು ತಿಳಿಸಿದರು.

"ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕ್ರೆಡಲ್ ವತಿಯಿಂದ 13 ವೆಂಡರ್‌ಗಳನ್ನು ನೋಂದಾಯಿಸಲಾಗಿದೆ. ಸೌರ ಪಂಪ್ ಸೆಟ್ ಅಳವಡಿಕೆಗೆ ಬಳಕೆಯಾಗುವ ಸಾಮಗ್ರಿಗಳು ಹಾಗೂ ಕಾಮಗಾರಿಯ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು. ಕಾಮಗಾರಿ ಸಕಾಲದಲ್ಲಿ ಪೂರ್ಣಗೊಳ್ಳುವುದು ಎಷ್ಟು ಮುಖ್ಯವೋ, ಗುಣಮಟ್ಟ ಕಾಯ್ದುಕೊಳ್ಳುವುದು ಅಷ್ಟೇ ಮುಖ್ಯ. ಖುದ್ದು ಕ್ಷೇತ್ರ ಪರಿಶೀಲನೆ ನಡೆಸಿ, ಗುಣಮಟ್ಟವನ್ನು ಪರಿಶೀಲಿಸುತ್ತೇನೆ," ಎಂದು ಅವರು ತಿಳಿಸಿದರು.

ಸಬ್ಸಿಡಿ ವಿವರ: ಯೋಜನೆಗೆ ರಾಜ್ಯ ಸರ್ಕಾರದಿಂದ ಶೇ.50ರಷ್ಟು ಸಬ್ಸಿಡಿ ದೊರೆತರೆ ಕೇಂದ್ರ ಸರ್ಕಾರದಿಂದ ಶೇ.30ರಷ್ಟು ಸಬ್ಸಿಡಿ ದೊರೆಯಲಿದ್ದು ಫಲಾನುಭವಿ ರೈತರಿಂದ ಶೇ.20ರಷ್ಟು ಮೊತ್ತವನ್ನು ಭರಿಸಬೇಕಿದೆ.

ಸಭೆಯಲ್ಲಿ ಕೆಆರ್‌ಇಡಿಎಲ್ ತಾಂತ್ರಿಕ ಮಹಾಪ್ರಬಂಧಕರಾದ ದಿವಾಕರ್, ತಾಂತ್ರಿಕ ಸಲಹೆಗಾರರಾದ ಜಗದೀಶ್ ಬೆಳಗಲಿ, ಉಪ ಮಹಾಪ್ರಬಂಧಕರಾದ ವಿದ್ಯಾವತಿ ಶೆಟ್ಟರ್, ಕೆಆರ್‌ಇಡಿಎಲ್‌ನ ಹಿರಿಯ ಅಧಿಕಾರಿಗಳು ಹಾಗೂ ನೋಂದಾಯಿತ 13 ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ವ್ಯಸನ ಮುಕ್ತ ದಿನಾಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಲು ಡಿಸಿ ಸೂಚನೆ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂ.ಗ್ರಾ ಜಿಲ್ಲೆ :** ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ಪ್ರತಿ ವರ್ಷ ಆಗಸ್ಟ್ 1ರಂದು ಆಚರಿಸುವ ವ್ಯಸನ ಮುಕ್ತ ದಿನಾಚರಣೆಯನ್ನು ಜಿಲ್ಲಾ ಹಾಗೂ ತಾಲೂಕುಗಳಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕೆ.ಎನ್ ಅನುರಾಧ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಹಿನ್ನೆಲೆ ವ್ಯಸನಮುಕ್ತ ದಿನಾಚರಣೆಯ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಹಾಂತ ಶಿವಯೋಗಿಗಳ ಜನ್ಮದಿನವನ್ನು ರಾಜ್ಯ ಸರ್ಕಾರವು ಪ್ರತಿ ವರ್ಷ ಆಗಸ್ಟ್ 1ರಂದು ವ್ಯಸನ ಮುಕ್ತ ದಿನವನ್ನಾಗಿ ಆಚರಣೆ ಮಾಡುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಡಳಿತ ಸಹಯೋಗದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಆಚರಣೆ ಮಾಡಬೇಕು. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ನೇತೃತ್ವದಲ್ಲಿ ಕಾರ್ಯಕ್ರಮ ಆಯೋಜಿಸಬೇಕು ಎಂದರು. ಕಾರ್ಯಕ್ರಮಕ್ಕೆ ವೇದಿಕೆ ಸಿದ್ಧತೆ, ಉಪನ್ಯಾಸ, ಕುಡಿಯುವ ನೀರು, ಉಪಹಾರ, ಕಾಲೇಜು ಮತ್ತು ಹಾಸ್ಟೆಲ್ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲು ಕ್ರಮ ವಹಿಸಿ ಎಂದರು. ಸಭೆಯಲ್ಲಿ ಎಸ್ಪಿ ಚಂದ್ರಕಾಂತ್ ಎಂ.ವಿ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕ ಅಶೋಕ್‌ಕುಮಾರ್ ಡಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮೋಹನ್ , ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

**ಸಂಜೆ ಸಮಯ ಸುದ್ದಿ (ಜುಲೈ 25)**

**ಹಾಸನ:** ಹೊಳೆನರಸೀಪುರ ಉಪ ವಿಭಾಗದ ಹಳ್ಳಿಮೈಸೂರು ಶಾಖಾ ವ್ಯಾಪ್ತಿಯ ಕಲ್ಲಹಳ್ಳಿ ಗ್ರಾಮದಿಂದ ಹಳ್ಳಿಮೈಸೂರು ಉಪ ಸ್ಥಾವರದ ವರೆಗೆ ಹೆಚ್.ಟಿ ಹಾಗೂ ಎಲ್.ಟಿ ಮಾರ್ಗಗಳಿಗೆ ಅಆತಜಡಿ ಅಂಟಿಜಣಥಿಣಂಡಿ ಅಳವಡಿಸುವ ಕಾಮಗಾರಿಯನ್ನು ಮೆ// ಸೋಲಾರ್ 91 ರವರು ನಿರ್ವಹಿಸುತ್ತಿರುವುದರಿಂದ ಜು. 25 ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯ ವರೆಗೆ ಲೈನ್ ಕ್ಲಿಯರ್ (ಮಾರ್ಗ ಮೂಕ್ತತೆ) ತೆಗೆದುಕೊಳ್ಳಬೇಕಾಗಿರುವುದರಿಂದ ಈ5- ದೇವರಗುಡ್ಡೇನಹಳ್ಳಿ ಮತ್ತು ಈ6 ಕಲ್ಲಹಳ್ಳಿ ಫೀಡರ್‌ಗಳ ವ್ಯಾಪ್ತಿಗೆ ಬರುವ ಗ್ರಾಮಗಳಾದ ಕಲ್ಲಹಳ್ಳಿ, ಜೋಗಿ ಕೊಪ್ಪಲು, ದೇವರಗುಡ್ಡೇನಹಳ್ಳಿ, ಗೋಹಳ್ಳಿ ಹಾಗೂ ಸುತ್ತಮುತ್ತಲ್ಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಸಹಕರಿಸುವಂತೆ ಚಾಮುಂಡೇಶ್ವರಿ ವಿದ್ಯುತ್‌ಚ್ಛಕ್ತಿ ಸರಬರಾಜು ನಿಗಮ ನಿಯಮಿತ ಹೊಳೆನರಸೀಪುರ ಕಾರ್ಯ ಪಾಲನಾ ಉಪವಿಭಾಗ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕೋರಿದ್ದಾರೆ.

## ದೂರ ಶಿಕ್ಷಣ ಪದವಿಗೆ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂ. ಗ್ರಾ. ಜಿಲ್ಲೆ:** ಅಲ್ಪಸಂಖ್ಯಾತರ ನಿರ್ದೇಶನಾಲಯ ಮತ್ತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪರಸ್ಪರ ಒಡಂಬಡಿಕೆಯೊಂದಿಗೆ ದೂರ ಶಿಕ್ಷಣ ಮಾದರಿಯಲ್ಲಿ ಪದವಿ/ಸ್ನಾತ್ತಕೋತ್ತರ ಪದವಿಯ ಉನ್ನತ ಶಿಕ್ಷಣವನ್ನು ಮಾಡಲು ಶಾಲಾ/ಕಾಲೇಜಿನಿಂದ ಹೊರಗುಳಿದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2025-26 ನೇ ಸಾಲಿನಿಂದ ಅಲ್ಪಸಂಖ್ಯಾತರ ನಿರ್ದೇಶನಾಲಯ ಮತ್ತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪರಸ್ಪರ ಒಡಂಬಡಿಕೆಯೊಂದಿಗೆ ಬೆಂಗಳೂರಿನ ಹಜ್ ಭವನದಲ್ಲಿ ಪ್ರಾದೇಶಿಕ ಕೇಂದ್ರವನ್ನು ತೆರೆಯಲಾಗಿದ್ದು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ದೂರ ಶಿಕ್ಷಣದ ಮುಖಾಂತರ ಸ್ನಾತಕ ಪದವಿ/ಸ್ನಾತಕೋತ್ತರ ಪದವಿ, ಶಿಕ್ಷಣ ಕ್ರಮಗಳಲ್ಲಿ ವ್ಯಾಸಂಗ ಮಾಡಬಯಸುವ ಅರ್ಹ ಅಲ್ಪಸಂಖ್ಯಾತರ ( ಮುಸ್ಲಿಂ, ಕ್ರಿಶ್ಚಿಯನ್, ಜೈನ್,ಬೌದ್ಧರು,ಸಿಬ್ಬರು,ಪಾರ್ಸಿ) ವಿದ್ಯಾರ್ಥಿಗಳಿಗೆ ದೂರ ಶಿಕ್ಷಣದ ಮೂಲಕ ಶಿಕ್ಷಣವನ್ನು ನೀಡಲಾಗುತಿದೆ. ಆಸಕ್ತರು ಜುಲೈ 31 ರೊಳಗೆ ಆನ್ ಲೈನ್ ನಲ್ಲಿ -https://dom.karnataka.gov.in, https://minority.ksouportal.com ವೆಬ್ ಸೈಟ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಪ್ರವೇಶಾತಿಗಾಗಿ ಬೆಂಗಳೂರಿನ ಹಜ್ ಭವನದಲ್ಲಿ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರವನ್ನು ಸ್ಥಾಪಿಸಲಾಗಿದೆ.

# ಎಸ್‌ಐಆರ್ ಪ್ರಕ್ರಿಯೆ: 7,49,582 ಗಣತಿ ನಮೂನೆಗಳ ಗಣಕೀಕರಣ

## ಜಿಲ್ಲೆಯಲ್ಲಿ ಶೇ.100 ರಷ್ಟು ಗಣತಿ ನಮೂನೆಗಳ ವಿತರಣೆ, ಮನೆ ಮನೆ ಭೇಟಿ ವೇಳೆ 15,721 ಮೃತರು ಪತ್ತೆ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂ.ಗ್ರಾ.ಜಿಲ್ಲೆ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ-2026ರ (ಎಸ್‌ಐಆರ್) ಪ್ರಕ್ರಿಯೆ ಬಿರುಸಿನಿಂದ ಸಾಗುತ್ತಿದ್ದು, ಜಿಲ್ಲೆಯಾದ್ಯಂತ ಒಟ್ಟು 15,721 ಮೃತರ ಹೆಸರು ಮತದಾರರ ಪಟ್ಟಿಯಲ್ಲಿ ಪತ್ತೆಯಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಮಾಹಿತಿ ನೀಡಿದರು.

ಜಿಲ್ಲಾಡಳಿತ ಭವನದ ನ್ಯಾಯಾಲಯ ಸಭಾಂಗಣದಲ್ಲಿ ಭಾರತ ಚುನಾವಣಾ ಆಯೋಗದ ವತಿಯಿಂದ ಶುಕ್ರವಾರ ಹಮ್ಮಿಕೊಳ್ಳಲಾದ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ-2026ರ (ಎಸ್‌ಐಆರ್) ಪ್ರಕ್ರಿಯೆ ಪ್ರಗತಿ ಕುರಿತು ಮಾತನಾಡಿದರು. ಬಿಎಲ್‌ಒಗಳು ಮನೆ ಮನೆ ಭೇಟಿ ನೀಡಿದ ಸಂದರ್ಭದಲ್ಲಿ ಜುಲೈ 24 ರ ವರೆಗೆ ಜಿಲ್ಲೆಯಾದ್ಯಂತ ಒಟ್ಟು 35,198 ಮತದಾರರನ್ನು ಸ್ಥಳಾಂತರ, ವಲಸೆ, ಮರಣ, ದ್ವಿಪ್ರತಿ (ಡೂಪ್ಲಿಕೇಟ್) ಸೇರಿದಂತೆ ಇತರೆ ಕಾರಣಗಳಿಗಾಗಿ ಗುರುತಿಸಲಾಗಿದೆ. ಒಟ್ಟಾರೆಯಾಗಿ ಜಿಲ್ಲೆಯಲ್ಲಿ 1150 ಮತದಾರರು ಗೈರು ಹಾಜರಾಗಿದ್ದಾರೆ. ಉಳಿದಿದ್ದು, 12,165 ಶಾಶ್ವತ ವಲಸೆ, 15,721 ಮೃತ, 5,721 ದ್ವಿಪ್ರತಿ ನಮೂನೆಗಳು ಹಾಗೂ 441 ಇತರೆ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ.

ಕ್ಷೇತ್ರವಾರು ವಿವರ: ದೊಡ್ಡಬಳ್ಳಾಪುರ ಕ್ಷೇತ್ರದಲ್ಲಿ ಒಟ್ಟು 7,143 ಪ್ರಕರಣಗಳನ್ನು ಗುರುತಿಸಲಾಗಿದ್ದು,



ಇದರಲ್ಲಿ 400 ಸಂಗ್ರಹವಾಗದ, 1321 ಶಾಶ್ವತ ವಲಸೆ, 3390 ಮರಣ, 1830 ದ್ವಿಪ್ರತಿ ಹಾಗೂ 202 ಇತರೆ ಪ್ರಕರಣಗಳಿವೆ.

ನೆಲಮಂಗಲ ಕ್ಷೇತ್ರದಲ್ಲಿ ಒಟ್ಟು 10,640 ಪ್ರಕರಣಗಳು ಪತ್ತೆಯಾಗಿದ್ದು, 257 ಸಂಗ್ರಹವಾಗದ, 4609 ಶಾಶ್ವತ ವಲಸೆ, 4468 ಮರಣ, 1264 ದ್ವಿಪ್ರತಿ ಮತ್ತು 42 ಇತರೆ ಪ್ರಕರಣಗಳಿವೆ.

ಹೊಸಕೋಟೆ ಕ್ಷೇತ್ರದಲ್ಲಿ ಒಟ್ಟು 9204 ಪ್ರಕರಣಗಳಿದ್ದು, 211 ಸಂಗ್ರಹವಾಗದ, 2785 ಶಾಶ್ವತ ವಲಸೆ, 4663 ಮರಣ, 1369 ದ್ವಿಪ್ರತಿ ಹಾಗೂ 176 ಇತರೆ ಪ್ರಕರಣಗಳಿವೆ.

ದೇವನಹಳ್ಳಿ ಕ್ಷೇತ್ರದಲ್ಲಿ ಒಟ್ಟು 8,211 ಪ್ರಕರಣಗಳಿದ್ದು, 282 ಸಂಗ್ರಹವಾಗದ, 3450 ಶಾಶ್ವತ ವಲಸೆ, 3200 ಮರಣ, 1258 ದ್ವಿಪ್ರತಿ ಹಾಗೂ 21 ಇತರೆ ಪ್ರಕರಣಗಳು ಒಳಗೊಂಡಿವೆ.

ವಿಧಾನಸಭಾವಾರು ಎನುಮರೇಷನ್ ನಮೂನೆ ವಿತರಣೆ ಮತ್ತು ಗಣಕೀಕರಣ ಪ್ರಗತಿ:ಜಿಲ್ಲೆಯ ಒಟ್ಟು 9,12,913 ಮತದಾರರ ಪೈಕಿ ಇಂದಿನವರೆಗೆ ಬಿಎಲ್‌ಒಗಳು ಒಟ್ಟು 9,12,913 ಎನುಮರೇಷನ್ ನಮೂನೆಗಳನ್ನು ವಿತರಿಸಿದ್ದು, ಈ ಪೈಕಿ 7,49,582 ನಮೂನೆಗಳನ್ನು ಗಣಕೀಕರಿಸಲಾಗಿದೆ.

ಜಿಲ್ಲೆಯ 04 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮತಗಟ್ಟೆಗಳ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಜೂನ್ 30 ರಿಂದಲೇ ಎನುಮರೇಷನ್ ಫಾರಂ ಗಳೊಂದಿಗೆ (ಇಟಿಣಟಜಡಿಚಿಣಾಟಿ ಈಡಿಟಥ) ಮತದಾರರ ಮನೆ ಮನೆಗೆ ಭೇಟಿ ನೀಡಲು ಪ್ರಾರಂಭಿಸಿದ್ದಾರೆ. ಈ ಮಾಹಿತಿ ಸಂಗ್ರಹ ಹಾಗೂ ಸಂಗ್ರಹಿಸಿದ ನಮೂನೆಗಳ ಗಣಕೀಕರಣ ಪ್ರಕ್ರಿಯೆಯು ಜೂನ್ 30 ರಿಂದ ಆಗಸ್ಟ್ 08 ರವರೆಗೆ ನಡೆಯಲಿದೆ. ಜಿಲ್ಲೆಯಲ್ಲಿ ಜೂನ್ 16 ರವರೆಗೆ ಒಟ್ಟು 9,12,913 ಮತದಾರರಿದ್ದು, ಬಿಎಲ್‌ಒಗಳಿಗೆ ಅಗತ್ಯವಿರುವ ಎಲ್ಲಾ ಫಾರಂಗಳನ್ನು ಮುದ್ರಿಸಿ ವಿತರಿಸಲಾಗಿದೆ.

ಕ್ಷೇತ್ರವಾರು ವಿವರ: 180-ದೊಡ್ಡಬಳ್ಳಾಪುರ: ಒಟ್ಟು 2,23,400 ಮತದಾರರಿದ್ದು, ಬಿಎಲ್‌ಒಗಳಿಂದ ಎಲ್ಲಾ 2,23,400 ನಮೂನೆಗಳನ್ನು ವಿತರಿಸಲಾಗಿದ್ದು, 1,77,220 ನಮೂನೆಗಳನ್ನು ಗಣಕೀಕರಿಸಲಾಗಿದೆ.

181-ನೆಲಮಂಗಲ: ಒಟ್ಟು 2,24,104 ಮತದಾರರಿದ್ದು, ಎಲ್ಲಾ 2,24,104 ನಮೂನೆಗಳನ್ನು ವಿತರಿಸಲಾಗಿದ್ದು, 1,80,105 ನಮೂನೆಗಳನ್ನು ಗಣಕೀಕರಿಸಲಾಗಿದೆ.

178-ಹೊಸಕೋಟೆ: ಒಟ್ಟು 2,46,155 ಮತದಾರರಿದ್ದು, ಎಲ್ಲಾ 2,46,155 ನಮೂನೆಗಳನ್ನು ವಿತರಿಸಲಾಗಿದ್ದು, 2,06,208 ನಮೂನೆಗಳನ್ನು ಗಣಕೀಕರಿಸಲಾಗಿದೆ.

179-ದೇವನಹಳ್ಳಿ: ಒಟ್ಟು 2,19,254 ಮತದಾರರಿದ್ದು, ಎಲ್ಲಾ 2,19,254 ನಮೂನೆಗಳನ್ನು ವಿತರಿಸಲಾಗಿದ್ದು, 1,86,049 ನಮೂನೆಗಳನ್ನು ಗಣಕೀಕರಿಸಲಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಾಸಂತಿ ಅಮರ್, ಪೊಲೀಸ್ ವರಿಷ್ಠಾಧಿಕಾರಿ ಎಂ.ವಿ ಚಂದ್ರಕಾಂತ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಹಾಗೂ ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿ ಮಂಜುನಾಥ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನಿಯಮ ಉಲ್ಲಂಘನೆ, ಸ್ವಜನ ಪಕ್ಷಪಾತ, ಲಂಚದ ಬೇಡಿಕೆ ಆರೋಪ

## ಪಶುವೈದ್ಯಾಧಿಕಾರಿ ನೇಮಕಾತಿಯನ್ನು ಸರ್ಕಾರ ತಡೆಹಿಡಿಯಲಿ: ಛಲವಾದಿ ನಾರಾಯಣಸ್ವಾಮಿ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗದ ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ಬೃಹತ್ ಅಕ್ರಮ ನಡೆದಿದ್ದು, ಕೂಡಲೇ ಸರ್ಕಾರ ಆಯ್ಕೆ ಪಟ್ಟಿಯನ್ನು ತಡೆಹಿಡಿದು ಮರು ಪರೀಕ್ಷೆ ಮಾಡಬೇಕು ಎಂದು ವಿಧಾನ ಪರಿಷತ್‌ನಲ್ಲಿನ ವಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಗ್ರಹಿಸಿದ್ದಾರೆ.

ವಿಧಾನ ಸೌಧದಲ್ಲಿನ ತಮ್ಮ ಕೊಠಡಿಯಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸರ್ಕಾರದ ಅಧಿಸೂಚನೆಯನ್ನು ಉಲ್ಲಂಘಿಸಿ ಎಸ್‌ಸಿ ಮತ್ತು ಎಸ್‌ಟಿಗೆ ಮೀಸಲಾದ ಬ್ಯಾಕ್ ಲಾಗ್ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿದೆ. ಆಯ್ಕೆಯಾಗಲು? 80 ಲಕ್ಷದ ಆರೋಪ ಕೇಳಿಬಂದಿದೆ. ಅಲ್ಲದೆ ಅಮಾನತು ಆಗಿರುವ ಅಧ್ಯಕ್ಷರು ಸ್ವಜನಪಕ್ಷಪಾತ ನಡೆಸಿರುವ ಆರೋಪಗಳಿವೆ. ಈ ಎಲ್ಲಾ ಹಿನ್ನೆಲೆಯಲ್ಲಿ ನೇಮಕಾತಿಯನ್ನು ತಡೆಹಿಡಿಯಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಲೋಕಸೇವಾ ಆಯೋಗವು 2024 ರಲ್ಲಿ 400 ಹುದ್ದೆ ಭರ್ತಿಗೆ ಅಧಿಸೂಚನೆ ಹೊರಡಿಸಿತ್ತು. ಇದರಲ್ಲಿ 342 ಸಾಮಾನ್ಯ ಹಾಗೂ 58 ಬ್ಯಾಕ್ ಲಾಗ್ ಹುದ್ದೆಗಳಿದ್ದವು. 58 ಬ್ಯಾಕ್ ಲಾಗ್ ಹುದ್ದೆಗಳು ಪರಿಶಿಷ್ಟ ಜಾತಿ/ವರ್ಗಕ್ಕೆ ಮೀಸಲಿದ್ದವು. 342 ಹುದ್ದೆಗಳಿಗೆ ಪರೀಕ್ಷೆ ಮತ್ತು ಸಂದರ್ಶನ ಮಾಡಬಹುದು. ಆದರೆ ಬ್ಯಾಕ್ ಲಾಗ್ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಿಷೇಧಿಸಲಾಗಿದೆ ಎಂಬ 2025 ರ ಆದೇಶ ಉಲ್ಲಂಘಿಸಿ ಸ್ಪರ್ಧಾತ್ಮಕ ಪರೀಕ್ಷೆಗೆ ಎಸ್‌ಟಿ/ ಎಸ್‌ಸಿ ಅಭ್ಯರ್ಥಿಗಳನ್ನು ಒಳಪಡಿಸಿದ್ದಾರೆ ಎಂದು ದೂರಿದರು.



80 ಲಕ್ಷ ಲಂಚಕ್ಕೆ ಬೇಡಿಕೆ....ಪಶುವೈದ್ಯಾಧಿಕಾರಿ ಹುದ್ದೆಗೆ 80 ಲಕ್ಷ ಲಂಚ ನಡೆದಿದೆ ಎಂಬ ಆರೋಪ ಕೇಳಿಬಂದಿವೆ. ಇದಕ್ಕೆ ಈವರೆಗೆ ಸರ್ಕಾರ ಉತ್ತರ ನೀಡಿಲ್ಲ. ಕಾನೂನುಬಾಹಿರವಾಗಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡುವಂತಿಲ್ಲ. ಅದರೂ ಇವರಿಗೆ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.

ಅಧ್ಯಕ್ಷರಿಂದ ಸ್ವಜನಪಕ್ಷಪಾತ ಆರೋಪ...ಸರ್ಕಾರದ ಆದೇಶವನ್ನೇ ಧಿಕ್ಕರಿಸಿ ಕೆಪಿಎಸ್‌ಸಿ ನೇಮಕಾತಿ ನಡೆದಿರುವುದಲ್ಲದೆ ಸ್ವಜನ ಪಕ್ಷಪಾತವೂ ನಡೆದಿದೆ. ಕಾಲೇಜುಗಳಲ್ಲಿ ಗೋಲ್ಡ್ ಮೆಡಲ್ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳು ಆಯ್ಕೆಯಾಗಿಲ್ಲ. ಕಡಿಮೆ ಅಂಕ ಪಡೆದವರು, ಹಲವಾರು ಬಾರಿ ಫೇಲ್ ಆದವರು ಆಯ್ಕೆಯಾಗಿದ್ದಾರೆ. ಕೆಪಿಎಸ್‌ಸಿ ಅಧ್ಯಕ್ಷರ ನಿಕಟ ಸಂಬಂಧಿ ಹೆಬ್ಬಾಳದ ಕಾಮಧೇನು ವೆಟರ್ನರಿ ಕಾಲೇಜು ಬಾಯ್ಸ್ ಹಾಸ್ಟೆಲ್‌ನ ಸುಗುರೇಶ್ ಜಾಕಾ ಆಯ್ಕೆಯಾಗಿದ್ದಾರೆ. ಹಣ ಕೊಟ್ಟವರನ್ನು ಆಯ್ಕೆ ಮಾಡಿದ್ದಾರೆ ಎಂಬುದು ಇದರಲ್ಲಿ ತಿಳಿಯುತ್ತದೆ ಎಂದು ಹೇಳಿದರು. ಎಸ್‌ಟಿ/ಎಸ್‌ಟಿ ಅಭ್ಯರ್ಥಿಗಳಿಗೆ ಯಾವುದೇ ಕಾರಣಕ್ಕೂ ಪರೀಕ್ಷೆ ಮಾಡುವಂತಿಲ್ಲ. ಅವರನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಬೇಕು ಎಂದು ಒತ್ತಾಯಿಸಿದರು.

ಎಒ ಮತ್ತು ಎಎಒ ನೇಮಕಾತಿ ಅಕ್ರಮ... ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕೃಷಿ ಅಧಿಕಾರಿ (ಎಒ) ಮತ್ತು ಸಹಾಯಕ ಕೃಷಿ ಅಧಿಕಾರಿ (ಎಎಒ) ನೇಮಕಾತಿಯಲ್ಲೂ ನಿಯಮ ಉಲ್ಲಂಘಿಸಲಾಗಿದೆ. ಈ ಬಗ್ಗೆ ವಿದ್ಯಾರ್ಥಿಗಳು ಜಿಕೆವಿಕೆ ಆವರಣದಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಹೇಳಿದರು.

# ಆ. 02 ರಂದು ಪೊಲೀಸ್ ಕಾನ್ಸ್ಟೇಬಲ್ ನೇಮಕಾತಿ ಪರೀಕ್ಷೆ:

## ವ್ಯವಸ್ಥಿತ ಪಾರದರ್ಶಕ ಪರೀಕ್ಷೆಗೆ ಆದ್ಯತೆ: ಜಿಲ್ಲಾಧಿಕಾರಿ ಡಾ. ಅನುರಾಧ

**ಬೆಂ.ಗ್ರಾ.ಜಿಲ್ಲೆ:** ಆಗಸ್ಟ್ 02 ರಂದು ನಡೆಯಲಿರುವ ಕರ್ನಾಟಕ ಪೊಲೀಸ್ ಕಾನ್ಸ್ಟೇಬಲ್ ಪರೀಕ್ಷೆಗೆ ಯಾವುದೇ ರೀತಿಯ ತೊಂದರೆ, ಅಡಚಣೆ ಉಂಟಾಗದಂತೆ ವ್ಯವಸ್ಥಿತ ಸಿದ್ಧತೆ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಡಳಿತ ಭವನದ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಪೊಲೀಸ್ ಕಾನ್ಸ್ಟೇಬಲ್ ಪರೀಕ್ಷೆಯ ಪೂರ್ವ ಸಿದ್ಧತೆ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಆಗಸ್ಟ್ 02 ರಂದು ನಡೆಯಲಿರುವ ಪೊಲೀಸ್ ಕಾನ್ಸ್ಟೇಬಲ್ ಹುದ್ದೆಗಳ ನೇಮಕಾತಿ ಪರೀಕ್ಷೆಗೆ ಜಿಲ್ಲೆಯಲ್ಲಿ 07 ಪರಿಕ್ಷಾ ಕೇಂದ್ರಗಳಲ್ಲಿ 3463 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಜಿಲ್ಲೆಯಲ್ಲಿ ಎಲ್ಲಾ ಪರೀಕ್ಷಾ ಕೇಂದ್ರಗಳ ಕೊಠಡಿಗಳಲ್ಲಿ ಪಾರದರ್ಶಕ ಹಾಗೂ ಸುವ್ಯವಸ್ಥಿತವಾಗಿ ಪರೀಕ್ಷೆ ನಡೆಸುವ ನಿಟ್ಟಿನಲ್ಲಿ ಸಿಸಿ ಕ್ಯಾಮರಾ ಕಣ್ಗಾವಲು ಕಡ್ಡಾಯವಾಗಿದ್ದು, ಅವುಗಳು ಸುಸ್ಥಿತಿಯಲ್ಲಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಡಿಸಿ ಸೂಚಿಸಿದರು.

ಪರೀಕ್ಷಾ ಕೇಂದ್ರಗಳು ಹಾಗೂ ಅಭ್ಯರ್ಥಿಗಳ ಸಂಖ್ಯೆ: * ಶ್ರೀ ಕೊಂಗಾಡಿಯಪ್ಪ ಪದವಿ ಪೂರ್ವ ಕಾಲೇಜು(ಃಃ0009), ವಿವೇಕಾನಂದ ರಸ್ತೆ, ದೊಡ್ಡಬಳ್ಳಾಪುರ, ಕೇಂದ್ರ ಸಂಖ್ಯೆ: 101, ಅಭ್ಯರ್ಥಿಗಳ ಸಂಖ್ಯೆ: 751. * ಸರ್ಕಾರಿ ಪದವಿ ಪೂರ್ವ ಕಾಲೇಜು(ಃಃ0010), ಗಂಗಾಧರಪುರ, ಮಾದಗೊಂಡನಹಳ್ಳಿ ರಸ್ತೆ, ದೊಡ್ಡಬಳ್ಳಾಪುರ ಕೇಂದ್ರ ಸಂಕೇತ: 102, ಅಭ್ಯರ್ಥಿಗಳ ಸಂಖ್ಯೆ: 432. * ಸರ್ಕಾರಿ ಪದವಿ ಪೂರ್ವ ಕಾಲೇಜು(ಪ್ರೌಢಶಾಲೆ ವಿಭಾಗ) (ಃಃ0047), ಹೊಸ ಬಸ್ ನಿಲ್ದಾಣ(ಕೆಎಸ್‌ಆರ್‌ಟಿಸಿ), ದೊಡ್ಡಬಳ್ಳಾಪುರ ಕೇಂದ್ರ ಸಂಕೇತ: 103, ಅಭ್ಯರ್ಥಿಗಳ ಸಂಖ್ಯೆ: 504. * ಶ್ರೀ ದೇವರಾಜ್ ಅರಸು ಪದವಿ ಪೂರ್ವ ಕಾಲೇಜು(ಃಃ0088), ಕೊಡಿಗೆಹಳ್ಳಿ, ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 104, ಅಭ್ಯರ್ಥಿಗಳ ಸಂಖ್ಯೆ: 600.

* ವಿದ್ಯಾನಿಧಿ ಸ್ವತಂತ್ರ ಪದವಿ ಪೂರ್ವ ಕಾಲೇಜು(ಃಃ0162), ಗಂಗಾಧರಪುರ ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 105, ಅಭ್ಯರ್ಥಿಗಳ ಸಂಖ್ಯೆ: 312. * ಶ್ರೀ ವಾಣಿ ಪದವಿ ಪೂರ್ವ ಕಾಲೇಜು (ಃಃ0209) ಪಾಲನಜೋಗಿಹಳ್ಳಿ, ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 106, ಅಭ್ಯರ್ಥಿಗಳ ಸಂಖ್ಯೆ: 384. * ಸರ್ಕಾರಿ ಪ್ರಥಮ ದರ್ಜೆ ಕಾಲೇಜು, (ಃಃ3001), ಮಾದಗೊಂಡನಹಳ್ಳಿ, ಬಸವ ಭವನ ರಸ್ತೆ, ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 107, ಅಭ್ಯರ್ಥಿಗಳ ಸಂಖ್ಯೆ: 480.

## ಬಿತ್ತನೆ ಬೀಜ: 3626 ಕೆ.ಜಿ. ಮುಸುಕಿನ ಜೋಳ ಜಪ್ತಿ

**ಸಂಜೆ ಸಮಯ ಸುದ್ದಿ (ಜುಲೈ 24)**

**ಹಾಸನ:** ಹಾಸನ ಜಿಲ್ಲೆ, ಅರಕಲಗೂಡು ತಾಲ್ಲೂಕು, ಅರಕಲಗೂಡು ಮೇ॥ ಶಾಂತಲಾ ಟ್ರೇಡರ್ಸ್, ಬಿತ್ತನೆ ಬೀಜ ಮಾರಾಟ ಮಳಿಗೆಗೆ ಕೃಷಿ ಇಲಾಖೆ ಮತ್ತು ಜಾರಿದಳದ ಹಿರಿಯ ಅಧಿಕಾರಿಗಳ ಸೂಚನೆ ಮೇರೆಗೆ ಜಾರಿದಳದ ಅಧಿಕಾರಿಗಳು ಸ್ಥಳಿಯ ಕೃಷಿ ಇಲಾಖೆ ಅಧಿಕಾರಿಗಳ ಸಹಯೋಗದೊಂದಿಗೆ ದಿಢೀರ್ ದಾಳಿ ನಡೆಸಿ ಮೇ॥ ಶಾಂತಲಾ ಟ್ರೇಡರ್ಸ್, ಮಾಲೀಕರ ಸಮ್ಮುಖದಲ್ಲಿ ತಪಾಸಣೆ ನಡೆಸಿ ಬಿತ್ತನೆ ಬೀಜ ಅಧಿನಿಯಮ 1966 ಮತ್ತು ಬಿತ್ತನೆ ಬೀಜ ನಿಯಂತ್ರಣ ಆಜ್ಞೆ 1983ರ ನಿಯಮಾವಳಿಗಳನ್ನು ಉಲ್ಲಂಘಿಸಿ ಮುಸುಕಿನ ಜೋಳದ ಬಿತ್ತನೆ ಬೀಜಗಳನ್ನು ವಿತರಿಸಲು ದಾಸ್ತಾನು ಮಾಡಿದ್ದು, ನಾಲ್ಕು ತಯಾರಕ ಸಂಸ್ಥೆಗಳಿಗೆ (ಸೀಟಿ ಸೀಡ್ಸ್, ಹೈದರಾಬಾದ್, ನುಜಿವೀಡು ಸೀಡ್ಸ್, ಹೈದರಾಬಾದ್, ಕಾವೇರಿ ಸೀಡ್ ಕಂಪನಿ, ಶ್ರೀರಾಂ ಬಯೋಸೀಡ್ ಜೆನಿಟಿಕ್ಸ್) ಸಂಬಂಧಿಸಿದ 4 ಮುಸುಕಿನ ಜೋಳ ಹೈಬ್ರಿಡ್ ಬಿತ್ತನೆ ಬೀಜ (ಆದ್ಯ, ಬಾಂಡ್, ವಿಷ್ಣು ಮತ್ತು ಬಯೋಸೀಡ್ 9766)ಗಳ ಒಟ್ಟು 3626 ಕೆ.ಜಿ. ಗಳನ್ನು ಜಪ್ತಿ ಮಾಡಲಾಗಿದ್ದು, ಬಿತ್ತನೆ ಬೀಜದ ಒಟ್ಟು ಮೌಲ್ಯ ರೂ. 20,93,900 (ಇಪ್ಪತ್ತು ಲಕ್ಷದ ತೊಂಬತ್ತು ಮೂರು ಸಾವಿರದ ಒಬ್ಬೈನೂರು) ಗಳಾಗಿರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಶ್ರೀರಾಮ ಸೇವಾ ಮಂಡಳಿಯ ಎರಡನೇ ವಾರ್ಷಿಕ ಉತ್ಸವ ನೆಟ್ಟಿಗೆರೆಯಲ್ಲಿ

26 7 2026 ರಂದು ಭಾನುವಾರ ಸಂಜೆ 4 ರಿಂದ 6 ಗಂಟೆಯವರೆಗೆ ಕನಕಪುರ ರಸ್ತೆಯ ನೆಟ್ಟಿಗೇರಿಯಲ್ಲಿರುವ ಎಸ್ ವಿ ನಾರಾಯಣಸ್ವಾಮಿ ರಾವ್ ಮೆಮೋರಿಯಲ್ ಹಾಲಿನಲ್ಲಿ ಸ್ಕೂಲ್ ಆಫ್ ಮ್ಯೂಸಿಕ್ ತಂಡದ ವತಿಯಿಂದ ಹಮ್ಮಿಕೊಳ್ಳಲಿರುವ, ಕಾರ್ಯಕ್ರಮದಲ್ಲಿ ಭರತನಾಟ್ಯ, ನೃತ್ಯ ಕಾರ್ಯಕ್ರಮ ಹಾಗೂ ಸಂಗೀತ ಕಾರ್ಯಕ್ರಮಗಳು ಜರುಗಲಿದ್ದು, ಈ ವೇಳೆ ಸಾಧಕರಿಗೆ ಸನ್ಮಾನಗಳನ್ನ ಹಮ್ಮಿಕೊಂಡಿದ್ದು, ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಬೆಂಗಳೂರು ವಿಶ್ವವಿದ್ಯಾಲಯದ ಪ್ರದರ್ಶನ ಕಲಾವಿಭಾಗದ ಮುಖ್ಯಸ್ಥೆಯಾದ ಪ್ರೊಫೆಸರ್ ಡಾ. ಹಂಶಿಣಿ ನಾಗೇಂದ್ರ ವಹಿಸಲಿದ್ದು, ಸರ್ವರಿಗೂ ಕಾರ್ಯಕ್ರಮ ದಲ್ಲಿ ಭಾಗವಹಿಸಬಹುದು ಎಂದು ಮಂಡಳಿಯ ಟ್ರಸ್ಟಿ ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರ್ಗಿಲ್ ವಿಜಯ ದಿನದ ವಿಶೇಷ ಕವಿತೆ: ಯುದ್ಧ :

ಪಾಪಿಪಾಕ್ ಶ್ರೇಷ್ಠ ಭಾರತದ ನಡುವಿನ ಯುದ್ಧ /
ಸೈನಿಕರ ರಕ್ಷಣಾ ಕೋಟೆಯಂತಿಯ ಭಾರತ ಪ್ರಬುದ್ಧ /
ಶಾಂತಿಯ ಭಾರತ ಕೆಣಕಿದರೆ ಗ್ಯಾರಂಟಿ ಯುದ್ಧ /
ಭಾರತ ಬಯಸುವ ಆದರ್ಶ ಶಾಂತಿಯ ಬುದ್ಧ /

ಕಾರ್ಗಿಲ್ ದಿನವೇ ಆಪರೇಷನ್ ವಿಜಯ /
ಭಾರತದ ಸೈನಿಕರ ಗೆಲುವೇ ನಮ್ಮ ಜಯ /
ಕಾರ್ಗಿಲ್ ಯುದ್ಧದಿ ಹಲವು ಸೈನಿಕರು ಹುತಾತ್ಮ /
ಅವರ ಸ್ಮಾರಕಗಳು ನಮ್ಮೆದುರುಗಿನ ಮಹಾತ್ಮ /

ಯುದ್ಧವೆಂದರೆ ಸಾವು ನೋವು ರಕ್ತಪಾತ /
ಕಾರ್ಗಿಲ್ ಯುದ್ಧ ಪ್ರದೇಶಗಳೇ ಕಣಿವೆ ಪ್ರಪಾತ/
ಯುದ್ಧವೆಂಬುದು ದ್ವೇಷ ಸರ್ವನಾಶ /
ಮನುಷ್ಯ ಮನುಷ್ಯನ ಪ್ರೀತಿಸುವುದೇ ಜಗದ ವಿಕಾಸ /

ರಕ್ಷಣೆಯ ಜವಾಬ್ದಾರಿ ಹೊತ್ತಿಹ ಸೈನಿಕರು /
ದೇಶವ ಗಂಡಾಂತರದಿಂದ ಕಾಯುತ್ತಿಹ ಅವರು /
ದೇಶಪ್ರೇಮ ತ್ಯಾಗದ ರೂವಾರಿ ಸೈನಿಕರು /
ಜನರ ಉಳಿಸಿ ತಮ್ಮ ಪ್ರಾಣತೆತ್ತಿಹ ಹುತಾತ್ಮರು /



ಕವಿ ಡಾ. ಸತ್ಯಮೂರ್ತಿ ಗೂಗಿ, ಬೆಂಗಳೂರು



ನಗರದ ಬಸವನಗುಡಿಯ ಉತ್ತರಾಧಿ ಮಠದಲ್ಲಿ ಶ್ರೀಗಳಿಂದ ಮುದ್ರಾ ಧಾರಣೆ



ಮಹಾಲಕ್ಷ್ಮೀ ಲೇಔಟ್ ಶಕ್ತಿಗಣಪತಿನಗರ, ಕಸ್ತೂರಿ ಬಡಾವಣೆ ಮಸೀದಿ ರಸ್ತೆಯ ಸಿಮೆಂಟ್ ಕಾಂಕ್ರೀಟ್ ರಸ್ತೆಯ ಕಾಮಗಾರಿಯನ್ನು ಸ್ಥಳೀಯ ಶಾಸಕರಾದ ಕೆ.ಗೋಪಾಲಯ್ಯರವರು ಪರೀಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಬಿ.ಡಿ.ಶ್ರೀನಿವಾಸ್ ರವಿಕುಮಾರ್ ಮೊದಲಾದ ಸ್ಥಳೀಯ ಮುಖಂಡರುಗಳು ಉಪಸ್ಥಿತರಿದ್ದರು.



ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಜುಲೈ 21 ರಂದು ಸರ್ಜಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಡೆಂಗೀ ವಿರೋಧಿ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಇದೇ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಡೆಂಗೀ ತಡೆಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ "ಪರಿಶೀಲಿಸಿ, ಸ್ವಚ್ಛಗೊಳಿಸಿ ಹಾಗೂ ಮುಚ್ಚಿಡಿ" ಎಂಬ ಘೋಷವಾಕ್ಯದೊಂದಿಗೆ ನರ್ಸಿಂಗ್ ವಿದ್ಯಾರ್ಥಿಗಳಿಂದ ಹಾಗೂ ಆಶಾ ಕಾರ್ಯಕರ್ತೆಯರಿಂದ ಜಾಥಾ ಕಾರ್ಯಕ್ರಮವನ್ನು ಮಾಡಲಾಯಿತು.
ಕಾರ್ಯಕ್ರಮದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿವರ್ಗದವರು ಉಪಸ್ಥಿತರಿದರು.

## ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 40,21,039 ಎನ್ಯೂಮರೇಷನ್ ಫಾರ್ಮ್ ವಿತರಣೆ

**ಸಂಜೆ ಸಮಯ ಸುದ್ದಿ (ಜುಲೈ 25)**

**ಬೆಂಗಳೂರು ನಗರ ಜಿಲ್ಲೆ:** ಬೆಂಗಳೂರು ನಗರ ಜಿಲ್ಲೆಯಲ್ಲಿ ಜುಲೈ 24 ರಂದು ನಡೆದ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ –2026 ಪ್ರಕ್ರಿಯೆ ಚುರುಕಿನಿಂದ ಸಾಗಿದ್ದು, ಜಿಲ್ಲೆಯಲ್ಲಿ ಒಟ್ಟು 40,21,039 ಮತದಾರರು ಇದ್ದು, ಇದ್ದುವರೆಗೂ ಜಿಲ್ಲೆಯಾದ್ಯಂತ ಒಟ್ಟು 40,21,039ಮತದಾರರ ಎನ್ಯೂಮರೇಷನ್ ಫಾರ್ಮ್ ಳನ್ನು ವಿತರಿಸಲಾಗಿದ್ದು, 1579834 ಎನ್ಯೂಮರೇಷನ್ ಫಾರ್ಮ್ ಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕಾಂತರಾಜು ಪಿ.ಎಸ್ ತಿಳಿಸಿದ್ದಾರೆ. ಈವರೆಗೆ ಮನೆ ಮನೆ ಭೇಟಿಯ ಸಂದರ್ಭದಲ್ಲಿ ಮತದಾರರು ಸ್ವತಃ ಆನ್ ಲೈನ್ ಮೂಲಕ 161773 ಅರ್ಜಿಗಳನ್ನು ಸಲ್ಲಿಸಿದ್ದಾರೆ.149089 ಮಂದಿ ಮತದಾರರು ಮನೆಯಲ್ಲಿ ಗೈರು ಹಾಜರಿದ್ದು, 677358 ಮಂದಿ ಶಾಶ್ವತ ವಲಸೆ ಹಾಗೂ 85636 ಮಂದಿ ಮೃತಪಟ್ಟಿರುವುದು ವರದಿಯಾಗಿದೆ ಎಂದು ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಯುವಕರಿಂದ ಹಿಡಿದು ಇಳಿವಯಸ್ಸಿನವರೆಗೂ ಪಿಂಚಣಿಗೆ ಅರ್ಹರಾಗುವ ನೂತನ ಎನ್‌ಪಿಎಸ್ ಸಂಚಯ್ ಯೋಜನೆ

# ಪಿಎಫ್‌ಆರ್‌ಡಿಎ, ಎಸ್‌ಎಲ್‌ಬಿಸಿ, ಲೀಡ್ ಬ್ಯಾಂಕ್ ನಿಂದ ಎನ್‌ಪಿಎಸ್ ಸಂಚಯ್ ಯೋಜನೆ ಔಟ್ ರಿಚ್ ಪ್ರೋಗ್ರಾಮ್ ಜಾಗೃತಿ ಶಿಬಿರ



**ಸಂಜೆ ಸಮಯ ಸುದ್ದಿ ಚಿಕ್ಕಬಳ್ಳಾಪುರ :** ಭಾರತದಲ್ಲಿ ಹೆಚ್ಚಿನ ಉದ್ಯೋಗಿಗಳು ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುತಿದ್ದಾರೆ ರೈತರು,ಕಾರ್ಮಿಕರು,ಮಹಿಳೆಯರು,ಸಣ್ಣ ಸಣ್ಣ ವ್ಯಾಪಾರಿಗಳು,ದೇಶದ ಆರ್ಥಿಕತೆಗೆ ಬೆನ್ನುಲುಬಾಗಿದ್ದಾರೆ ಆದರೆ ಇಂತಹ ಕೊಟ್ಯಾಂತರ ಅಸಂಘಟಿತ ವಲಯದ ಕಾರ್ಮಿಕರಿಗೆ ಪಿ ಎಫ್ ಪಿಂಚಣಿ,ವಿಮೆ,ಹೂಡಿಕೆ ಯೋಜನೆಗಳು ಸೇರಿ ಯಾವುದೆ ಸೌಲಭ್ಯಗಳಿರುವುದಿಲ್ಲ ಇದನ್ನು ಗಮನದಲ್ಲಿಟ್ಟುಕೊಂಡೆ ಕೇಂದ್ರ ಸರ್ಕಾರ ಎನ್ ಪಿ ಎಸ್ ಸಂಚಯ್ ಎಂಬ ನೂತನ ಯೋಜನೆ ಜಾರಿಗೆ ತಂದಿದೆ ಎಂದು ಪಿ ಎಫ್ ಆರ್ ಡಿ ಎ ವಿಭಾಗೀಯ ವ್ಯವಸ್ಥಾಪಕ ಶುಭಂ ಕಂಡೇವಾಲ್ ತಿಳಿಸಿದರು ಪಿ ಎಫ್ ಆರ್ ಡಿ ಎ.ಎಸ್ ಎಲ್ ಬಿಸಿ, ಹಾಗು ಲೀಡ್ ಬ್ಯಾಂಕ್ ಕಚೇರಿಯಿಂದ ಎನ್ ಪಿ ಎಸ್ ಸಂಚಯ್ ಯೋಜನೆ ಬಗ್ಗೆ ಅರಿವು ಕಾರ್ಯಕ್ರಮವನ್ನ ಕೃಷಿ ಮತ್ತು ಕೃಷಿ ಅವಲಂಬಿತ ಉದ್ಯಮಿಗಳಿಗೆ ಚಿಕ್ಕಬಳ್ಳಾಪುರ ನಗರದ ಖಾಸಗಿ ಹೊಟೆಲ್ ನಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪಿ ಎಫ್ ಆರ್ ಡಿ ಎ ವೀಬಾಗೀಯ ವ್ಯವಸ್ಥಾಪಕ ಶುಭಂ ಕಂಡೇವಾಲ್ ಕೇಂದ್ರ ಸರ್ಕಾರ ಅಸಂಘಟಿತ ವಲಯದಲ್ಲಿ ಕೆಲಸ ಮಾಡುವ 18 ವರ್ಷದಿಂದ 80 ವರ್ಷದೊಳಗಿನ ಎಲ್ಲರಿಗೂ ವೃದ್ದಾಪ್ಯ ಕಾಲದಲ್ಲಿ ಗೌರವಯುತ ಜೀವನ ನಡೆಸಲು ಇಂದಿನಿಂದ ತಮ್ಮ ಕೈಲಿ ಎಷ್ಟಾದರೆ ಅಷ್ಟು ಹಣವನ್ನ ಎನ್ ಪಿ ಎಸ್ ಸಂಚಯ್ ಯೋಜನೆ ಖಾತೆಯಲ್ಲಿ ಹೂಡಿಕೆ ಮಾಡುತ್ತಾ ಹೋದರೆ ಪಿಂಚಣಿ ರೂಪದಲ್ಲಿ ಹಣ ಪಡೆಯಲು ಸಹಾಯಕವಾಗುತ್ತದೆ ಎಂದು ತಿಳಿಸಿದರು
ಎಸ್ ಎಲ್ ಬಿ ಸಿ ಸಹಾಯಕ ವ್ಯವಸ್ಥಾಪಕ ರಾಘವೇಂದ್ರ ಮಾತನಾಡಿ ಕಾರ್ಮಿಕರು ರೈತರು,ಪುಡ್ ಪ್ರೊಡಕ್ಷನ್ ಸೈಬರ್ ಸೆಂಟರ್ ಮಾಲಿಕರು ಸಣ್ಣಪುಟ್ಟ ವ್ಯಾಪಾರಿಗಳು ಮಹಿಳೆಯರು ಎಲ್ಲರಿಗೂ ಅಟಲ್ ಪೆನ್ಷನ್ ಯೋಜನೆಯಲ್ಲಿ ಕೇವಲ 40 ವರ್ಷದವರೆಗೂ ಮಾತ್ರ ಅವಕಾಶ ನೀಡಲಾಗಿತ್ತು ಮತ್ತು ಕನಿಷ್ಠ ಮಟ್ಟದ ಹಣ ಕಟ್ಟುವಂತೆ ನಿಗದಿ ಮಾಡಲಾಗಿತ್ತು ಆದ್ರೆ ಎನ್ ಪಿ ಎಸ್ ಸಂಚಯ್ ಯೋಜನೆಯಲ್ಲಿ ವಯಸ್ಸಿನ ಇತಿಮಿತಿ ಇಲ್ಲ 18 ವರ್ಷದ ಮೇಲೆ 85. ವರ್ಷದವರೆಗೂ ಹೂಡಿಕೆ ಮಾಡಲು ಅವಕಾಶ ನೀಡಿದ್ದು ಯೋಜನೆಗೆ ಪ್ರವೇಶ ಪಡೆಯುವಾಗ ಕನಿಷ್ಠ 250 ರೂಗಳು ಪಾವತಿಸಿದರೆ ಆನಂತರ ನೀವು 10 ರುಪಾಯಿಯಿಂದ ಹಿಂಡಿದು ಎಷ್ಟು ಹಣವಾದ್ರು ಅದು ಯವಾಗ ಬೇಕಾದ್ರು ಹೂಡಿಕೆ ಮಾಡಲು ಕೇಂದ್ರ ಸರ್ಕಾರ ಅವಕಾಶ ನೀಡಿ ವಯಸ್ಸಾದ ಮೇಲೆ ಜನ ನೆಮ್ಮದಿಯ ಜೀವನ ನಡೆಸಲು ಯೋಜನೆ ರೂಪಿಸಿದೆ ಎಂದರು.
ಕಾರ್ಯಕ್ರಮದಲ್ಲಿ ಪಿ ಎಫ್ ಆರ್ ಡಿ ಎ ಸಹಾಯಕ ವ್ಯವಸ್ಥಾಪಕ ಸಚಿನ್ ರಾಟಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಅರುಣ್ ಕುಮಾರ್,ಎಸ್ ಎಲ್ ಬಿ ಸಿ ಸಹಾಯಕ ನಿರ್ದೇಶಕ ಆನಂದ್ ನಾಯಕ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ದೇವರಾಜ್,ಸಿಬಿಆರ್ ಸೆ ಟಿ ನಿರ್ದೇಶಕ ನಾರಾಯಣಸ್ವಾಮಿ ,ಕೆನರಾ ಬ್ಯಾಂಕ್ ಪ್ರದಾನ ಕಚೇರಿ ವ್ಯವಸ್ಥಾಪಕಿ ಶ್ರಾವಣಿ ಕೆನರಾ ಬ್ಯಾಂಕ್ ಎಫ್ ಎಲ್ ಸಿ ಅಧಿಕಾರಿ ಎ ಎಂ ಕವಿತ ಇತರರು ಹಾಜರಿದ್ರು.

# ದೇವಾಲಯಗಳ ಹುಂಡಿ ಭದ್ರತೆಗೆ ಸಿಸಿಟಿವಿ ಕಣ್ಗಾವಲು: ಡಿಸಿ

**ಸಂಜೆ ಸಮಯ ಸುದ್ದಿ (ಜುಲೈ 25)**



**ಬೆಂ.ಗ್ರಾ.ಜಿಲ್ಲೆ:** ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ಪ್ರವರ್ಗ ಎ ಮತ್ತು ಬಿ ದೇವಾಲಯಗಳ ಹುಂಡಿ ಭದ್ರತೆ ಸೇರಿದಂತೆ ಎಣಿಕೆ ಕಾರ್ಯ, ನಗದು ವಹಿವಾಟುಗಳ ಪಾರದರ್ಶಕತೆ ಕಾಪಾಡಲು ಸಿಸಿಟಿವಿ ವೆಬ್ ಕ್ಯಾಮರಾ ಅಳವಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ತಿಳಿಸಿದರು.
ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ಶುಕ್ರವಾರ ನಡೆದ ದೇವಾಲಯಗಳ ಹುಂಡಿಗಳ ಭದ್ರತೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.
ದೇವಾಲಯಗಳಲ್ಲಿ ಹುಂಡಿ ಎಣಿಕೆ/ಲೆಕ್ಕಪತ್ರ ನಿರ್ವಹಣೆ ಸಂದರ್ಭದಲ್ಲಿ ಕಳ್ಳತನ ಮತ್ತು ಚಿನ್ನಾಭರಣ, ನಗದು ಇತ್ಯಾದಿಗಳ ದುರುಪಯೋಗವಾಗುವುದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಮಾರ್ಗಸೂಚಿ ಬಿಡುಗಡೆಗೊಳಿಸಿದ್ದು ಅಗತ್ಯ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.
ದೇವಾಲಯದಲ್ಲಿ ಅಳವಡಿಸುವ ಹುಂಡಿಗಳಿಗಳು ನಾಲ್ಕು ದಿಕ್ಕಿನಿಂದ ಕಾಣುವಂತೆ ಅಗತ್ಯವಾದ ಸಿಸಿ ಟಿವಿ ಘಜಭ ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸಿ ಧಾರ್ಮಿಕ ದತ್ತಿ ಇಲಾಖೆ ಮೇಲ್ವಿಚಾರಣೆ ನಡೆಸುವುದು. ಜೊತೆಗೆ ವೆಬ್ ಕ್ಯಾಮರಾ ಭದ್ರತೆ ದೃಷ್ಟಿಯಿಂದ ಜಿಲ್ಲಾಧಿಕಾರಿ, ಪೊಲೀಸ್ ಅಧೀಕ್ಷಕರು, ಪೊಲೀಸ್ ಠಾಣೆ ಕಚೇರಿಗಳಿಗೆ ದೇವಾಲಯಗಳ ವೆಬ್ ಕ್ಯಾಮರಾ ಸಂಪರ್ಕ ಕಲ್ಪಿಸಿ ವೀಕ್ಷಣೆ ಮಾಡುವುದು.
ನಗದು ಕಳ್ಳತನ ತಪ್ಪಿಸಲಕ ಡಿಜಿಟಲ್ ಪಾವತಿಗೆ ಹೆಚ್ಚಿನ ಉತ್ತೇಜನ ನೀಡಲು ಕ್ಯೂ ಆರ್ ಕೋಡ್ ಅಳವಡಿಸಿ ಜೊತೆಗೆ ಅದರ ಅಡಿಯಲ್ಲಿ ಸಂಬಂಧಪಟ್ಟ ಬ್ಯಾಂಕ್ ವಿವರಗಳನ್ನು ಅಳವಡಿಸಬೇಕು.
ಹುಂಡಿ ಎಣಿಕೆಗೆ ಸಾರ್ವಜನಿಕರಿಗೆ ಅವಕಾಶವಿಲ್ಲ: ಹುಂಡಿ ಎಣಿಕೆಗೆ ಸಾರ್ವಜನಿಕರ ಸೇವೆಯನ್ನು ಪಡೆಯುವುದರ ಬದಲಿಗೆ ಕಡ್ಡಾಯವಾಗಿ ಗೃಹ ರಕ್ಷಕದಳ ಸಿಬ್ಬಂದಿ, ಬ್ಯಾಂಕ್ ಸಿಬ್ಬಂದಿ, ಸರ್ಕಾರಿ ನೌಕರರ ಸೇವೆಯನ್ನು ಪಡೆಯುವುದು. ಖಾಸಗಿ ಅಥವಾ ಸಾರ್ವಜನಿಕರ ಸೇವೆಯನ್ನು ಹುಂಡಿ ಎಣಿಕೆಗೆ ಪಡೆಯಲು ಅವಕಾಶವಿಲ್ಲ.
ಹುಂಡಿ ಎಣಿಕೆಯನ್ನು ಸಂಬಂಧಪಟ್ಟ ತಹಶೀಲ್ದಾರ್ ಮೇಲ್ವಿಚಾರಣೆ ನಡೆಸುವುದು. ಹುಂಡಿ ಎಣಿಕೆ ಸಂದರ್ಭದಲ್ಲಿ ಸ್ವೀಕೃತವಾಗುವ ಚಿನ್ನ, ಬೆಳ್ಳಿ ಇತರೆ ಬೆಲೆ ಬಾಳುವ ವಸ್ತುಗಳು ಸ್ವೀಕೃತವಾದಾಗ ಅಂತಹ ವಸ್ತುಗಳನ್ನು ಎಣಿಕೆ ದಿನದಂದೇ ಕಡ್ಡಾಯವಾಗಿ ಮೌಲ್ಯಮಾಪನ ಮಾಡಿಸಿ ಅಂದೇ ಸಂಬಂಧಪಟ್ಟ ಜಿಲ್ಲಾ ಉಪ/ಉಪ ಖಜಾನೆಯಲ್ಲಿ ಜಮಾ ಮಾಡಬೇಕು.
ಎಣಿಕೆಗೆ ಹಾಜರಿರುವ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಖಚಿತ ಪಡಿಸಿಕೊಳ್ಳಲು Face Recognition ಅನ್ನು ಅಳವಡಿಸುವುದು ಮತ್ತು ಸಿಬ್ಬಂದಿ ಮತ್ತು ಅಧಿಕಾರಿಗಳು ಎಣಿಕೆಗೆ ಪ್ರವೇಶಿಸುವ ಸಂದರ್ಭದಲ್ಲಿ ಅಘ್ಟಿ ಏಚಿಟಿಜನ್ನು ಘೋಷಿಸುವುದು. ಹುಂಡಿ ತೆರೆಯುವುದರಿಂದ, ಹುಂಡಿ ಎಣಿಕೆ ಮಾಡಿ ಬ್ಯಾಂಕಿನವರಿಗೆ ಹಸ್ತಾಂತರಿಸುವವರೆಗೆ ಸಂಪೂರ್ಣವಾಗಿ ವಿಡಿಯೋ ಚಿತ್ರೀಕರಣವನ್ನು ದಿನಾಂಕ ಮತ್ತು ಸಮಯ ದಾಖಲೆಯಾಗುವಂತೆ ಕಡ್ಡಾಯವಾಗಿ ಚಿತ್ರೀಕರಿಸಬೇಕು.ಕಂದಾಯ, ಪೊಲೀಸ್, ಧಾರ್ಮಿಕ ದತ್ತಿ,, ಸ್ಥಳೀಯ ಪ್ರಾಧಿಕಾರ ಮತ್ತು ಇತರೆ ಸಂಬಂಧಪಟ್ಟ ಅಧಿಕಾರಿಗಳು ಕನಿಷ್ಠ 15 ದಿನಗಳಿಗೊಮ್ಮೆ ದೇವಾಲಯಗಳಿಗೆ ಜಂಟಿಯಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ವ್ಯವಸ್ಥೆಗಳು ಸುವ್ಯವಸ್ಥಿತ ರೀತಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ನ್ಯೂನತೆಗಳಿದ್ದಲ್ಲಿ ಕೂಡಲೇ ಸರಿಪಡಿಸತಕ್ಕದ್ದು.
ಸಭೆಯಲ್ಲಿ ಎಸ್ಪಿ ಚಂದ್ರಕಾಂತ್ ಎಂ.ವಿ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಧಾರ್ಮಿಕ ದತ್ತಿ ಇಲಾಖೆ ಸಹಾಯಕ ಆಯುಕ್ತರು ನಾಮದೇವ, ಘಾಟಿ ಸುಬ್ರಮಣ್ಯ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪಿ.ದಿನೇಶ್, ದೊಡ್ಡಬಳ್ಳಾಪುರ ತಹಶೀಲ್ದಾರ್ ಮಲ್ಲಪ್ಪ, ನೆಲಮಂಗಲ ತಹಶೀಲ್ದಾರ್ ಮಲ್ಲೇಶ್, ಹೊಸಕೋಟೆ ತಹಶೀಲ್ದಾರ್ ಶೀತಲ್, ಮುಜರಾಯಿ ತಹಶೀಲ್ದಾರ್ ಹೇಮಾವತಿ, ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಪ್ರವರ್ಗ 'ಎ' ದೇವಾಲಯಗಳು

1. ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ದೊಡ್ಡಬಳ್ಳಾಪುರ ತಾಲ್ಲೂಕು.
2. ಶ್ರೀ ಗಂಗಾಧರೇಶ್ವರಸ್ವಾಮಿ ಮತ್ತು ಶ್ರೀ ಹೊನ್ನಾದೇವಿ ದೇವಾಲಯ ಶಿವಗಂಗೆ ನೆಲಮಂಗಲ ತಾಲ್ಲೂಕು.
3. ಶ್ರೀ ಬೈಲಾಂಜನೇಯಸ್ವಾಮಿ ದೇವಾಲಯ ಬೈರಶೆಟ್ಟಿಹಳ್ಳಿ ನೆಲಮಂಗಲ ತಾಲ್ಲೂಕು.

### ಪ್ರವರ್ಗ 'ಬಿ' ದೇವಾಲಯಗಳು

1. ಶ್ರೀ ವೀರಭದ್ರಸ್ವಾಮಿ ದೇವಾಲಯ ದೇವರಹೊಸಹಳ್ಳಿ ನೆಲಮಂಗಲ ತಾಲ್ಲೂಕು.
2. ಶ್ರೀ ವೆಂಕಟರಮಣಸ್ವಾಮಿ ದೇವಾಲಯ ಮಹಿಮಾಪುರ ನೆಲಮಂಗಲ ತಾಲ್ಲೂಕು.
3. ಶ್ರೀ ಕರಿತಿಮ್ಮರಾಯಸ್ವಾಮಿ ದೇವಾಲಯ ಟಿ.ಬೇಗೂರು ನೆಲಮಂಗಲ ತಾಲ್ಲೂಕು.
4. ಶ್ರೀ ಪ್ರಸನ್ನ ವೆಂಕಟರಮಣಸ್ವಾಮಿ ದೇವಾಲಯ ತೇರಿನಬೀದಿ ದೊಡ್ಡಬಳ್ಳಾಪುರ ಟೌನ್.
5. ಶ್ರೀ ಕತ್ತಿಮಾರಮ್ಮ ದೇವಾಲಯ ಕೋಡಗುರ್ಕಿ ದೇವನಹಳ್ಳಿ ತಾಲ್ಲೂಕು.

## ಮಂಡ್ಯದ Star Chicken ಘಟಕಗಳಲ್ಲಿ ಅಕ್ರಮ ಬಾಂಗ್ಲಾದೇಶಿಗರು ಪತ್ತೆಯಾಗಿಲ್ಲ: ಮಂಡ್ಯ SP ಶೋಭಾರಾಣಿ

ಮಂಡ್ಯ:ನಾಗಮಂಗಲ ತಾಲ್ಲೂಕಿನ StarChicken ಕೋಳಿ ಘಟಕಗಳಲ್ಲಿ ಯಾವುದೇ ಅಕ್ರಮ ಬಾಂಗ್ಲಾದೇಶಿ ಕೆಲಸಗಾರರು ಪತ್ತೆಯಾಗಿಲ್ಲ ಎಂದು ಮಂಡ್ಯ ಜಿಲ್ಲಾ ಪೊಲೀಸರು ತಿಳಿಸಿದ್ದಾರೆ. ದೂರು ಸ್ವೀಕರಿಸಿದ ನಂತರ ಪೊಲೀಸರು ತನಿಖೆ ಆರಂಭಿಸಿದ್ದು, ನಾಗಮಂಗಲ ಉಪವಿಭಾಗದ ಡಿವೈಎಸ್ಪಿಗೆ ತಕ್ಷಣ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ. ಸ್ಟಾರ್ ಚಿಕನ್ ಗ್ರೂಪ್ ಆಫ್ ಕಂಪನಿಗಳ ತಪಾಸಣೆಯ ಸಮಯದಲ್ಲಿ, ಪಶ್ಚಿಮ ಬಂಗಾಳ, ಒಡಿಶಾ, ಬಿಹಾರ, ಅಸ್ಸಾಂ, ಛತ್ತೀಸ್‌ಗಢ, ಉತ್ತರ ಪ್ರದೇಶ ಮತ್ತು ಮಧ್ಯಪ್ರದೇಶ ಸೇರಿದಂತೆ ವಿವಿಧ ರಾಜ್ಯಗಳ ಕಾರ್ಮಿಕರು ಪತ್ತೆಯಾಗಿದ್ದಾರೆ ಪೊಲೀಸರು ತಿಳಿಸಿದ್ದಾರೆ. 81 ಕಾರ್ಮಿಕರು ಪಶ್ಚಿಮ ಬಂಗಾಳದವರು, 24 ಮಂದಿ ಒಡಿಶಾ, 19 ಮಂದಿ ಬಿಹಾರ, ತಲಾ ಒಂಬತ್ತು ಮಂದಿ ಅಸ್ಸಾಂ ಮತ್ತು ಛತ್ತೀಸ್‌ಗಢದವರು ಮತ್ತು ತಲಾ ಇಬ್ಬರು ಉತ್ತರ ಪ್ರದೇಶ ಮತ್ತು ಮಧ್ಯಪ್ರದೇಶದವರು ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರು ಎಲ್ಲಾ ಕಾರ್ಮಿಕರ ಆಧಾರ್ ಕಾರ್ಡ್‌ಗಳು ಮತ್ತು ಮೂಲ ದಾಖಲೆಗಳನ್ನು ಪರಿಶೀಲಿಸಿದರು. ಅವರೆಲ್ಲರೂ ಇತರ ರಾಜ್ಯಗಳ ನಾಗರಿಕರು ಎಂದು ವಿಚಾರಣೆಯಲ್ಲಿ ದೃಢಪಟ್ಟಿದೆ. ಆವರಣದಲ್ಲಿ ಯಾವುದೇ ಅಕ್ರಮ ಬಾಂಗ್ಲಾದೇಶಿ ವಲಸಿಗರು ಪತ್ತೆಯಾಗಿಲ್ಲ. ತನಿಖೆ ಇನ್ನೂ ಪ್ರಗತಿಯಲ್ಲಿದೆ ಮತ್ತು ಇಲಾಖೆ ನಿರಂತರ ಕಣ್ಗಾವಲು ನಡೆಸುತ್ತಿದೆ ಎಂದು ಎಸ್ಪಿ ಹೇಳಿದರು.

### ಲಂಚ ಪಡೆಯುವಾಗಲೇ ಮೊಬೈಲ್‌ನಲ್ಲಿ ಸೆರೆಯಾದ ಲಂಚಬಾಕ ಗ್ರಾಮಲೆಕ್ಕಾಧಿಕಾರಿ

## ಲಂಚಕ್ಕಾಗಿ ಮನೆಗಳಿಗೆ ತೆರಳಿ ಕೇಳುವ ಭ್ರಷ್ಟ ಗ್ರಾಮಲೆಕ್ಕಾಧಿಕಾರಿ

**ಸಂಜೆ ಸಮಯ ಸುದ್ದಿ (ಜುಲೈ 25)**



ಪರಗೋಡು ಗ್ರಾಮ ಲೆಕ್ಕಾಧಿಕಾರಿ ಮಂಜುನಾಥ್

**ಬಾಗೇಪಲ್ಲಿ (ಭಾಗ್ಯನಗರ):** ವ್ಯವಸಾಯಗಾರ ಪ್ರಮಾಣಪತ್ರ ನೀಡಲು ಲಂಚ ಪಡೆಯುವಾಗ ಪರಗೋಡು ಕಂದಾಯ ವೃತ್ತದ ಗ್ರಾಮ ಲೆಕ್ಕಾಧಿಕಾರಿ ವಿಡಿಯೋದಲ್ಲಿ ಸೆರೆಯಾಗಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.
ಬಾಗೇಪಲ್ಲಿ ತಾಲ್ಲೂಕಿನ ಪರಗೋಡು ಕಂದಾಯ ವೃತ್ತದ ಗ್ರಾಮ ಲೆಕ್ಕಾಧಿಕಾರಿ ಮಂಜುನಾಥ್ ಅವರು ವ್ಯವಸಾಯಗಾರರ ಪ್ರಮಾಣ ಪತ್ರ ನೀಡಲು ಲಂಚ ಸ್ವೀಕರಿಸುತ್ತಿದ್ದ ವೇಳೆ ಮೊಬೈಲ್‌ನಲ್ಲಿ ಸೆರೆಯಾಗಿದ್ದು ಆತನ ಲಂಚಬಾಕತನ ಬಹಿರಂಗಗೊಂಡಿದೆ. ಸರ್ಕಾರಿ ಪ್ರಮಾಣ ಪತ್ರಗಳನ್ನು ನೀಡಲು ಬಡ ರೈತರಿಂದ ಲಂಚಕ್ಕೆ ಬೇಡಿಕೆ ಇಟ್ಟು ಕಿರುಕುಳ ನೀಡುತ್ತಿದ್ದರೆಂಬ ಆರೋಪ ಸದರಿ ಕಂದಾಯಾಧಿಕಾರಿ ಮೇಲಿದೆ. ರೈತರು ಸರ್ಕಾರಿ ಸೌಲಭ್ಯಗಳನ್ನು ಪಡೆದುಕೊಳ್ಳಲು ನ್ಯಾಯಯುತವಾದ ಪ್ರಮಾಣಪತ್ರಗಳನ್ನು ಪಡೆದುಕೊಳ್ಳಲು ಅರ್ಜಿಸಲ್ಲಿಸಿದರೂ ಅವುಗಳನ್ನು ನೀಡಲು ಲೆಕ್ಕಾಧಿಕಾರಿ ಸತಾಯಿಸುತ್ತಿದ್ದುದಲ್ಲದೆ ಲಂಚಕ್ಕಾಗಿ ಬೇಡಿ ಇಡುತ್ತಿದ್ದುದು ಸಾಮಾನ್ಯ ದೂರಾಗಿತ್ತು. ಪ್ರತಿಯೊಂದಕ್ಕೂ ಬಡ ರೈತರನ್ನು ಪೀಡಿಸುತ್ತಿದ್ದು ಈತನ ವೃತ್ತಿಯಾಗಿತ್ತು ಎಂದು ರೈತರು ಸದಾ ದೂರುತ್ತಿದ್ದರು.
ಲಂಚ ಪಡೆದುಕೊಳ್ಳಲು ಸದರಿ ಗ್ರಾಮ ಲೆಕ್ಕಾಧಿಕಾರಿ ಮನೆಗಳಿಗೆ ತೆರಳಿ ಹಣ ಪಡೆದುಕೊಳ್ಳುತ್ತಿದ್ದುದು ಈತನ ವಿಶೇಷವಾಗಿತ್ತು. ಈತನ ಲಂಚಾವತಾರದ ಬಗ್ಗೆ ತಹಸೀಲ್ದಾರ್ ರವರಿಗೆ ಅನೇಕ ಬಾರಿ ದೂರು ಸಲ್ಲಿಸಿದರೂ ಪ್ರಯೋಜನವಾಗಲಿಲ್ಲ ಮತ್ತು ಈತನ ವಿರುದ್ಧ ಕ್ರಮ ಜರುಗಿಸಲಿಲ್ಲ ಎಂಬುದು ರೈತರ ಆರೋಪವಾಗಿದೆ.
ಅಮಾನತ್ತಿಗೆ ಆಗ್ರಹ: ಲಂಚಬಾಕ ಕಂದಾಯ ಗ್ರಾಮ ಲೆಕ್ಕಾಧಿಕಾರಿಯನ್ನು ಕೂಡಲೇ ಸೇವೆಯಿಂದ ಅಮಾನತ್ತುಗೊಳಿಸಬೇಕು ಮತ್ತು ಆತನ ವಿರುದ್ಧ ಕ್ರಮ ಜರುಗಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

### ಶ್ರೀನಿವಾಸಪುರ ಆರು ತಿಂಗಳಾದರೂ ಆರಂಭವಾಗದ

# ರಸ್ತೆ ಕಾಮಗಾರಿ; ಗ್ರಾಮಸ್ಥರ ಆಕ್ರೋಶ





**ಸಂಜೆ ಸಮಯ ಸುದ್ದಿ (ಜುಲೈ 25)**

**ಬೇತಮಂಗಲ:** ವಿ. ಕೋಟ ಮುಖ್ಯ ರಸ್ತೆಯಿಂದ ಶ್ರೀನಿವಾಸಪುರ ಮಾರ್ಗವಾಗಿ ತಾತೇನಹಳ್ಳಿ ವರೆಗಿನ ರಸ್ತೆ ಸಂಪೂರ್ಣವಾಗಿ ಹಾಳಾಗಿದ್ದು, ತಕ್ಷಣವೇ ಡಾಂಬರು ರಸ್ತೆ ಅಭಿವೃದ್ಧಿಪಡಿಸಬೇಕು ಎಂದು ಶ್ರೀನಿವಾಸಪುರ ಗ್ರಾಮಸ್ಥರು ಒತ್ತಾಯಿಸಿದ್ದಾರೆ.
ಎನ್.ಜಿ. ಹುಲ್ಕೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶ್ರೀನಿವಾಸಪುರ ಗ್ರಾಮದ ಈ ರಸ್ತೆ ಕಾಮಗಾರಿಗೆ ಆರು ತಿಂಗಳ ಹಿಂದೆಯೇ ಕೆ.ಜಿ.ಎಫ್. ಶಾಸಕಿ ರೂಪಕಲಾ ಶಶಿಧರ್ ಅವರು ಗುದ್ದಲಿ ಪೂಜೆ ನೆರವೇರಿಸಿದ್ದರು. ಆದರೆ, ಗುದ್ದಲಿ ಪೂಜೆ ಮುಗಿದು ಆರು ತಿಂಗಳು ಕಳೆದರೂ ಇದುವರೆಗೂ ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿಲ್ಲ ಎಂದು ಗ್ರಾಮಸ್ಥರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.
ಕಳ್ಳರ ಭೀತಿ, ಕಲ್ಲುಗಳದ್ದೇ ಕಾರುಬಾರು: ಹಲವು ವರ್ಷಗಳ ಹಿಂದೆ ಹಾಕಲಾಗಿದ್ದ ಡಾಂಬರು ಸಂಪೂರ್ಣವಾಗಿ ಕಿತ್ತುಹೋಗಿದ್ದು, ರಸ್ತೆಯುದ್ದಕ್ಕೂ ಕಲ್ಲುಗಳು ಎದ್ದುಕಾಣುತ್ತಿವೆ. ರಾತ್ರಿ ವೇಳೆಯಲ್ಲಿ ಈ ರಸ್ತೆಯಲ್ಲಿ ಸಂಚರಿಸುವುದು ಅತ್ಯಂತ ಅಪಾಯಕಾರಿಯಾಗಿದೆ. ಇದನ್ನೇ ಬಂಡವಾಳ ಮಾಡಿಕೊಂಡಿರುವ ದುಷ್ಕರ್ಮಿಗಳು, ರಾತ್ರಿ ವೇಳೆ ರಸ್ತೆಗೆ ಕಲ್ಲುಗಳನ್ನು ಹಾಕಿ ದಾರಿಹೋಕರನ್ನು ದೋಚುವ ಯತ್ನ ನಡೆಸಿರುವ ಉದಾಹರಣೆಗಳೂ ಇವೆ ಎಂದು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ.
ಅಪಾಯಕಾರಿ ಸ್ಥಿತಿಯಲ್ಲಿರುವ ಈ ರಸ್ತೆಯನ್ನು ಶಾಸಕರು ತಕ್ಷಣವೇ ಗಮನ ಹರಿಸಿ ಅಭಿವೃದ್ಧಿಪಡಿಸಬೇಕು ಹಾಗೂ ರಸ್ತೆಯ ಉದ್ದಕ್ಕೂ ಬೀದಿ ದೀಪಗಳನ್ನು (ಲೈಟ್) ಅಳವಡಿಸಿ ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.
ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಶಂಕರಪ್ಪ, ದಿಗ್ಗಪ್ಪ, ಮಧು, ನಾರಾಯಣಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಆಗಸ್ಟ್ 15 ರೊಳಗೆ ರಾಜ್ಯದ ಎಲ್ಲಾ ಡ್ಯಾಂ ಭರ್ತಿ

ಪ್ರತಿವರ್ಷ ಆಗಸ್ಟ್ 15 ರೊಳಗೆ ರಾಜ್ಯದ ಎಲ್ಲಾ ಡ್ಯಾಂ ಭರ್ತಿಯಾದರೆ ಮಳೆಗಾಲ ಇಲ್ಲದಿದ್ದರೆ ಬರಗಾಲ ಎಂದು ತಿಳಿದುಕೊಳ್ಳಬೇಕು. ಪ್ರತಿವರ್ಷ ಆಗಸ್ಟ್ 15 ರೊಳಗೆ ರಾಜ್ಯದ ಡ್ಯಾಂಗಳು ತುಂಬಿ ಹರಿಯುತ್ತದೆ. ಆದರೆ ಈ ವರ್ಷ ಆಗಸ್ಟ್ 15 ರೊಳಗೆ ಡ್ಯಾಂ ತುಂಬಿ ತುಳುಕಿದ್ದರೆ ಮಾತ್ರ ಮಳೆಗಾಲ ಎನ್ನಬಹುದು ಇಲ್ಲದಿದ್ದರೆ ಬರಗಾಲ ಎನ್ನುವುದು ಸ್ಪಷ್ಟವಾಗುತ್ತದೆ. ಮುಂಗಾರು ಬೆಳೆ ಕೈಕೊಟ್ಟಿದೆ. ಹಿಂಗಾರು ಬೆಳೆಯಾದರೂ ವರುಣ ಕೃಪೆ ತೋರಿ ರೈತನನ್ನು ಕೈ ಹಿಡಿಯುವಂತಾಗಬೇಕು. ಈ ವರ್ಷ ಅಗಸ್ಟ್ 15 ರೊಳಗೆ ದೊಡ್ಡ ಮಳೆಯಾಗಿ ಕರ್ನಾಟಕ ರಾಜ್ಯದ ಎಲ್ಲಾ ಡ್ಯಾಂಗಳು ಭರ್ತಿಯಾಗಲಿ ಗಂಗಾ ಮಾತೆ ನಮೋ ಸ್ತುತಿ.

ಫಸಲು ಬೀಮಾ ಯೋಜನೆ ಪರಿಹಾರ
ಪ್ರತಿವರ್ಷ ಅತಿವೃಷ್ಟಿ ಅಥವಾ ಅನಾವೃಷ್ಟಿಯಿಂದಾಗಿ ರೈತರ ಬೆಳೆಗಳು ನಾಶವಾಗುತ್ತದೆ. ಆದರೆ ಒಂದು ವಿಚಾರ ನೆನಪು ಇರಲಿ. ಕೇವಲ ಒಂದು ಗ್ರಾಮ ಅಥವಾ ಒಬ್ಬನೇ ರೈತನಿಗೆ ನಷ್ಟ ಪರಿಹಾರ ನೀಡಲು ಸಾಕಷ್ಟು ಬಾರಿ ಅನ್ವಯಿಸಲ್ಲ. ಇಡೀ ತಾಲ್ಲೂಕು ಅಥವಾ ವಿಧಾನಸಭಾ ಕ್ಷೇತ್ರಕ್ಕೆ ಅನ್ವಯಿಸುತ್ತದೆ. ಹಾಗಾಗಿ ಆಯಾ ಸ್ಥಳೀಯ ಶಾಸಕರು, ಸಂಸದರು ವಿಮಾ ಕಂಪನಿ ಅಥವಾ ಕೇಂದ್ರ/ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಬೇಕು. ನಮ್ಮ ಕ್ಷೇತ್ರ ಅತಿವೃಷ್ಟಿ ಅಥವಾ ಅನಾವೃಷ್ಟಿಯಿಂದ ಇಡೀ ತಾಲ್ಲೂಕು ಅಥವಾ ವಿಧಾನಸಭಾ ಕ್ಷೇತ್ರಕ್ಕೆ ಹಾನಿ ಸಂಭವಿಸಿದೆ. ಎಂಬುದನ್ನು ಮನವರಿಕೆ ಮಾಡಬೇಕು. ಇಲ್ಲದಿದ್ದರೆ ಒಬ್ಬನೇ ರೈತ ಅಥವಾ ಒಂದೇ ಗ್ರಾಮ ಪರಿಗಣಿಸುವುದು ಅಪರೂಪ. ರೈತರಿಗೆ ಪರಿಹಾರ ಸಿಗಲು ಶಾಸಕರು ಅಥವಾ ಸಂಸದರು ಶತಪ್ರಯತ್ನ ಮಾಡಿದರೆ ಒಳ್ಳೆಯದು.

ಜಿರಳೆ ಹೋರಾಟಕ್ಕೆ ಶರಣಾಗಲಿ
ಜಿರಳೆ ಅಥವಾ ಜೂಂಡಿಗ ಹೋರಾಟ ಕೇಂದ್ರ ಸರ್ಕಾರವನ್ನೇ ಅಲ್ಲಾಡಿಸಿದೆ. ಇದಕ್ಕೊಂದೇ ಪರಿಹಾರ ಅವರ ಬೇಡಿಕೆ ಪರಿಗಣಿಸುವುದು ಇಲ್ಲದಿದ್ದರೆ ದೀರ್ಘಕಾಲ ಈ ಸಮಸ್ಯೆಗೆ ಅಂತ್ಯ ಹಾಡಲು ಸಾಧ್ಯವಾಗುವುದಿಲ್ಲ. ಕೇಂದ್ರ ಸರ್ಕಾರಕ್ಕೆ ಡ್ಯಾಮೇಜ್ ಆಗುವ ಸಾಧ್ಯತೆ ದಟ್ಟವಾಗಿದೆ. ಇಡೀ ದೇಶಾದ್ಯಂತ ಭಾರಿ ಸದ್ದು ಜಿರಳೆ ಅಥವಾ ಜೂಂಡಿಗ ಹೋರಾಟ ಇದೆ. ಅವರ ಹೋರಾಟ ನ್ಯಾಯ ಸಮ್ಮತವಿದೆ. ಅದರಲ್ಲೇನು ತಪ್ಪು ಕಂಡು ಬರುತ್ತಿಲ್ಲ. ಜಿರಳೆ ಅಥವಾ ಜೂಂಡಿಗ ಹೋರಾಟಕ್ಕೆ ಕೇಂದ್ರ ಸರ್ಕಾರ ತಲೆಬಾಗಿ ಅವರ ಬೇಡಿಕೆ ಪರಿಗಣಿಸುವತ್ತ ಕೇಂದ್ರ ಚಿತ್ತ ಹರಿಸಬೇಕು.
ವೀರೇಶ ಧೂಪದಮಠ

## SIR ಕರ್ತವ್ಯದಲ್ಲಿದ್ದ ಸರ್ಕಾರಿ ಶಾಲೆಯ ಶಿಕ್ಷಕಿ ಹೃದಯಾಘಾತಕ್ಕೆ ಬಲಿ

**ಸಂಜೆ ಸಮಯ ಸುದಿ (ಜುಲೈ 25) ಬೆಂಗಳೂರು:** ಕೇಂದ್ರ ಚುನಾವಣಾ ಆಯೋಗ ರಾಜ್ಯದಲ್ಲಿ ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ(SIR) ಕರ್ತವ್ಯದಲ್ಲಿದ್ದ ಬೆಂಗಳೂರಿನ ಕುರುಬರಹಳ್ಳಿ ಸರ್ಕಾರಿ ಶಾಲೆಯ ಶಿಕ್ಷಕಿಯೊಬ್ಬರು ಗುರುವಾರ ಹೃದಯಾಘಾತದಿಂದ ನಿಧನರಾಗಿದ್ದಾರೆ.ಮೃತ ಶಿಕ್ಷಕಿಯನ್ನು ಶಮಂತ ಕುಮಾರಿ(44) ಎಂದು ಗುರುತಿಸಲಾಗಿದ್ದು, ಅವರು ಇತ್ತೀಚೆಗೆ ಬಿಎಲ್‌ಒ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದರು. ಇದರ ಬೆನ್ನಲ್ಲೇ ಶುಗರ್, ಬಿಪಿ ಹೆಚ್ಚಾಗಿ ತೀವ್ರ ಜ್ವರದಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ ಗುರುವಾರ ತಡ ರಾತ್ರಿ ಹೃದಯಾಘಾತವಾಗಿ ನಿಧನರಾಗಿದ್ದಾರೆ.

ಮೇಲಾಧಿಕಾರಿಗಳು ಎಸ್‌ಐಆರ್ ಪ್ರಕ್ರಿಯೆ ಬೇಗ ಬೇಗ ಮುಗಿಸುವಂತೆ ಒತ್ತಡ ಹಾಕುತ್ತಿದ್ದರು. ಈ ಕೆಲಸದಿಂದ ಬಿಡುಗಡೆ ಮಾಡಬಹುದಾ ಎಂದು ಕೇಳಿಕೊಂಡಿದ್ದರು ಎನ್ನಲಾಗಿದೆ.

ಶಿಕ್ಷಕಿ ಶಮಂತ ಕುಮಾರಿ ಅವರು ಮೇಲಾಧಿಕಾರಿಗಳ ಒತ್ತಡದಿಂದ ಹೃದಯಘಾತವಾಗಿ ಸಾವನ್ನಪ್ಪಿದ್ದಾರೆ ಎಂದು ಶಿಕ್ಷಕಿಯ ಕುಟುಂಬಸ್ಥರು ಆರೋಪಿಸಿದ್ದಾರೆ.

## ಶ್ರೇಷ್ಠ ಮ್ಯಾಂಡೋಲಿನ ವಾದಕ ಮತ್ತು ಮಾಂತ್ರಿಕ ಪ್ರಸಾದ್ ನಿಧನ



**ಸಂಜೆ ಸಮಯ ಸುದಿ (ಜುಲೈ 25)** ನಾಡಿನ ಶ್ರೇಷ್ಠ ಮ್ಯಾಂಡೋಲಿನ ವಾದಕ ಮತ್ತು ಮಾಂತ್ರಿಕ ಪ್ರಸಾದ್ ನಿಧನರಾಗಿದ್ದಾರೆ. ಸಂಗೀತ ಲೋಕದಲ್ಲಿ ಹೊಸ ಲೋಕ ಸೃಷ್ಟಿಸಿದ ಪ್ರಸಾದ್ ಸರಳ ವ್ಯಕ್ತಿಯಾಗಿದ್ದರು.

## ಖೋಟಾ ನೋಟು ಚಲಾಯಿಸಲು ಯತ್ನಿಸಿದ ಇಬ್ಬರು ಸೆರೆ

**ಸಂಜೆ ಸಮಯ ಸುದಿ (ಜುಲೈ 25)** ಚಿಕ್ಕಮಗಳೂರು: ಜಿಲ್ಲೆಯ ಮೂಡಿಗೆರೆ ತಾಲೂಕಿನ ನೂತನ ಲೇಔಟ್ ಪ್ರದೇಶದಲ್ಲಿ ಖೋಟಾ ನೋಟುಗಳನ್ನು ಚಲಾವಣೆಗೆ ಯತ್ನಿಸುತ್ತಿದ್ದ ಇಬ್ಬರು ಆರೋಪಿಗಳನ್ನು ಮೂಡಿಗೆರೆ ಪೊಲೀಸರು ಬಂಧಿಸಿದ್ದಾರೆ. ಇವರಿಂದ 200 ರೂ ಮುಖಬೆಲೆಯ ಒಟ್ಟು 18 ಸಾವಿರ ರೂ ಮೌಲ್ಯದ ನಕಲಿ ನೋಟುಗಳನ್ನು ವಶಪಡಿಸಿಕೊಳ್ಳಲಾಗಿದೆ. ಬಂಧಿತರನ್ನು ಮಂಗಳೂರಿನ ಮಹಮದ್ ಅಲಿ ಹಾಗೂ ಮೂಡಿಗೆರೆಯ ಮಹೇಶ್ ಎಂದು ಗುರುತಿಸಲಾಗಿದೆ. ಮಹಮದ್ ಅಲಿ ಮಂಗಳೂರಿನಿಂದ ನಕಲಿ ನೋಟುಗಳನ್ನು ತಂದು ಮೂಡಿಗೆರೆಯಲ್ಲಿ ಮಾರಾಟ ಹಾಗೂ ಚಲಾವಣೆಗೆ ಯತ್ನಿಸುತ್ತಿದ್ದಾಗ ಪೊಲೀಸರು ಕಾರ್ಯಾಚರಣೆ ನಡೆಸಿ ಇಬ್ಬರನ್ನೂ ವಶಕ್ಕೆ ಪಡೆದಿದ್ದಾರೆ.

## ಬರ ಪರಿಸ್ಥಿತಿ ಎದುರಿಸಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ

**ಸಂಜೆ ಸಮಯ ಸುದಿ (ಜುಲೈ 25) ಬೆಂಗಳೂರು:** ರಾಜ್ಯದಲ್ಲಿ ಮಳೆಯ ಕೊರತೆಯಿಂದ ಉದ್ಭವಿಸುತ್ತಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಹಾಗೂ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ.ಅನುದಾನ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಡಿಯುವ ನೀರಿನ ಪೂರೈಕೆಯನ್ನು ಸುಗಮಗೊಳಿಸುವ ಉದ್ದೇಶದಿಂದ ಈಗಾಗಲೇ ಪ್ರತಿ ಜಿಲ್ಲೆಗೆ 5 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು. ಜೊತೆಗೆ, ಬರ ನಿರ್ವಹಣೆಗೆ ಸಂಬಂಧಿಸಿದ ಕಾಮಗಾರಿಗಳಿಗಾಗಿ ವೈಯಕ್ತಿಕ ಠೇವಣಿ (PD) ಖಾತೆಗಳಲ್ಲಿ ರೂ.329 ಕೋಟಿ ಲಭ್ಯವಿದೆ ಎಂದು ಹೇಳಿದರು.

ಜುಲೈ 25ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರು ವಿಭಾಗದ ಬರ ಪರಿಸ್ಥಿತಿಯ ಪರಿಶೀಲನಾ ಸಭೆ ನಡೆಸಲಿದ್ದು, ನಂತರ ಮೈಸೂರು ವಿಭಾಗದಲ್ಲೂ ಇದೇ ರೀತಿಯ ಸಭೆ ನಡೆಯಲಿದೆ ಎಂದು ತಿಳಿಸಿದರು.

## 785800 ಮತದಾರರ ಎನ್ಯೂಮರೇಷನ್ ವಿತರಣೆ

**ಸಂಜೆ ಸಮಯ ಸುದಿ (ಜುಲೈ 25) ಬೆಂಗಳೂರು ನಗರ ಜಿಲ್ಲೆ:** ಜುಲೈ 24 ರಂದು ನಡೆದ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ – 2026 ಪ್ರಕ್ರಿಯೆ ಚುರಿಕಿನಿಂದ ಸಾಗಿದ್ದು, ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 7,85,800 ಮತದಾರರು ಇದ್ದು. ಒಟ್ಟು 785800 ಮತದಾರರ ಎನ್ಯೂಮರೇಷನ್ ಫಾರ್ಮ್ಗಳನ್ನು (EFs) ವಿತರಿಸಲಾಗಿದ್ದು, 281085 ಎನ್ಯೂಮರೇಷನ್ ಫಾರ್ಮ್ಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದು ಮತಾದಾರರ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ (ಅಂಜನಾಪುರ) ವಿಭಾಗದ ನೊಂದಣಾಧಿಕಾರಿ ಹಾಗೂ ಕಂದಾಯ ಅಧಿಕಾರಿಗಳು ತಿಳಿಸಿದರು.

ಈವರೆಗೆ ಮನೆ ಮನೆ ಭೇಟಿಯ ಸಂದರ್ಭದಲ್ಲಿ 17744 ಮಂದಿ ಮತದಾರರು ಮನೆಯಲ್ಲಿ ಗೈರು ಹಾಜರಿದ್ದು, 122798 ಮಂದಿ ಶಾಶ್ವತ ವಲಸೆ ಹಾಗೂ 16780 ಮಂದಿ ಮೃತಪಟ್ಟಿರುವುದು ವರದಿಯಾಗಿದೆ ಎಂದು ಚುನಾವಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೆಂಗಳೂರಿನಾಚೆಗೂ ಉದ್ಯಮ ವಿಸ್ತರಿಸಲು ಹೊಸ ನೀತಿ ರೂಪಿಸಲಾಗುವುದು: ಸಿಎಂ ಡಿಕೆಶಿ

# ನಮ್ಮ ಸರ್ಕಾರ ಎಐ ವಿವಿ ಸ್ಥಾಪಿಸಲು ನಿರ್ಧರಿಸಿದೆ

**ಸಂಜೆ ಸಮಯ ಸುದಿ (ಜುಲೈ 25) ಬೆಂಗಳೂರು:** ಮುಂಬರುವ 100 ದಿನಗಳೊಳಗೆ ಬೆಂಗಳೂರಿನಿಂದ ಆಚೆಗೂ ಕೈಗಾರಿಕೆಗಳು ತಮ್ಮ ಕಾರ್ಯಾಚರಣೆಯನ್ನು ವಿಸ್ತರಿಸಲು ಪ್ರೋತ್ಸಾಹಿಸುವ ಹೊಸ ನೀತಿ ರೂಪಿಸಲಾಗುವುದು ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.



ಬೆಂಗಳೂರು ಟೆಕ್ ಸಮಿಟ್ ಹಿನ್ನೆಲೆಯಲ್ಲಿ ನಿನ್ನೆ ಸಿಇಒಗಳ ಜೊತೆಗಿನ ಉಪಹಾರ ಕೂಟದ ಸಭೆಯಲ್ಲಿ ಮಾತನಾಡಿದ ಸಿಎಂ, ಬಿಯಾಂಡ್ ಬೆಂಗಳೂರು ಮೂಲಕ ಉದ್ಯಮ ಮಾಡುವ ವೆಚ್ಚವನ್ನು ಮತ್ತಷ್ಟು ಕಡಿಮೆ ಮಾಡುವ ಸಂಕಲ್ಪ ಮಾಡಿದ್ದೇವೆ. ಮುಂಬರುವ 100 ದಿನಗಳ ಒಳಗೆ, ಬೆಂಗಳೂರಿನಿಂದ ಆಚೆಗೂ ಕೈಗಾರಿಕೆಗಳು ತಮ್ಮ ಕಾರ್ಯಾಚರಣೆಯನ್ನು ವಿಸ್ತರಿಸಲು ಪ್ರೋತ್ಸಾಹಿಸುವ ಹೊಸ ನೀತಿಯನ್ನು ಸರ್ಕಾರ ತರಲಿದೆ. ಇದರಲ್ಲಿ ಕರ್ನಾಟಕದ ಇತರ ನಗರಗಳಲ್ಲಿ ಅತ್ಯಂತ ಕಡಿಮೆ ದರದಲ್ಲಿ ಅಂದರೆ ಪ್ರತಿ ಚದರ ಅಡಿಗೆ ಕೇವಲ 'ಫಿಫ್ಟಿ ಸೆಂಟ್ಸ್' (ಸುಮಾರು 40–45) ನಷ್ಟು ಅಗ್ಗದ ದರದಲ್ಲಿ ವಿಶ್ವದರ್ಜೆಯ ಕಚೇರಿ ಮೂಲಸೌಕರ್ಯಗಳನ್ನು ಒದಗಿಸಲಾಗುವುದು ಎಂದರು. ನಮ್ಮ ರಾಜ್ಯದ ಸಾಫ್ಟ್‌ವೇರ್ ರಫ್ತು 2024–25ನೇ ಸಾಲಿನಲ್ಲಿ 4.36 ಲಕ್ಷ ಕೋಟಿಯಷ್ಟಿದೆ. ಈ ವರ್ಷ ಅದು 5.50 ಲಕ್ಷ ಕೋಟಿ ಮುಟ್ಟುವ ನಿರೀಕ್ಷೆ ಇದೆ. ವಿದೇಶಿ ಹೂಡಿಕೆದಾರರು ಮುಂಬೈನಲ್ಲಿ ಉದ್ಯಮ ಮಾಡಲು 3.5 ಡಾಲರ್ ವೆಚ್ಚ ಮಾಡಿದರೆ, ಕರ್ನಾಟಕದಲ್ಲಿ ಉದ್ಯಮ ಮಾಡಲು ಕೇವಲ 1 ಡಾಲರ್ ವೆಚ್ಚ ಮಾಡಬಹುದಾಗಿದೆ. ಬಿಯಾಂಡ್ ಬೆಂಗಳೂರು ಮೂಲಕ ಈ ವೆಚ್ಚವನ್ನು ಮತ್ತಷ್ಟು ಕಡಿಮೆ ಮಾಡುವ ಸಂಕಲ್ಪ ಮಾಡಿದ್ದೇವೆ. ರಾಜ್ಯದ ಇತರೆ ನಗರಗಳಿಗೆ ಉದ್ಯಮಗಳನ್ನು ವಿಸ್ತರಿಸಿ ಕೇವಲ ಅರ್ಧ ಡಾಲರ್ ವೆಚ್ಚ ಆಗುವಂತೆ ಮಾಡುವ ಗುರಿ ಹೊಂದಿದ್ದೇವೆ ಎಂದು ತಿಳಿಸಿದರು.ಇದಕ್ಕಾಗಿ ಹುಬ್ಬಳ್ಳಿ, ಧಾರವಾಡ, ಮೈಸೂರು ಸೇರಿದಂತೆ ಎರಡು ಹಾಗೂ ಮೂರನೇ ಹಂತದ ನಗರಗಳಲ್ಲಿ ಎರಡು ಪಟ್ಟು ಎಫ್‌ಎಆರ್ ನೀಡಲು ತೀರ್ಮಾನಿಸಿದ್ದೇವೆ. ಈ ನಗರಗಳಲ್ಲೂ ನಾವು ನಿಮಗೆ ಅತ್ಯುತ್ತಮ ಮೂಲಸೌಕರ್ಯ ಒದಗಿಸುತ್ತೇವೆ. ವಿಶ್ವದರ್ಜೆಯ ಪ್ರತಿಭೆಗಳು, ನಿಮ್ಮ ಸಮಸ್ಯೆಗಳಿಗೆ ಪರಿಹಾರ ನೀಡಲಿದ್ದೇವೆ. ನಾವು ಸುದೀರ್ಘ ಕಾಲದ ಸಂಬಂಧ ಹೊಂದಲು ಬಯಸುತ್ತೇವೆ. ಇದಕ್ಕಾಗಿ ನಾವು ನೀತಿ ರೂಪಿಸುತ್ತಿದ್ದೇವೆ. ಬೆಂಗಳೂರಿನಲ್ಲಿರುವ ಪ್ರತಿಭಾನ್ವಿತ ಮಾನವ ಸಂಪನ್ಮೂಲ ಬೇರೆ ಎಲ್ಲೂ ಇಲ್ಲ ಎಂದು ತಿಳಿಸಿದರು.

## ಭವಾನಿ ಲಕ್ಷ್ಮೀನಾರಾಯಣ್‌ಗೆ ಪತ್ರಕರ್ತರ ಸಂಘದ ಸನ್ಮಾನ

**2026ನೇ ಸಾಲಿನ ಕೆಯುಡಬ್ಲ್ಯೂಜೆಪ್ರಕಟಿಸಿರುವ ಪಿ.ಆರ್.ರಾಮಯ್ಯ ಸ್ಮಾರಕ ದತ್ತಿ ಪ್ರಶಸ್ತಿಗೆ ಭವಾನಿ ಲಕ್ಷ್ಮೀನಾರಾಯಣ್ ಆಯ್ಕೆ**



> ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಈ ಬಾರಿ ನನ್ನನ್ನು ಪಿ.ಆರ್.ರಾಮಯ್ಯ ಸ್ಮಾರಕ ದತ್ತಿ ಪ್ರಶಸ್ತಿಗೆ ಆಯ್ಕೆ ಮಾಡಿರುವುದಕ್ಕೆ ತುಂಬ ಸಂತೋಷವಾಗಿದೆ. ಜಿಲ್ಲಾ ಹಾಗೂ ರಾಜ್ಯ ಸಂಘಕ್ಕೆ ಆಭಾರಿ ಆಗಿದ್ದೇನೆ.
> **ಭವಾನಿ ಲಕ್ಷ್ಮೀನಾರಾಯಣ್, ಹಿರಿಯ ಪತ್ರಕರ್ತರು.**

**ಸಂಜೆ ಸಮಯ ಸುದ್ದಿ ಚಿಕ್ಕಬಳ್ಳಾಪುರ:** ಜಿಲ್ಲೆಯ ಹಿರಿಯ ಪತ್ರಕರ್ತರು ಹಾಗೂ ಖ್ಯಾತ ಛಾಯಾ ಗ್ರಾಹಕರಾದ ಭವಾನಿ ಲಕ್ಷ್ಮೀನಾರಾಯಣ್‌ಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಪ್ರಕಟಿಸಿರುವ 2026ನೇ ಸಾಲಿನ ದತ್ತಿ ಪ್ರಶಸ್ತಿಗಳಲ್ಲಿ ಪಿ.ಆರ್.ರಾಮಯ್ಯ ಸ್ಮಾರಕ ದತ್ತಿ ಪ್ರಶಸ್ತಿಗೆ ಆಯ್ಕೆಗೊಂಡ ಹಿನ್ನಲೆಯಲ್ಲಿ ಶುಕ್ರವಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಅವರನ್ನು ಸನ್ಮಾನಿಸಿ ಅಭಿನಂದಿಸಿತು.

ನಗರದ ಬಿಬಿ ರಸ್ತೆಯಲ್ಲಿರುವ ಅವರ ನಿವಾಸಕ್ಕೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು, ಜಿಲ್ಲಾ ಕೇಂದ್ರದ ಹಿರಿಯ ಪತ್ರಕರ್ತರು ತೆರಳಿ ದತ್ತಿ ಪ್ರಶಸ್ತಿಗೆ ಭಜನಾರಾಗಿರುವ ಭವಾನಿ ಲಕ್ಷ್ಮೀನಾರಾಯಣ್ ಅವರಿಗೆ ಮೈಸೂರು ಪೇಟೆ, ಶಾಲು, ಹಾರ ಹಾಕಿ ಸನ್ಮಾನಿಸಿ ಪ್ರಶಸ್ತಿ ಪ್ರಧಾನ ಸಮಾರಂಭಕ್ಕೆ ಆಹ್ವಾನಿಸಿತು. ಈ ವೇಳೆ ಮಾತನಾಡಿದ ಹಿರಿಯ ಪತ್ರಕರ್ತರಾದ ಎಚ್.ವಿ.ಸೋಮಶೇಖರ್ ಹಾಗೂ ಟಿ.ಎಸ್.ನಾಗೇಂದ್ರ ಬಾಬು ಅವರು ಮಾತನಾಡಿ, ಭವಾನಿ ಲಕ್ಷ್ಮೀನಾರಾಯಣ್ ಅವರು ಕೇವಲ ಪತ್ರಕರ್ತರಾಗದೇ ಛಾಯಾಗ್ರಾಹಕರಾಗಿ ನಾಡಿನಾದ್ಯಂತ ತಮ್ಮದೇ ಆದ ವಿಶೇಷ ಛಾಪು ಮೂಡಿಸಿದ್ದಾರೆ. ಕನ್ನಡ ಸಿನಿಮಾ ಕ್ಷೇತ್ರದ ಅನೇಕ ದಿಗ್ಗಜ ನಟ, ನಟಿಯರ ಭಾವಚಿತ್ರಗಳನ್ನು ತೆಗೆದಿರುವ ಕೀರ್ತಿ ಅವರಿಗೆ ಸಲ್ಲುತ್ತದೆ. ವರ ನಟ ರಾಜ್ ಕುಮಾರ್ ರವರ ಕುಟುಂಬದೊಂದಿಗೂ ನಿಕಟ ಸಂಪರ್ಕ ಹೊಂದಿದ್ದ ಅವರು ಜಿಲ್ಲೆಯ ಪತ್ರಿಕೋದ್ಯಮ ಹಾಗೂ ಸಿನಿಮಾ ಕ್ಷೇತ್ರಕ್ಕೆ ತಮ್ಮದೇ ಆದ ಅಪೂರ್ವವಾದ ಕೊಡುಗೆಗಳನ್ನು ನೀಡಿದ್ದು, ಅವರಿಗೆ ಈ ಬಾರಿ ಕೆಯುಡಬ್ಲ್ಯೂಜೆ ದತ್ತಿ ಪ್ರಶಸ್ತಿ ಬಂದಿರುವುದು ಸಂತಸ ತಂದಿದೆ ಎಂದು ಹೇಳಿದರು. ಈ ವೇಳೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ವಿ.ರವಿಕುಮಾರ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜಪ್ಪ, ಜಿಲ್ಲಾ ಉಪಾಧ್ಯಕ್ಷರಾದ ಮುಬಶೀರ್ ಅಹಮ್ಮದ್, ಜಿಲ್ಲಾ ಕಾರ್ಯದರ್ಶಿ ಎಂ.ಆನಂದ್, ಜಿಲ್ಲಾ ಕಾರ್ಯಕಾರಣಿ ಮಂಡಳಿ ಸದಸ್ಯರಾದ ಕೆ.ಪಿ.ನವಮೋಹನ್, ಕೆ.ಕುಮಾರಸ್ವಾಮಿ, ಎನ್. ಚಂದ್ರೇಗೌಡ, ಡಿ.ದೇವರಾಜ್, ಹಿರಿಯ ಪತ್ರಕರ್ತರಾದ ಶಿಡ್ಲಘಟ್ಟದ ಸಿ.ವಿ.ಲಕ್ಷ್ಮಣರಾಜು ಸೇರಿದಂತೆ ಭವಾನಿ ಲಕ್ಷ್ಮೀನಾರಾಯಣ್ ರವರ ಕುಟುಂಬದ ಸದಸ್ಯರು ಮತ್ತಿತರರು ಉಪಸ್ಥಿತರಿದ್ದರು.

## 'ಕನಿಷ್ಠ ಪಕ್ಷ ಈಗಲಾದರೂ ತಮ್ಮ ಅಭಿಪ್ರಾಯ ಹೇಳಿದ್ದಾರೆ': ಮೌನ ಮುರಿದ ಮೋದಿಗೆ ಡಿಕೆಶಿ ಧನ್ಯವಾದ

**ಸಂಜೆ ಸಮಯ ಸುದಿ (ಜುಲೈ 25) ಬೆಂಗಳೂರು:** ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಗೆ ಸಂಬಂಧಿಸಿದಂತೆ ಕೊನೆಗೂ ಮೌನ ಮುರಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶುಕ್ರವಾರ ಧನ್ಯವಾದ ಅರ್ಪಿಸಿದ್ದಾರೆ. ಆದರೆ ಈ ವಿಷಯದ ಬಗ್ಗೆ ಇಷ್ಟು ದಿನ ಮೌನವಾಗಿದ್ದಕ್ಕಾಗಿ ಪ್ರಧಾನಿಯನ್ನು ಟೀಕಿಸಿದ್ದಾರೆ.

ಪ್ರಶ್ನೆ ಪತ್ರಿಕೆ ಸೋರಿಕೆ ವಿರುದ್ಧ ಕಠಿಣ ಕಠಿಣ ಕ್ರಮಗಳನ್ನು ಹೊಂದಿರುವ ಮಸೂದೆಯನ್ನು ಮುಂದಿನ ವಾರ ಸಂಸತ್ತಿನಲ್ಲಿ ಮಂಡಿಸಲಾಗುವುದು ಎಂದು ಪ್ರಧಾನಿ ಮೋದಿ ಅವರು ಗುರುವಾರ ರಾತ್ರಿ ವಿಡಿಯೋ ಸಂದೇಶದ ಮೂಲಕ ಘೋಷಿಸಿದ್ದಾರೆ.

ಮೋದಿ ವಿಡಿಯೋ ಸಂದೇಶಕ್ಕೆ ಪ್ರತಿಕ್ರಿಯಿಸಿದ ಸಿಎಂ ಶಿವಕುಮಾರ್, "ಕನಿಷ್ಠ ಪಕ್ಷ(ಪ್ರಧಾನಿ) ಈಗಲಾದ್ರೂ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿರುವುದಕ್ಕೆ ನನಗೆ ತುಂಬಾ ಸಂತೋಷವಾಗಿದೆ. ಸುಮಾರು ಹದಿನೈದು ದಿನಗಳು ಅಥವಾ ಒಂದು ತಿಂಗಳ ನಂತರ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅದು ಮುಖ್ಯ. ನಾವೆಲ್ಲರೂ ನಮ್ಮ ಮಕ್ಕಳು ಮತ್ತು ಯುವಕರ ಭವಿಷ್ಯಕ್ಕಾಗಿ ಕೆಲಸ ಮಾಡುತ್ತೇವೆ. ಕನಿಷ್ಠ ಈಗ ಅವರು ಇಡೀ ದೇಶದ ಮುಂದೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅವರಿಗೆ ಧನ್ಯವಾದಗಳು" ಎಂದರು.

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಖಂಡಿಸಿ ಮತ್ತು ಈ ಸಂಬಂಧ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ರಾಜೀನಾಮೆ ನೀಡಬೇಕು ಎಂದು ದೆಹಲಿಯಲ್ಲಿ ಸಿಜೆಪಿ ನಡೆಸುತ್ತಿರುವ ಪ್ರತಿಭಟನೆ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ಪ್ರಧಾನಿಯವರ ಈ ಹೇಳಿಕೆ ಹೊರಬಿದ್ದಿದೆ.

## ಸದ್ಗುರುಗಳ ಸೇವೆ ದೇಶಕ್ಕೇ ಮಾದರಿ: ಛತ್ತೀಸಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ








**ಸಂಜೆ ಸಮಯ ಸುದ್ದಿ ಚಿಕ್ಕಬಳ್ಳಾಪುರ :** ಮೌಲ್ಯಾಧಾರಿತ ಶಿಕ್ಷಣವನ್ನು ವಿಶ್ವದಾದ್ಯಂತ ಪಸರಿಸುವ ಮೂಲಕ ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ನಡೆಸುತ್ತಿರುವ ಸೇವಾಕಾರ್ಯ ದೇಶಕ್ಕೇ ಮಾದರಿಯಾಗಿದೆ ಎಂದು ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಹೇಳಿದರು.

ಸತ್ಯ ಸಾಯಿ ಗ್ರಾಮದ ಪ್ರೇಮಾಮೃತಂ ಸಭಾಭವನದಲ್ಲಿ ನಡೆದ 'ಶೈಕ್ಷಣಿಕ ಮೌಲ್ಯಗಳು' ಕುರಿತ ಅಂತಾರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸದ್ಗುರುಗಳು ಸಲ್ಲಿಸುತ್ತಿರುವ ಕೊಡುಗೆ ಸಮಾಜಕ್ಕೆ ಪ್ರೇರಣೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮೌಲ್ಯಾಧಾರಿತ ಶಿಕ್ಷಣದ ಮಹತ್ವವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾರುವ ಉದ್ದೇಶದಿಂದ ಇಂತಹ ಸಮ್ಮೇಳನಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ. ತಮ್ಮ ತವರು ರಾಜ್ಯ ಛತ್ತೀಸ್‌ಗಢ ಸೇರಿದಂತೆ ದೇಶದ ವಿವಿಧ ಭಾಗಗಳಲ್ಲಿ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಸದ್ಗುರುಗಳು ಕೈಗೊಂಡಿರುವ ಸೇವಾ ಯೋಜನೆಗಳು ಆದರ್ಶಪ್ರಾಯವಾಗಿವೆ ಎಂದು ಹೇಳಿದರು. ಭಗವಾನ್ ಶ್ರೀ ಸತ್ಯ ಸಾಯಿ ಬಾಬಾ ಅವರ ಪ್ರೀತಿ, ಕರುಣೆ ಮತ್ತು ಸೇವೆಯ ಪರಂಪರೆಯನ್ನು ಸದ್ಗುರು ಶ್ರೀ ಮಧುಸೂದನ ಸಾಯಿ ಮುಂದುವರಿಸಿಕೊಂಡು ಹೋಗುತ್ತಿದ್ದಾರೆ. ಭಾರತೀಯ ಸಂಸ್ಕೃತಿಯ ಗುರು–ಶಿಷ್ಯ ಪರಂಪರೆಯ ಮಹತ್ವವನ್ನು ವಿಶ್ವಕ್ಕೆ ಪರಿಚಯಿಸುವ ಕಾರ್ಯವನ್ನು ಅವರು ಯಶಸ್ವಿಯಾಗಿ ನಿರ್ವಹಿಸುತ್ತಿದ್ದಾರೆ ಎಂದು ಶ್ಲಾಘಿಸಿದರು. ಮುದ್ದೇನಹಳ್ಳಿಯ ಸತ್ಯ ಸಾಯಿ ಗ್ರಾಮವು ಶಿಕ್ಷಣ ಕ್ಷೇತ್ರದಲ್ಲಿ ಹೊಸ ಇತಿಹಾಸ ನಿರ್ಮಿಸಿದೆ. ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿರುವುದರ ಜೊತೆಗೆ ಛತ್ತೀಸ್‌ಗಢದಲ್ಲಿ ಆಸ್ಪತ್ರೆ ಹಾಗೂ ನರ್ಸಿಂಗ್ ಕಾಲೇಜು ಆರಂಭಿಸಿ ಯುವಜನರ ಭವಿಷ್ಯ ರೂಪಿಸುವ ಕಾರ್ಯದಲ್ಲಿ ಸದ್ಗುರುಗಳು ತೊಡಗಿದ್ದಾರೆ. ಜುಲೈ 26ರಂದು ಜನ್ಮದಿನ ಆಚರಿಸಿಕೊಳ್ಳಲಿರುವ ಸದ್ಗುರು ಶ್ರೀ ಮಧುಸೂದನ ಸಾಯಿ ಅವರಿಗೆ ಛತ್ತೀಸ್‌ಗಢದ ಮೂರು ಕೋಟಿ ಜನರ ಪರವಾಗಿ ಶುಭಾಶಯಗಳನ್ನು ಸಲ್ಲಿಸುತ್ತೇನೆ ಎಂದರು.

ಬಳಿಕ ಮಾತನಾಡಿದ ಸದ್ಗುರು ಶ್ರೀ ಮಧುಸೂದನ ಸಾಯಿ, "ಪ್ರೀತಿಸುವುದನ್ನು ಕಲಿಸುವುದೇ ಮೌಲ್ಯ ಶಿಕ್ಷಣ. ಮಕ್ಕಳ ಮೇಲೆ ಪ್ರೀತಿ ಇಲ್ಲದವರಿಗೆ ಬೋಧಿಸುವ ಹಕ್ಕಿಲ್ಲ" ಎಂದು ಹೇಳಿದರು.

ಪುಸ್ತಕಗಳು ಜ್ಞಾನವನ್ನು ನೀಡುತ್ತವೆ. ಆದರೆ ಶಿಕ್ಷಕರು ಪ್ರೀತಿಯಿಂದ ಬದುಕನ್ನು ರೂಪಿಸುತ್ತಾರೆ. ಶಿಕ್ಷಣವೆಂದರೆ ಕೇವಲ ಪಾಠ ಹೇಳುವುದಲ್ಲ, ವಿದ್ಯಾರ್ಥಿಗಳಲ್ಲಿ ಪ್ರೀತಿ, ಕರುಣೆ ಮತ್ತು ಉತ್ತಮ ಮೌಲ್ಯಗಳನ್ನು ಬೆಳೆಸುವ ಪ್ರಕ್ರಿಯೆಯಾಗಿದೆ ಎಂದು ತಿಳಿಸಿದರು. ಪರಿಸರದ ಮೇಲಿನ ಪ್ರೀತಿ, ದೇಶಭಕ್ತಿ, ಆಧ್ಯಾತ್ಮಿಕತೆ, ಎಲ್ಲರನ್ನೂ ಪ್ರೀತಿಸುವ ಮನೋಭಾವ ಹಾಗೂ ಆತ್ಮಜ್ಞಾನ ಎಂಬ ಐದು ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸತ್ಯ ಸಾಯಿ ಗ್ರಾಮಕ್ಕೆ ಛತ್ತೀಸ್‌ಗಢದ ಮುಖ್ಯಮಂತ್ರಿಯೊಬ್ಬರು ಇದೇ ಮೊದಲ ಬಾರಿಗೆ ಭೇಟಿ ನೀಡಿರುವುದು ಸಂತಸದ ಸಂಗತಿ. ಛತ್ತೀಸ್‌ಗಢದಲ್ಲಿ ಆಸ್ಪತ್ರೆ ಹಾಗೂ ನರ್ಸಿಂಗ್ ಕಾಲೇಜು ಸೇರಿದಂತೆ ವಿವಿಧ ಸೇವಾ ಯೋಜನೆಗಳಿಗೆ ಅಲ್ಲಿನ ಸರ್ಕಾರ ನೀಡುತ್ತಿರುವ ಸಹಕಾರಕ್ಕೆ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಸರ್ಕಾರ, ಸಮಾಜ ಹಾಗೂ ಸೇವಾ ಸಂಸ್ಥೆಗಳು ಕೈಜೋಡಿಸಿದಾಗ ಮಾತ್ರ ಸಮಾಜಮುಖಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ವಿದ್ಯಾರ್ಥಿಗಳಿಗಾಗಿ ಸಿದ್ಧಪಡಿಸಿರುವ 'Be Good, See Good, Do Good' (ಒಳ್ಳೆಯವರಾಗಿ, ಒಳ್ಳೆಯದನ್ನು ನೋಡಿ, ಒಳ್ಳೆಯ ಕೆಲಸ ಮಾಡಿ) ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಮೌಲ್ಯ ಶಿಕ್ಷಣಕ್ಕೆ ಸಂಬಂಧಿಸಿದ 'ಇಂಟರ್‌ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಹ್ಯೂಮನ್ ವ್ಯಾಲ್ಯೂಸ್ ಎಜುಕೇಶನ್' ವೆಬ್‌ಸೈಟ್‌ಗೂ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ಸತ್ಯ ಸಾಯಿ ಲೋಕಸೇವಾ ಗುರುಕುಲಂನ ಮುಖ್ಯ ಮಾರ್ಗದರ್ಶಕರಾದ ಬಿ.ಎನ್. ನರಸಿಂಹಮೂರ್ತಿ, ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಉಪಕುಲಪತಿ **ಪ್ರೊ. ಕೆ. ಶ್ರೀಕಂಠಮೂರ್ತಿ, 32 ದೇಶಗಳ ಶಿಕ್ಷಣ ತಜ್ಞರು, 19 ವಿಶ್ವವಿದ್ಯಾಲಯಗಳ ಪ್ರತಿನಿಧಿಗಳು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

### 32 ದೇಶಗಳ ಶಿಕ್ಷಣ ತಜ್ಞರ ಭಾಗಿ

'ಶೈಕ್ಷಣಿಕ ಮೌಲ್ಯಗಳು' ಅಂತಾರಾಷ್ಟ್ರೀಯ ಸಮ್ಮೇಳನದ ಎರಡನೇ ದಿನ 32 ದೇಶಗಳ ಶಿಕ್ಷಣ ತಜ್ಞರು ಹಾಗೂ 19 ವಿಶ್ವವಿದ್ಯಾಲಯಗಳ ಪ್ರತಿನಿಧಿಗಳು ಭಾಗವಹಿಸಿದ್ದರು. "ಮಾನವರು ಮಾನವರಾಗಬೇಕು. ಮೌಲ್ಯಗಳ ಮೂಲಕ ಒಂದು ಪಯಣ" ಎಂಬ ಧ್ಯೇಯವಾಕ್ಯದಡಿ ನಡೆದ ವಿವಿಧ ಗೋಷ್ಠಿಗಳಲ್ಲಿ ಮೌಲ್ಯಾಧಾರಿತ ಶಿಕ್ಷಣ, ಉನ್ನತ ಶಿಕ್ಷಣ ಹಾಗೂ ಸಮಾಜ ಪರಿವರ್ತನೆಯಲ್ಲಿ ಶಿಕ್ಷಣದ ಪಾತ್ರದ ಕುರಿತು ಚರ್ಚೆಗಳು ನಡೆದವು.

## ಮೊಬೈಲ್–ಮಾದಕ ವ್ಯಸನದಿಂದ ದೂರವಿದ್ದಾಗಲೇ ವಿದ್ಯಾರ್ಥಿ ಜೀವನಕ್ಕೆ ಅರ್ಥ: ಚಲಪತಿ ಗೌಡ










**ಸಂಜೆ ಸಮಯ ಸುದ್ದಿ ಚಿಕ್ಕಬಳ್ಳಾಪುರ:** ಇಂದಿನ ವಿದ್ಯಾರ್ಥಿಗಳು ಮೊಬೈಲ್ ಮತ್ತು ಮಾದಕ ವ್ಯಸನದಂತಹ ಆಕರ್ಷಣೆಗಳಿಂದ ದೂರವಿದ್ದು, ಶಿಕ್ಷಣವನ್ನೇ ಜೀವನದ ಮೊದಲ ಆದ್ಯತೆಯಾಗಿ ಸ್ವೀಕರಿಸಬೇಕು. ವಿದ್ಯಾರ್ಥಿ ಜೀವನದಲ್ಲಿ ವ್ಯರ್ಥವಾದ ಒಂದು ಕ್ಷಣವೂ ಮತ್ತೆ ಮರಳಿ ಬರುವುದಿಲ್ಲ. ಆದ್ದರಿಂದ ಶಿಸ್ತು, ಏಕಾಗ್ರತೆ ಮತ್ತು ನಿರಂತರ ಪರಿಶ್ರಮದಿಂದ ಗುರಿಯತ್ತ ಸಾಗಿದರೆ ಮಾತ್ರ ಯಶಸ್ಸು ಸಾಧ್ಯ ಎಂದು ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಪಾತಮುತ್ತುಕದಹಳ್ಳಿ ಚಲಪತಿ ಗೌಡ ಹೇಳಿದರು.

ನಗರದ ಗಾಂಧಿ ಭವನದಲ್ಲಿ ಶನಿವಾರ ಪೂರ್ಣ ಪ್ರಜ್ಞಾ ಪದವಿಪೂರ್ವ ಕಾಲೇಜು ಆಯೋಜಿಸಿದ್ದ 'ನವಯಾನ' ಫ್ರೆಶರ್ಸ್ ಡೇ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೊಬೈಲ್ ಬಳಕೆ ಅಗತ್ಯಕ್ಕೆ ಮಾತ್ರ ಸೀಮಿತವಾಗಿರಬೇಕು. ಅದು ಚಟವಾಗಿ ಬದಲಾಗುತ್ತಿರುವುದು ವಿದ್ಯಾರ್ಥಿಗಳ ಭವಿಷ್ಯಕ್ಕೆ ದೊಡ್ಡ ಸವಾಲಾಗಿದೆ. ಯಾವುದೇ ಶಿಕ್ಷಣದಲ್ಲೂ ಆಸಕ್ತಿ, ಶ್ರದ್ಧೆ ಮತ್ತು ನಿರಂತರ ಅಭ್ಯಾಸದಿಂದ ಮಾತ್ರ ಉತ್ತಮ ಫಲಿತಾಂಶ ಸಾಧಿಸಲು ಸಾಧ್ಯ. ವಿದ್ಯಾರ್ಥಿ ಜೀವನವೆಂಬ ಸುವರ್ಣಾವಕಾಶವನ್ನು ನಿರ್ಲಕ್ಷಿಸಿದರೆ ಭವಿಷ್ಯಕ್ಕೆ ತಾವೇ ಅಡ್ಡಿಯಾಗುವ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎಂದು ಎಚ್ಚರಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸರ್ಕಾರಿ ಪದವಿ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಬಿ.ವಿ. ಕೃಷ್ಣ, ಪಿಯುಸಿ ಶಿಕ್ಷಣವು ಜೀವನದ ನಿರ್ಣಾಯಕ ಹಂತವಾಗಿದೆ. ಸಾಧನೆಗೆ ಯಾವುದೇ ಅಡ್ಡದಾರಿಗಳಿಲ್ಲ. ಸಮಯದ ಸದ್ಬಳಕೆ, ಶಿಸ್ತು ಹಾಗೂ ಕಠಿಣ ಪರಿಶ್ರಮವೇ ಯಶಸ್ಸಿನ ನಿಜವಾದ ಮಂತ್ರ. ತಂದೆ–ತಾಯಿಯ ತ್ಯಾಗವನ್ನು ಗೌರವಿಸಿ ವಿದ್ಯಾಭ್ಯಾಸದತ್ತ ಸಂಪೂರ್ಣ ಗಮನ ಹರಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಇಂದಿರಾ ನಾರಾಯಣ್ ಶಿಕ್ಷಣ ಸಂಸ್ಥೆಗಳ ಸದಸ್ಯೆ ಡಾ. ವಿಷ್ಣುಪ್ರಿಯಾ ಮಾತನಾಡಿ, ಜೆನ್–ಜಿ ಯುಗದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿಶ್ವದಾದ್ಯಂತ ಅನೇಕ ಅವಕಾಶಗಳಿವೆ. ಅವುಗಳನ್ನು ಸದುಪಯೋಗಪಡಿಸಿಕೊಳ್ಳಲು ಆತ್ಮವಿಶ್ವಾಸ, ಕೌಶಲಾಭಿವೃದ್ಧಿ ಹಾಗೂ ಗುರಿಸಾಧನೆಯ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು. ವಿದ್ಯಾರ್ಥಿಗಳ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

ಇಂದಿರಾ ನಾರಾಯಣ್ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಎನ್. ವೆಂಕಟೇಶ್, ಕಾರ್ಯದರ್ಶಿ ಎಂ.ಎಸ್. ಶೈಲಜಾ, ಉಪನ್ಯಾಸಕರಾದ ಉಮೇಶ್, ಅಂಜಿ ಹಾಗೂ ಬೋಧಕ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

## ಹೆದ್ದಾರಿ ಬದಿಯ ಗ್ರಾನೈಟ್ ಮಳಿಗೆ, ಜಾಹೀರಾತು ಫಲಕಕ್ಕೆ ಶುಲ್ಕ ವಿಧಿಸಿ: ಖಂಡ್ರೆ

**ಸಂಜೆ ಸಮಯ ಸುದಿ (ಜುಲೈ 25) ಬೆಂಗಳೂರು:** ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿರುವ ಹೆದ್ದಾರಿ, ರಾಜ್ಯ ಮುಖ್ಯರಸ್ತೆಯ ಪಕ್ಕದಲ್ಲಿ ವಾಣಿಜ್ಯ ಚಟುವಟಿಕೆ ನಡೆಸುವ ಗ್ರಾನೈಟ್, ಮಾರ್ಬಲ್ ಮಾರಾಟದ ತಾತ್ಕಾಲಿಕ ಮಳಿಗೆಗಳು, ಢಾಬಾಗಳು, ಹೋಟೆಲ್ ಇತ್ಯಾದಿಗಳಿಗೆ ನಿಯಮಾನುಸಾರ ಶುಲ್ಕ, ತೆರಿಗೆ ವಿಧಿಸಲು ಸಮಿತಿ ರಚಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.



ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಸಚಿವರು, ಹೆದ್ದಾರಿ, ಜಿಲ್ಲಾ ಮುಖ್ಯರಸ್ತೆ ಪಕ್ಕದಲ್ಲಿರುವ ಗ್ರಾಮಪಂಚಾಯತಿ ವ್ಯಾಪ್ತಿಯ ಕಂದಾಯ ಭೂಮಿಯಲ್ಲಿ ತಾತ್ಕಾಲಿಕ ಶೆಡ್ ನಿರ್ಮಿಸಿ ಗ್ರಾನೈಟ್ ಇತ್ಯಾದಿ ಮಾರಾಟ ಮಾಡುವ, ಹೋಟೆಲ್, ಢಾಬಾ, ಅಂಗಡಿ, ಮಳಿಗೆಗಳು ಕಾರ್ಯನಿರ್ವಹಿಸುತ್ತಿದ್ದರೂ ಇದರಿಂದ ಪಂಚಾಯತಿಗಳಿಗೆ ಸೂಕ್ತ ಆದಾಯ ಬರುತ್ತಿಲ್ಲ ಹೀಗಾಗಿ ಶುಲ್ಕ ವಿಧಿಸುವ ಬಗ್ಗೆ ನಿರ್ದೇಶನ ನೀಡಿದ್ದಾರೆ. ಇದರ ಜೊತೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಆಯಕಟ್ಟಿನ ಜಾಗಗಳಲ್ಲಿ ಬೃಹತ್ ಫಲಕಗಳನ್ನು ಹಾಕಿ ಜಾಹೀರಾತುಗಳನ್ನು ಪ್ರದರ್ಶಿಸಲಾಗುತ್ತದೆ. ಮನೆಗಳಿಗೂ ಬಣ್ಣ ಬಳಿದು ಜಾಹೀರಾತು ಪ್ರದರ್ಶಿಸಲಾಗುತ್ತದೆ. ಆದರೆ ವಾಣಿಜ್ಯ ವಹಿವಾಟು ನಡೆಯುವ ಈ ಎಲ್ಲ ಪ್ರದೇಶ ವಾಣಿಜ್ಯ ಉದ್ದೇಶಕ್ಕೆ ಭೂಪರಿವರ್ತನೆ ಆಗಿರುವುದಿಲ್ಲ. ಈ ನಿಟ್ಟಿನಲ್ಲಿ ಸಮಿತಿ ರಚಿಸಿ, ವರದಿ ಪಡೆದು ವಾಣಿಜ್ಯ ವಹಿವಾಟು ಮತ್ತು ಜಾಹೀರಾತು ಪ್ರದರ್ಶನದ ಭೂಮಿಗೆ ಶುಲ್ಕ ವಿಧಿಸಲು ನಿಯಮ ರೂಪಿಸುವಂತೆ ಸೂಚನೆ ನೀಡಿದ್ದಾರೆ.

Published and Owned by J.H. Anil Kumar. Publisher at : #808, 11th "A" Cross , ( V.B.H.C.S) SBM Colony, B.S.K 3rd Stage , Girinagar 4th Block , Bangalore - 560 050. Printed at Vrushabha Printers & Publisher: #808, 11th "A" Cross , ( V.B.H.C.S) SBM Colony, B.S.K 3rd Stage , Girinagar 4th Block , Bangalore - 560 050. EDITOR : J.H. ANIL KUMAR Phone : 9148998975